ದಶಮಾನ ಕಂಡ ಜಿಲ್ಲೆಯ ಮೊದಲ ಪ್ರಾದೇಶಿಕ ದಿನ ಪತ್ರಿಕೆ

KB 12 YEARS 2013

ದಾವಣಗೆರೆ, ಉಡುಪಿ, ಶಿವಮೊಗ್ಗ, ಹಾಸನ, ಚಿಕ್ಕಮಗಳೂರು, ಗದಗ, ಬೆಂಗಳೂರು ಗ್ರಾಮಾಂತರ

# ಕನ್ನಡ ಭಾರತಿ

ನೊಂದವರ ನೈಜ ಕನ್ನಡಿ

ಸಂಪಾದಕರು : ಮಲ್ಲಿಕಾರ್ಜುನ್ ಕಬ್ಬೂರು

ಸಂಪುಟ : 13 ಸಂಚಿಕೆ : 49
4-8-2025 ಸೋಮವಾರ

₹1 KA/SK/DVG-006/2023-2025 KARKAN/2013/50807 KANNADA BHARATHI REGIONAL DALIY DAVANAGERE dvgkanndabharathi@gmail.com Page : 6 VOLUME : 13 ISSUE : 49

## ಪ್ರಜ್ವಲ್ ಖೈದಿ ನಂ. 15528

**ಬೆಂಗಳೂರು,ಆ.3:** ಮನೆಗೆಲಸದ ಮಹಿಳೆಯ ಮೇಲೆ



ಅತ್ಯಾಚಾರವೆಸಗಿ ಆಜೀವ ಜೈಲು ಶಿಕ್ಷೆಗೆ ಗುರಿಯಾಗಿರುವ ಮಾಜಿ ಸಂಸದ ಪ್ರಜ್ವಲ್‌ರೇವಣ್ಣನ ಜೀವನಶೈಲಿ ಇನ್ನು ಮುಂದೆ ಜೈಲಿನಲ್ಲಿ ಬದಲಾಗಿದ್ದು ಸಜಾಬಂಧಿ ಖೈದಿಯಾಗಿ ಅವರನ್ನು ಪರಿಗಣಿಸಲಾಗುತ್ತದೆ.

ಜನಪ್ರತಿನಿಧಿಗಳ ವಿಶೇಷ ನ್ಯಾಯಾಲಯದಿಂದ ಆಜೀವ ಜೈಲು ಶಿಕ್ಷೆಗೆ ಗುರಿಯಾದ ಪ್ರಜ್ವಲ್‌ರೇವಣ್ಣ ಅವರನ್ನು ನಿನ್ನೆ ನ್ಯಾಯಾಲಯದಿಂದ ನೇರವಾಗಿ ಪರಪ್ಪನ ಅಗ್ರಹಾರ ಕಾರಾಗೃಹಕ್ಕೆ ಕರೆದೊಯ್ಯಲಾಗಿದ್ದು, ಅಲ್ಲಿ ಅವರಿಗೆ ಜೈಲು ಅಧಿಕಾರಿಗಳು ಖೈದಿ ನಂಬರ್ ನೀಡಿದ್ದಾರೆ.

ಪ್ರಜ್ವಲ್‌ರೇವಣ್ಣ ಅವರ ಖೈದಿ ನಂಬರ್ 15528 ಆಗಿದ್ದು, ಇಂದಿನಿಂದ ಅವರು ಜೈಲಿನಲ್ಲಿ ಸಜಾಬಂಧಿ ಖೈದಿಗಳಿಗೆ ನೀಡುವ ಬಿಳಿ ವಸ್ತ್ರವನ್ನು ಧರಿಸಿ ಜೈಲು ನಿಯಮಾವಳಿ ಅನುಸಾರ ಜೈಲಿನ ಅಧೀಕ್ಷಕರು ನೀಡುವ ಕೆಲಸ ಮಾಡಬೇಕು.

ಜೈಲಿನಲ್ಲಿ ಇದುವರೆಗೂ ಪ್ರತ್ಯೇಕ ಸೆಲ್‌ನಲ್ಲಿದ್ದ ಪ್ರಜ್ವಲ್‌ರೇವಣ್ಣ ಅವರನ್ನು ಇಂದು ಸಜಾಬಂಧಿ ಖೈದಿಗಳ ಬ್ಯಾರಕ್‌ಗೆ ವರ್ಗಾವಣೆ ಮಾಡಲಾಗಿದೆ. ಆಜೀವ ಜೈಲು ಶಿಕ್ಷೆಗೆ ಗುರಿಯಾಗಿರುವ ಪ್ರಜ್ವಲ್‌ರೇವಣ್ಣ ನಿಯಮಗಳಂತೆ ಜೈಲಿನ ಒಳಗೆ 8 ಗಂಟೆ ಕೆಲಸ ಮಾಡಬೇಕು. ಜತೆಗೆ ಸಜಾಬಂಧಿ ಖೈದಿಗಳ ನಿಯಮವನ್ನು ಪಾಲಿಸಬೇಕು. ಜೈಲಿನ ಒಳಗೆ ಪ್ರಜ್ವಲ್‌ರೇವಣ್ಣ ಅವರಿಗೆ ಬೇಕರಿ, ಗಾರ್ಡನ್, ಹೈನುಗಾರಿಕೆ, ತರಕಾರಿ ಬೆಳೆಯುವುದು, ಕರಕುಶಲ ಕೆಲಸ ಸೇರಿದಂತೆ ಯಾವುದಾದರೊಂದು ಕೆಲಸವನ್ನು ಆಯ್ಕೆ ಮಾಡಿಕೊಳ್ಳಲು ಅವಕಾಶವಿದೆ.

ಪ್ರಜ್ವಲ್‌ರೇವಣ್ಣ ಅವರಿಗೆ ಆಯ್ಕೆಮಾಡಿಕೊಂಡ ಕೆಲಸಕ್ಕೆ ತಕ್ಕಂತೆ ಸಂಬಳ ಕೂಡ ನೀಡಲಾಗುತ್ತದೆ. ಮೊದಲು 1 ವರ್ಷ ಕೌಶಲ್ಯರಹಿತ ಎಂದು 524 ರೂ. ಸಂಬಳ ನೀಡಲಾಗುತ್ತೆ. ಆಮೇಲೆ ಅರೆಕೌಶಲ್ಯ ಮಟ್ಟಕ್ಕೆ ಏರಿಕೆ ಮಾಡಲಾಗುತ್ತದೆ. ಬಳಿಕ ಅನುಭವದ ನಂತರ ನುರಿತ ವರ್ಗಕ್ಕೆ ಬಡ್ತಿ ನೀಡಲಾಗುತ್ತೆ.

**ಮೌನದಲ್ಲಿರುವ ಪ್ರಜ್ವಲ್ :** ನ್ಯಾಯಾಲಯದ ತೀರ್ಪಿನ ನಂತರ ಪ್ರಜ್ವಲ್‌ರೇವಣ್ಣ ಜೈಲಿನಲ್ಲಿ ಮೌನಕ್ಕೆ ಶರಣಾಗಿದ್ದು, ನಿನ್ನೆ ತಡರಾತ್ರಿಯವರೆಗೂ ನಿದ್ದೆ ಮಾಡದೆ ಕುಳಿತ್ತಿದ್ದರು ಎನ್ನಲಾಗಿದೆ. ಇಂದು ಬೆಳಿಗ್ಗೆ ಎದ್ದು ನಿತ್ಯಕರ್ಮಗಳನ್ನು ಪೂರೈಸಿದ ನಂತರವೂ ಪ್ರಜ್ವಲ್‌ರೇವಣ್ಣ ಒಂದು ರೀತಿ ಮಂಕು ಬಡಿದವರಂತೆ ಕುಳಿತಿದ್ದು, ಅವರಿಗೆ ಬೆಳಗಿನ ಉಪಾಹಾರವಾಗಿ ಅವಲಕ್ಕಿ ಉಪ್ಪಿಟ್ಟನ್ನು ಜೈಲು ಅಧಿಕಾರಿಗಳು ನೀಡಿದ್ದಾರೆ ಎಂದು ಹೇಳಲಾಗಿದೆ.

# ಐಎಎಸ್ ಅಧಿಕಾರಿಗಳಿಗೆ ಸಾಂವಿಧಾನಿಕ ಜವಾಬ್ದಾರಿ, ಸಾಮಾಜಿಕ ಮೌಲ್ಯ ಹಾಗೂ ನೈತಿಕತೆ ಬಹಳ ಮುಖ್ಯ

## ಸಂಕಲ್ಪ ಉಚಿತ ಸ್ಪರ್ಧಾತ್ಮಕ ಪರೀಕ್ಷಾ ತರಬೇತಿ ಉದ್ಘಾಟನಾ ಸಮಾರಂಭದಲ್ಲಿ ಸರ್ಕಾರದ ಪ್ರಧಾನ ಕಾರ್ಯದರ್ಶಿ ಡಾ.ಶಾಲಿನಿ ರಜನೀಶ್

**ದಾವಣಗೆರೆ:** ನಾಗರಿಕ ಸೇವಾ ಅಧಿಕಾರಿಗಳಾಗುವುದು ಆಸ್ತಿ, ಹಣ ಸಂಪಾದನೆ ಮಾಡುವುದಕ್ಕಲ್ಲ ಸಾಂವಿಧಾನಿಕ ಜವಾಬ್ದಾರಿ ನಿರ್ವಹಣೆ ಜೊತೆಗೆ ಸಾಮಾಜಿಕ ಮೌಲ್ಯಗಳನ್ನು ಎತ್ತಿಹಿಡಿದು ನೈತಿಕತೆ ಕಾಪಾಡಿಕೊಳ್ಳುವುದಾಗಿದೆ ಎಂದು ಸರ್ಕಾರದ ಮುಖ್ಯ ಕಾರ್ಯದರ್ಶಿ ಡಾ: ಶಾಲಿನಿ ರಜನೀಶ್ ತಿಳಿಸಿದರು.

ಎಸ್.ಎಸ್.ಕೇರ್ ಟ್ರಸ್ಟ್, ದಾವಣಗೆರೆ ವಿವಿ, ಐಎಎಸ್ ಬಾಬಾ ಅಕಾಡೆಮಿ ಸಹಯೋಗದಲ್ಲಿ ಬಿಐಇಟಿ ಎಸ್.ಎಸ್.ಮಲ್ಲಿಕಾರ್ಜುನ್ ಸಾಂಸ್ಕೃತಿಕ ಸಭಾಂಗಣದಲ್ಲಿ ಭಾನುವಾರ ಆಯೋಜಿಸಲಾಗಿದ್ದ ಸಂಕಲ್ಪ ಸ್ಪರ್ಧಾತ್ಮಕ ಪರೀಕ್ಷಾ ತರಬೇತಿ ಉದ್ಘಾಟಿಸಿ ಅವರು ಮಾತನಾಡಿದರು.

ಐಎಎಸ್ ಹುದ್ದೆ ಸಾಂವಿಧಾನಿಕ ಸೇವೆಯಾಗಿದೆ. ಜನರು ಹಲವು ತರಹದ ಸೇವೆ ಮಾಡುತ್ತಾರೆ. ದೇಶದ ಅಭಿವೃದ್ಧಿಯಲ್ಲಿ ಎಲ್ಲಾ ಕ್ಷೇತ್ರದ ಕೊಡುಗೆ ಬಹಳ ಮುಖ್ಯವಾಗುತ್ತದೆ. ರೈತ ಆಹಾರ ಉತ್ಪಾದನೆ ಮಾಡಲಿಲ್ಲ ಎಂದರೆ ಜನರ ಗತಿ ಏನಾಗುತ್ತದೆ. ಇದೇ ರೀತಿ ಪ್ರತಿಯೊಂದು ಕ್ಷೇತ್ರದಲ್ಲಿ ದುಡಿಯುತ್ತಿರುವವರ ಮಹತ್ವತೆ ಇರುತ್ತದೆ.

ಐಎಎಸ್ ಎನ್ನುವುದು ಒಂದು ಯೂನಿಕ್ ವರ್ಡ್. ಅದಕ್ಕೆ ಸೇರ ಹೊರಟಿರುವ ಬಯಸುವ ಆಕಾಂಕ್ಷಿಗಳು ಸಾಮಾಜಿಕ ಕಳಕಳಿ, ಮಾನವೀಯ ಮೌಲ್ಯ, ಸಕರಾತ್ಮಕ ಚಿಂತನೆ ಹೊಂದಿರಬೇಕು. ಐಎಎಸ್ ಪರೀಕ್ಷೆಯಲ್ಲಿ ಉತ್ತೀರ್ಣರಾಗಲು ಸತತ ಅಧ್ಯಯನ, ತಿಳಿದುಕೊಂಡಿರುವುದನ್ನು ಸಂಕ್ಷಿಪ್ತವಾಗಿ ಪ್ರಸ್ತುತ ಪಡಿಸುವುದು ಬಹಳ ಕೌಶಲ್ಯಯುತವಾದದು.



ರಾಜ್ಯ, ರಾಷ್ಟ ಮತ್ತು ಅಂತರಾಷ್ಟ್ರೀಯ ಮಟ್ಟದಲ್ಲಿನ ಪ್ರಚಲಿತ ವಿದ್ಯಮಾನ, ಸಾಮಾನ್ಯ ಜ್ಞಾನದ ಜೊತೆಗೆ ದೃಢ ಸಂಕಲ್ಪದೊಂದಿಗೆ ನಿರಂತರ, ಆಳವಾದ ಅಧ್ಯಯನ ರೂಢಿಸಿಕೊಂಡಾಗ ಮಾತ್ರ ನಾಗರೀಕ ಸೇವಾ ಪರೀಕ್ಷೆಗಳಲ್ಲಿ ಯಶಸ್ಸು ಗಳಿಸಬಹುದು. ಕೇವಲ ಸ್ಪರ್ಧಾತ್ಮಕ ಪರೀಕ್ಷೆಗೆ ಸಿದ್ದತೆ ನಡೆಸಿದರೆ ಸಾಲದು ಅದನ್ನು ಪ್ರತಿ ದಿನ ಮನನ ಮಾಡಿಕೊಳ್ಳುವ ಮತ್ತು ಪರೀಕ್ಷಾ ಕೇಂದ್ರಗಳಲ್ಲಿ ಅರಿತ ವಿಷಯವನ್ನು ವ್ಯಕ್ತಪಡಿಸುವ ಕೌಶಲ್ಯ, ಸಮಯ ಪ್ರಜ್ಞೆಯನ್ನು ಸಹ ರೂಢಿಸಿಕೊಳ್ಳಬೇಕು. ಮುಂದಿನ ದಿನಗಳಲ್ಲಿ ಕರ್ನಾಟಕದಿಂದ ಅದರಲ್ಲೂ ವಿಶೇಷವಾಗಿ ದಾವಣಗೆರೆ ಜಿಲ್ಲೆಯಿಂದ ಯುಪಿಎಸ್ಸಿ ಆಕಾಂಕ್ಷಿಗಳು ಬರಬೇಕು ಎಂದು ಆಶಯ ವ್ಯಕ್ತಪಡಿಸಿದರು.

ಗಣಿ ಮತ್ತು ಭೂ ವಿಜ್ಞಾನ, ತೋಟಗಾರಿಕೆ ಹಾಗೂ ಜಿಲ್ಲಾ ಉಸ್ತುವಾರಿ ಸಚಿವರಾದ ಎಸ್.ಎಸ್. ಮಲ್ಲಿಕಾರ್ಜುನ ಮಾತನಾಡಿ, ಬಡವರ, ಹಿಂದುಳಿದ ಪ್ರತಿಭಾನ್ವಿತ ವಿದ್ಯಾರ್ಥಿಗಳಿಗೆ ಉಪಯುಕ್ತವಾಗಲಿ ಎಂದು ಸಂಕಲ್ಪ ಉಚಿತ ತರಬೇತಿಯನ್ನು ಎಸ್. ಎಸ್.ಕೇರ್ ಟ್ರಸ್ಟ್, ದಾ.ವಿ.ವಿ ನಿಂದ ಆರಂಭಿಸಲಾಗಿದೆ. ಇದು ಉತ್ಸಾಹಿ ಅಧಿಕಾರಿಗಳಿದ್ದಾಗ ನಡೆದು ನಿಲ್ಲಬಾರದು, ಪಕ್ಷಾತೀತವಾಗಿ ನಿರಂತರವಾಗಿ ನಡೆಯಬೇಕು ಎಂದರು.

ಬಡವರಿಗೆ ಆರೋಗ್ಯ ರಕ್ಷಣೆಗಾಗಿ ಆರಂಭವಾದ ಎಸ್.ಎಸ್.ಕೇರ್ ಟ್ರಸ್ಟ್ ಸೇವೆ ಸ್ಪರ್ಧಾತ್ಮಕ ಪರೀಕ್ಷಾ ಕ್ಷೇತ್ರಕ್ಕೂ ವಿಸ್ತರಿಸಲಾಗಿದೆ. ತರಬೇತಿಗೆ ಆಗಮಿಸುವ ದೂರದ ಅಭ್ಯರ್ಥಿಗಳಿಗೆ ಕಟ್ಟಡ ಒದಗಿಸಲಾಗುತ್ತದೆ, ಡಿವೈಡಿಂಗ್ ಪಾವತಿ ವ್ಯವಸ್ಥೆಯಲ್ಲಿ ನಿರ್ವಹಣೆ ಮಾಡಲು ತಿಳಿಸಿದರು.

ರಾಷ್ಟ್ರೀಯ ಹೆದ್ದಾರಿ ಕುಂದುವಾಡ ಅಂಡರ್ ಪಾಸ್ ಅನ್ನು ಏಳು ಮೀಟರ್ ಗಿಂತಲೂ ಹೆಚ್ಚು ವಿಸ್ತಾರವಾಗಿ ನಿರ್ಮಿಸಬೇಕೆಂದು ಗ್ರಾಮಸ್ಥರ ಆಗ್ರಹವಾಗಿತ್ತು. ಮುಖ್ಯ ಕಾರ್ಯದರ್ಶಿ ಅವರ ಗಮನಕ್ಕೆ ತಂದಾಗ ಎನ್.ಹೆಚ್.ಎ.ಐ ಅಧಿಕಾರಿಗಳ ಗಮನಕ್ಕೆ ತಂದು ಸಮಸ್ಯೆ ಬಗೆಹರಿಸಲಾಗಿದೆ. ಉದ್ಯೋಗಾವಕೋಶಗಳನ್ನು ಹೆಚ್ಚಿಸಲು ದಾವಣಗೆರೆ-ಹರಿಹರದಲ್ಲಿ ಕೈಗಾರಿಕೆಗಳನ್ನು ಸ್ಥಾಪಿಸಲು ಉತ್ತೇಜಿಸಲಾಗುತ್ತಿದೆ ಎಂದರು.

ಸಂಸದರಾದ ಡಾ: ಪ್ರಭಾ ಮಲ್ಲಿಕಾರ್ಜುನ್ ಪ್ರಾಸ್ತಾವಿಕವಾಗಿ ಮಾತನಾಡಿ ಮ್ಯಾಂಚೆಸ್ಟರ್" ಎಂದೇ ಪ್ರಸಿದ್ಧಿಯಾಗಿದ್ದ ದಾವಣಗೆರೆಯನ್ನು "ಶಿಕ್ಷಣ ಕಾಶಿ"ಯಾಗಿ ರೂಪಿಸಿ, ಪ್ರಗತಿಯ ದಾರಿ ತೋರಿದವರು ಹಿರಿಯ ನಾಯಕ ಡಾ. ಶಾಮನೂರು ಶಿವಶಂಕರಪ್ಪಾಜಿಯವರಿಗೆ ಸಲ್ಲಬೇಕು. ಅವರ ದೂರದೃಷ್ಟಿ ಮತ್ತು ಸಮಾಜಪರ ಸೇವೆಯೇ ದಾವಣಗೆರೆಯನ್ನು ಇಂದು ರಾಜ್ಯ, ರಾಷ್ಟ ಹಾಗೂ ಜಾಗತಿಕ ಮಟ್ಟದಲ್ಲಿ ಗುರುತಿಸಲು ಕಾರಣವಾಗಿದೆ.

ದಾವಣಗೆರೆಯ ಅಭಿವೃದ್ಧಿಗೆ ಸತತ ಶ್ರಮಿಸುತ್ತಿರುವ ಡಾ.ಶಾಮನೂರು ಶಿವಶಂಕರಪ್ಪಾಜಿ ಹಾಗೂ ಜಿಲ್ಲಾ ಉಸ್ತುವಾರಿ ಸಚಿವರಾದ ಎಸ್ ಎಸ್ ಮಲ್ಲಿಕಾರ್ಜುನ್ ಅವರ ದೂರದೃಷ್ಟಿಯ ಚಿಂತನೆಯ ಫಲವಾಗಿ ಇಂದು ಸಂಕಲ್ಪ ಉಚಿತ ಸ್ಪರ್ಧಾತ್ಮಕ ಪರೀಕ್ಷೆಗೆ ತರಬೇತಿ ಪ್ರಾರಂಭವಾಗುತ್ತಿದೆ. 2019 ರಲ್ಲಿ ಪ್ರಾರಂಭವಾದ ಎಸ್ ಎಸ್ ಕೇರ್ ಟ್ರಸ್ಟ್ ದಾವಣಗೆರೆ ಕ್ಷೇತ್ರದಲ್ಲಿ ಸಾರ್ವಜನಿಕರಿಗೆ ಉಚಿತ ಮೂರು ಆರೋಗ್ಯ ಸೇವೆ ಒದಗಿಸುತ್ತಿದೆ.


ಇದೀಗ ಮಹತ್ವದ ಹೆಜ್ಜೆಯಾಗಿ ಸಂಕಲ್ಪ ಯೋಜನೆಯೊಂದಿಗೆ ಸ್ಪರ್ಧಾತ್ಮಕ ಪರೀಕ್ಷೆ ತೆಗೆದುಕೊಳ್ಳುವ ಆಕಾಂಕ್ಷಿಗಳಿಗೆ ಉಚಿತ ತರಬೇತಿಗೆ ಮುನ್ನುಡಿ ಹಾಕಲಾಗಿದೆ. ಎಸ್.ಎಸ್. ಕೇರ್ ಟ್ರಸ್ಟ್, ಐಎಎಸ್ ಬಾಬಾ ಹಾಗೂ ದಾವಣಗೆರೆ ವಿಶ್ವವಿದ್ಯಾನಿಲಯದ ಸಹಯೋಗದಲ್ಲಿ ವಿ.ವಿ ದೃಶ್ಯಕಲಾ ಮಹಾವಿದ್ಯಾಲಯದ ಆವರಣದಲ್ಲಿ ಸಂಕಲ್ಪ ತರಬೇತಿ ಕೇಂದ್ರ ಕಾರ್ಯನಿರ್ವಹಿಸಲಿದೆ ಎಂದರು.

# ಆಲಮಟ್ಟಿ ಎತ್ತರ ಹೆಚ್ಚಳಕ್ಕೆ ಮಹಾರಾಷ್ಟ್ರ ಕ್ಯಾತೆ: ಫಡ್ನವಿಸ್ ಆಕ್ಷೇಪಣೆಗೆ ಸಂಸದ ಬೊಮ್ಮಾಯಿ ತೀವ್ರ ಕಿಡಿ

**ಹುಬ್ಬಳ್ಳಿ:** ಕೃಷ್ಣಾ ನದಿಗೆ ಅಡ್ಡಲಾಗಿ ನಿರ್ಮಿಸಲಾಗುವ ಆಲಮಟ್ಟಿ ಅಣೆಕಟ್ಟಿನ ಎತ್ತರವನ್ನು ಹೆಚ್ಚಿಸುವ ಕರ್ನಾಟಕದ ನಿರ್ಧಾರಕ್ಕೆ ಮಹಾರಾಷ್ಟ್ರ ಮುಖ್ಯಮಂತ್ರಿ ದೇವೇಂದ್ರ ಫಡ್ನವಿಸ್ ಅವರು ಆಕ್ಷೇಪ ವ್ಯಕ್ತಪಡಿಸಿದ್ದು, ಇದು ಅಸಮಂಜಸ ಎಂದು ಮಾಜಿ ಮುಖ್ಯಮಂತ್ರಿ ಮತ್ತು ಸಂಸದ ಬಸವರಾಜ ಬೊಮ್ಮಾಯಿ ಅವರು ಕಿಡಿಕಾರಿದ್ದಾರೆ.

ಹಾವೇರಿಯಲ್ಲಿ ಮಾಧ್ಯಮಗಳೊಂದಿಗೆ ಮಾತನಾಡಿದ ಅವರು, ಸಾಂಗ್ಲಿ ಮತ್ತು ಮಹಾರಾಷ್ಟ್ರದ ಇತರ ಪ್ರದೇಶಗಳಲ್ಲಿ ಯಾವುದೇ ಪ್ರವಾಹ ಸಮಸ್ಯೆ ಇಲ್ಲ ಎಂದು ಈಗಾಗಲೇ ನ್ಯಾಯಮಂಡಳಿಯ ತೀರ್ಪು ಇದೆ. ಆದರೂ ಮಹಾರಾಷ್ಟ್ರದ ಜನರು ಎತ್ತಿರುವ ಸಮಸ್ಯೆ ಅನಗತ್ಯ. ಕರ್ನಾಟಕದಲಿ ಪ್ರವಾಹ ಉಂಟಾದಾಗ, ನಮ್ಮ ಸರ್ಕಾರ ಅದನ್ನು ನೋಡಿಕೊಳ್ಳುತ್ತದೆ. ಅದೇ ರೀತಿ, ಮಹಾರಾಷ್ಟ್ರದಲ್ಲಿ ಪ್ರವಾಹ ಉಂಟಾದ-ರೆ, ಮಹಾರಾಷ್ಟ್ರ ಸರ್ಕಾರ ಅದನ್ನು ನೋಡಿಕೊಳ್ಳಬೇಕು ಎಂದು ಹೇಳಿದರು.

ಆಲಮಟ್ಟಿ ಅಣೆಕಟ್ಟು ನಿರ್ಮಿಸುವ ಮೊದಲು



ಸಾಂಗ್ಲಿಯಲ್ಲಿ ಪ್ರವಾಹ ಉಂಟಾಗಿತ್ತು. 2005 ರಲ್ಲಿ ದೊಡ್ಡ ಪ್ರಮಾಣದ ಪ್ರವಾಹವೂ ಉಂಟಾಗಿತ್ತು, ಆಗ ಕೇಂದ್ರ ಜಲ ಆಯೋಗದ ತಂಡ ಬಂದು ಆಲಮಟ್ಟಿ ಅಣೆಕಟ್ಟು ಮತ್ತು ಪ್ರವಾಹದ ನಡುವೆ ಯಾವುದೇ ಸಂಬಂಧವಿಲ್ಲ ಎಂದು ವರದಿ ಮಾಡಿತ್ತು. ಆದ್ದರಿಂದ, ಮಹಾರಾಷ್ಟ್ರ ಮುಖ್ಯಮಂತ್ರಿ ಸೃಷ್ಟಿಸುವುದು ಅನಗತ್ಯ ವಿವಾದ, ಇದು ಅಸಮಂಜಸ ಎಂದು ತಿಳಿಸಿದರು.

ನದಿ ಜೋಡಣೆಯ ಬಗ್ಗೆ ಜನಜಾಗೃತಿಯನ್ನು ಮಾಡಿರುವಂತದು ನಮ್ಮ ಹಿಂದಿನ ಪಧಾನಿ ಅಟಲ್ ಬಿಹಾರಿ ವಾಜಪೇಯಿ ಅವರು, ಅದರಲ್ಲಿ ಎರಡು ವಿಭಾಗದಲ್ಲಿ ವಿಂಗಡನೆ ಆಯಿತು. ಹಿಮಾಲಯನ್ ನದಿ ಜೋಡಣೆ ಅಂದರೆ ಉತ್ತರದ ನದಿಗಳು, ಮತ್ತೆ ವಿಂದ್ಯ ಪರ್ವತದ ಕೆಳಗೆ ಇರುವ ನದಿ ಜೋಡಣೆ. ನಮಗೆ ಸಂಬಂಧಿಸಿರುವ ಬೆಡ್ತಿ ವರದಾ ನದಿ ಜೋಡಣೆಗೆ ಎನ್‌ಡಬ್ಲುಡಿಎ ವತಿಯಿಂದ ಒಪ್ಪಿಗೆ ಸಿಕ್ಕಿದೆ. ಇದಕ್ಕೆ ಇದರದೇ ಆದ ಸವಾಲುಗಳಿದ್ದವು ನಾವು ಮೊದಲನೇ ಪ್ರಸ್ತಾವನೆಯನ್ನು ಜಾರಿಗೆ ತರಲು ಹೋದಾಗ ಪರಿಸರದ ಮೇಲೆ ಪರಿಣಾಮ ಆಗುತ್ತದೆ

# ಸರಕಾರಿ ಶಾಲೆಗಳ ಅಭಿವೃದ್ಧಿಗೆ ಸಂಪೂರ್ಣ ಸಹಕಾರ : ಶಾಸಕ ಟಿ.ರಘುಮೂರ್ತಿ ಭರವಸೆ



**ಚಿತ್ರದುರ್ಗ:** ಸರಕಾರಿ ಶಾಲೆಗಳ ಅಭಿವೃದ್ಧಿಗೆ ಸಂಪೂರ್ಣ ಸಹಕಾರ ನೀಡಲು ಶಾಸಕನಾಗಿ ನಾನು ಸದಾ ಬದ್ಧನಿದ್ದೇನೆ, ಇಂದು ಸುಮಾರು 11 ಕೋಟಿ ವೆಚ್ಚದ ವಿವಿಧ ಅಭಿವೃದ್ಧಿ ಕಾಮಕಾರಿಗಳು ಭೂಮಿ ಪೂಜೆ ಮಾಡಲಾಗಿದೆ ಎಂದು ಸಣ್ಣ ಕೈಗಾರಿಕೆ ಅಭಿವೃದ್ಧಿ ನಿಗಮ ಅಧ್ಯಕ್ಷ ಹಾಗೂ ಚಳ್ಳಕೆರೆ ಶಾಸಕ ಟಿ.ರಘುಮೂರ್ತಿ ಹೇಳಿದರು.

ಚಿತ್ರದುರ್ಗ ತಾಲೂಕಿನ ತುರುವನೂರು ಹೋಬಳಿಯ ಬುಧವಾರದಂದು ಕೂನಬೇವು ಗ್ರಾಮದಲ್ಲಿ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆ ಭೂಮಿ ಪೂಜೆ, ಚಿಕ್ಕಪ್ಪನಹಳ್ಳಿ, ಹಿರೇಕಬ್ಬಿಗೆರೆ, ಚಿಕ್ಕಗೊಂಡನಹಳ್ಳಿ ಗ್ರಾಮಗಳ ಸಿ.ಸಿ.ರಸ್ತೆ ಕಾಮಗಾರಿಯ ಭೂಮಿ ಪೂಜೆ ನೇರವೇರಿಸಿ ಮಾತನಾಡಿದರು.

ಸಮಾಜದಲ್ಲಿ ಶೈಕ್ಷಣಿಕ ಪ್ರಗತಿಯಾದ-ರೆ ಅದು ಸಾಮಾಜಿಕ ಪರಿವರ್ತನೆಯ ಹೊಸ ಹೊಳಪು ಮೂಡಿದಂತೆ. ಶೈಕ್ಷಣಿಕ ಪ್ರಗತಿಯ ಆಧಾರದ ಮೇಲೆ ಆ ಸಮಾಜ ಭವಿಷ್ಯ ನಿಂತಿದೆ. ಶಾಲೆ ಒಂದು ಸಾಮಾಜಿಕ ಪರಿವರ್ತನೆಯ ಕೇಂದ್ರ ಆಗಬೇಕು. ಸಮಾಜದಲ್ಲಿ ಏನೇನು ಕೊರತೆಗಳಿವೆಯೋ ಅವು ಶಾಲೆಯಿಂದ ನೀಗುವಂತಾಗಬೇಕು. ಆದ್ದರಿಂದ ಮಕ್ಕಳ ಶೈಕ್ಷಣಿಕ ಪ್ರಗತಿಗೆ ಪೂರಕ ವಾತಾವರಣ ಸೃಷ್ಟಿಸುವ ದೊಡ್ಡ ಜವಾಬ್ದಾರಿ ಪೋಷಕರು ಮತ್ತು ಶಿಕ್ಷಕರ ಮೇಲಿದೆ ಎಂದರು.

ನನ್ನ ಕ್ಷೇತ್ರದಲ್ಲಿ ಶಾಲೆಗಳ ಸುಧಾರಣೆಗೆಯನ್ನು ನಿರಂತರವಾಗಿ ಮಾಡಿಕೊಡು ಬಂದಿದ್ದು ಚಳ್ಳಕೆರೆ ನಗರ ಮತ್ತು ಗ್ರಾಮೀಣ ಭಾಗದಲ್ಲಿ ಸುಮಾರು 380 ಕ್ಕೂ ಹೆಚ್ಚು ನೂತನ ಶಾಲಾ ಕಾಲೇಜು ಕೊಠಡಿಗಳ ನಿರ್ಮಾಣ ಮಾಡಲಾಗಿದ್ದು. ಇಂದು ಸಹ ಕೂನಬೇವು ಗ್ರಾಮದಲ್ಲಿ 72 ಲಕ್ಷ ವೆಚ್ಚದಲ್ಲಿ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಯ 4 ನೂತನ ಕೊಠಡಿಗಳ ನಿರ್ಮಾಣಕ್ಕೆ ಭೂಮಿ ಪುಜೆ ನೇರವೇರಿಸಿದ್ದೇನೆ ಎಂದರು.

ಚಿಕ್ಕಗೊಂಡನಹಳ್ಳಿ ಗ್ರಾಮದಲ್ಲಿ ಚಿಕ್ಕಗೊಂಡನಹಳ್ಳಿ ಗ್ರಾಮದಿಂದ ಚಿಕ್ಕಪ್ಪನಹಳ್ಳಿ ಗ್ರಾಮದವರೆಗೆ 4.50 ಕೋಟಿ ವೆಚ್ಚದಲ್ಲಿ 7 ಕಿಲೋ ಮೀಟರ್ ರಸ್ತೆ ಕಾಮಗಾರಿ ಮತ್ತು ಮಾಳೇನಹಳ್ಳಿಯಿಂದ ಹಿರೇಕಬ್ಬಿಗೆರೆ, ಶಿವನಕೆರೆ ದೇವಸ್ಥಾನವರಗೆ 4 ಕೋಟಿ ವೆಚ್ಚದ ರಸ್ತೆ, ಚಿಕ್ಕಗೊಂಡನಳ್ಳಿ ಗ್ರಾಮದಲ್ಲಿ 1 ಕೋಟಿ ವೆಚ್ಚದ ಸಿ.ಸಿ.ರಸ್ತೆ ಮತ್ತು ಹಿರೇಕಬ್ಬಿಗೆರೆ ಗ್ರಾಮದಲ್ಲಿ 20 ಲಕ್ಷದ ವೆಚ್ಚದ ಸಿ ಸಿ ರಸ್ತೆ ಕಾಮಗಾರಿಗಳಿಗೆ ಭೂಮಿ ಪೂಜೆ ಮಾಡಲಾಗಿದ್ದು ಎಲ್ಲಾ ರಸ್ತೆಗಳನ್ನು ಅಚ್ಚುಕಟ್ಟಾಗಿ ಮತ್ತು ವಿಶಾಲವಾಗಿ ನಿರ್ಮಾಣ ಮಾಡಲು ಸೂಚಿಸಿದ್ದು ಸಾರ್ವಜನಿಕರು ಸಹ ಅಧಿಕಾರಿಗಳಿಗೆ ಸಹಕಾರ ನೀಡಿ ಗುಣಮಟ್ಟದ ಕೆಲಸ ಮಾಡಿಸಿಕೊಳ್ಳುವ ಮೂಲಕ ಗ್ರಾಮವನ್ನು ಸುಂದರವಾಗಿಟ್ಟುಕೊಳ್ಳಿ ಎಂದು ಸಲಹೆ ನೀಡಿದರು.

ಈ ಸಂದರ್ಭದಲ್ಲಿ ತಾಲೂಕು ಪಂಚಾಯತ ಇಓ ರವಿಕುಮಾರ್, ಕ್ಷೇತ್ರ ಶಿಕ್ಷಣಧಿಕಾರಿ ಎಸ್.ನಾಗಭೂಷಣ್, ಉಪ ತಹಶೀಲ್ದಾರ್ ಪ್ರಕಾಶ್, ಮಾಜಿ ಜಿ.ಪಂ ಸದಸ್ಯ ಬಾಬುರೆಡ್ಡಿ, ಕೂನಬೇವು ಗ್ರಾಮ ಪಂಚಾಯತಿ ಅಧ್ಯಕ್ಷೆ ಪದ್ಮಕ್ಕ, ಮಾಡನಾಯಕನಹಳ್ಳಿ ಗ್ರಾಮ ಪಂಚಾಯತಿ ಅಧ್ಯಕ್ಷ ರಾಜೇಶ್ ಮತ್ತು ಗ್ರಾಮ ಪಂಚಾಯತಿ ಸದಸ್ಯರು ಮತ್ತು ಸಾರ್ವಜನಿಕರು ಇದ್ದರು.

# ಪ್ರಸ್ತುತ ಮೌಲ್ಯಾಧಾರಿತ ರಾಜಕಾರಣ ಅಗತ್ಯ

## ಸರ್ವೋದಯ ರಾಜಕೀಯ ಪುನರುತ್ಥಾನ ಸಭೆಯಲ್ಲಿ ಪಾಂಡೋಮಟ್ಟಿ ಶ್ರೀ

**ದಾವಣಗೆರೆ:** ರಾಜಕೀಯದ ಶುದ್ಧೀಕರಣಕ್ಕಾಗಿ ಮೌಲ್ಯಾಧಾರಿತ ರಾಜಕಾರಣದ ಅಗತ್ಯವಿದೆ ಎಂದು ಪಾಂಡೋಮಟ್ಟಿಯ ಶ್ರೀ ಗುರು ಬಸವ ಸ್ವಾಮೀಜಿ ಪ್ರತಿಪಾದಿಸಿದರು.

ನಗರದ ಕರುಣಾ ಜೀವ ಕಲ್ಯಾಣ ಟ್ರಸ್ಟ್ ಕಚೇರಿಯಲ್ಲಿ ನಡೆದ ಸರ್ವೋದಯ ರಾಜಕೀಯ ಪುನರುತ್ಥಾನ ಚಿಂತನಾ ಸಭೆಯ ಸಾನ್ನಿಧ್ಯ ವಹಿಸಿ ಅವರು ಮಾತನಾಡಿದರು.

ಇಂದು ರಾಜಕೀಯವು ಸೇವೆಯ ಕ್ಷೇತ್ರವಾಗಿ ಉಳಿದಿಲ್ಲ, ಬದಲಾಗಿ 'ಸೇವನೆ'ಯ ಕ್ಷೇತ್ರವಾಗಿ ಪರಿವರ್ತನೆಯಾಗಿದೆ ಎಂದು ವಿಷಾದ ವ್ಯಕ್ತಪಡಿಸಿದರು.

ಹಣವಂತರು ಮತ್ತು ವಂಚಕರಿಗೆ ರಾಜಕೀಯ ಸುಲಭವಾಗಿ ಬಾಗಿಲು ತೆರೆಯುತ್ತಿದೆ. ರಾಜಕಾರಣ ಶುದ್ಧವಾಗಬೇಕಾದರೆ ಮತದಾರರು ಶುದ್ಧ ಜೀವನ ನಡೆಸಬೇಕು ಮತ್ತು ಕೈಚಾಚದೆ ಮತ ಚಲಾಯಿಸಬೇಕು ಎಂದು ಹೇಳಿದರು.

ಶಾಸಕರ ಹಸ್ತಕ್ಷೇಪವಿಲ್ಲದೆ ಗ್ರಾಮ ಪಂಚಾಯಿತಿಗಳು ಸ್ವಾಯತ್ತವಾಗಿ ಕೆಲಸ ಮಾಡುವಂತಾಗಬೇಕು. ರಾಮಕೃಷ್ಣ ಹೆಗಡೆ ಮತ್ತು ನಜೀರ್ ಸಾಬ್ ಅವರು ಜಾರಿಗೆ ತಂದ ಅಧಿಕಾರ ವಿಕೇಂದ್ರೀಕರಣದ ಪರಿಕಲ್ಪನೆಯನ್ನು ಗಟ್ಟಿಗೊಳಿಸಬೇಕಿದೆ ಎಂದು ಹೇಳಿದರು.

ರಾಜಕಾರಣಿಗಳಿಂದ ಸಿದ್ಧಾಂತಗಳ ಆಧಾರದ ಮೇಲೆ ಚರ್ಚೆಗಳು ನಡೆಯುವ ಬದಲು ವೈಯಕ್ತಿಕ ಟೀಕೆಗಳು ಹೆಚ್ಚಾಗುತ್ತಿರುವು ದ-ಕ್ಕೆ ಸ್ವಾಮೀಜಿ ಬೇಸರ ವ್ಯಕ್ತಪಡಿಸಿ, ರಾಜಕಾರಣಿಗಳಲ್ಲಿ ಪರಿಸರ ಕಾಳಜಿ ಮತ್ತು ಸೇವಾ ಮನೋಭಾವ ಇರಬೇಕು. ರಾಜಕೀಯದ ಶುದ್ಧೀ ಕರಣವೇ ಅನೇಕ ಅನಾಹುತಗಳನ್ನು



ತಪ್ಪಿಸುತ್ತದೆ ಎಂದು ಸ್ವಾಮೀಜಿ ಅಭಿಪ್ರಾಯಪಟ್ಟರು.

ಮತದಾರರು ಆರಿಸಿ ಕಳುಹಿಸಿದ ಪ್ರತಿನಿಧಿಯನ್ನು ವಾಪಸ್ ಕರೆಸುವಂತಹ ವಾತಾವರಣ ನಿರ್ಮಾಣವಾದಾಗ ಮಾತ್ರ ರಾಜಕೀಯ ಶುದ್ಧೀಕರಣ ಸಾಧ್ಯ. ಈ ಬದಲಾವಣೆ ಗ್ರಾಮ ಮಟ್ಟದ ಗ್ರಾಮ ಸರ್ಕಾರಗಳಿಂದಲೇ ಆರಂಭವಾಗಬೇಕು ಎಂದರು.

ಶಾಸಕರು ಗ್ರಾಮ ಪಂಚಾಯ್ತಿ ಹಾಗೂ ಸರ್ಕಾರದ ನಡುವೆ ಸೇತುವೆ ಯಾಗಿರಬೇಕಿತ್ತು. ಆದರೆ ಇಂದು ಶಾಸಕರ ಹಸ್ತ ಕ್ಷೇಪದಿಂದ ಯಾವ ಕೆಲಸವೂ ಸಾಧ್ಯವಿಲ್ಲ ಎಂಬಂತಾಗಿದೆ. ಸಾತ್ವಿಕರು ಸೇವಾ ಮನೋಭಾವ ಇರುವಂತವರು ರಾಜಕಾರಣಕ್ಕೆ ಬೇಕಿದೆ. ಅಂತವರನ್ನು ಜನರು ಬೆಂಬಲಿಸಬೇಕು ಎಂದು ಕರೆ ನೀಡಿದರು.

ಬೆಳಗಾವಿಯ ದಿಲೀಪ್ ಕಾಮತ್ ಅವರು ವರ್ಚ್ಯುಯಲ್ ಮೂಲಕ ಮಾತನಾಡುತ್ತಾ, ಪ್ರಜಾಪ್ರಭುತ್ವವು ಇಂದು ಹಣವುಳ್ಳವರಿಗೆ ಮಾರಾಟವಾಗುವ ವಸ್ತುವಾಗಿದೆ ಎಂದು ಕಳವಳ ವ್ಯಕ್ತಪಡಿಸಿದರು.

ಭಾರತೀಯರೆಲ್ಲರೂ ಪ್ರಜಾಪ್ರಭುತ್ವವನ್ನು ನಿರ್ಮಿಸುವ ಜವಾಬ್ದಾರಿ ಮರೆತಿರುವುದರಿಂದಲೇ ಪಟ್ಟಭದ್ರ ಹಿತಾಸಕ್ತಿಗಳು ಬೆಳೆಯುತ್ತಿವೆ ಎಂದು ಅಭಿಪ್ರಾಯಪಟ್ಟರು.

'ಸರ್ವೋದಯ' ಪರಿಕಲ್ಪನೆ ಸಾಕಾರಗೊಳ್ಳಬೇಕಾದರೆ ಪ್ರಜಾಪ್ರಭುತ್ವವನ್ನು ಪುನರ್ ನಿರ್ಮಿಸುವ ಕೆಲಸ ಆರಂಭವಾಗಬೇಕು ಎಂದು ಪ್ರತಿಪಾದಿಸಿದರು.

ನೆಲಮಂಗಲದ ಭೈರೇಗೌಡ ಮಾತನಾಡಿ ವರು ಗ್ರಾಮ ಸಭೆಗಳ ಪ್ರಾಮುಖ್ಯತೆಯನ್ನು ಜನರಿಗೆ ತಿಳಿಸುವ ಅಗತ್ಯವಿದೆ ಎಂದರು.

ಆರಂಭದಲ್ಲಿ ಮಾತನಾಡಿದ ಶಿವನಕೆರೆ ಬಸವಲಿಂಗಪ್ಪ, ಎಚ್ಚೆತ್ತ ನಾಗರಿಕರಿಂದ ಮಾತ್ರ ಪ್ರಜಾಪ್ರಭುತ್ವವನ್ನು ಉಳಿಸಲು ಸಾಧ್ಯ ಎಂದು ಹೇಳಿದರು.

ವಿಷನಮುಕ್ತ ಆಹಾರ, ಜೀವನ ಪದ್ಧತಿ ಮೋಜು ಮಸ್ತಿಯಿಂದಾಗಿ ಸಾಮೂಹಿಕ ಆತ್ಮಹತ್ಯೆಯಾಗುತ್ತಿದೆ. ಇದೆಲ್ಲಾ ಬದಲಾಗಬೇಕಾದರೆ ಅರಿವು ಅಧಾರಿತ ಸಾಮಾಜಿಕ ಚಿಂತನೆ ಮತ್ತು ಕಾರ್ಯಾಚರಣೆ ಅಗತ್ಯ ಇದು ಒಬ್ಬರಿಂದ ಸಾಧ್ಯವಿಲ್ಲ ಎಂದು ಹೇಳಿದರು.

# ಯುವಜನತೆ ದುಶ್ಚಟಗಳಿಂದ ದೂರವಿರಿ : ಡಾ.ಬಸವ ಮರುಳಸಿದ್ದ ಶ್ರೀ

**ಚಿಕ್ಕಮಗಳೂರು, ಆ.3,** ವಿದ್ಯಾರ್ಥಿಗಳು ಮತ್ತು ಯುವಜನತೆ ತಮ್ಮ ಉಜ್ವಲ ಭವಿಷ್ಯಕ್ಕಾಗಿ ದುಶ್ಚಟಗಳಿಂದ ದೂರವಿರಬೇಕು ಎಂದು ಬಸವತತ್ವ ಪೀಠದ ಶ್ರೀ ಡಾ.ಬಸವ ಮರುಳಸಿದ್ದ ಸ್ವಾಮೀಜಿ ಸಲಹೆ ಮಾಡಿದರು.

ರಾಜ್ಯ ಸರ್ಕಾರಿ ನೌಕರರ ಸಂಘ ನಗರದ ಖಾಸಗಿ ಹೋಟೆಲ್ ಸಭಾಂಗಣದಲ್ಲಿ ಶನಿವಾರ ಏರ್ಪಡಿಸಿದ್ದ ಎಸ್‌ಎಸ್‌ಎಲ್‌ಸಿ ಮತ್ತು ಪಿಯುಸಿಯಲ್ಲಿ ಅತಿ ಹೆಚ್ಚು ಅಂಕ ಗಳಿಸಿದ ಸರ್ಕಾರಿ ನೌಕರರ ಮಕ್ಕಳಿಗೆ ಪ್ರತಿಭಾ ಪುರಸ್ಕಾರ ಕಾರ್ಯಕ್ರಮದ ಸಾನಿಧ್ಯ ವಹಿಸಿ ಅವರು ಆಶೀರ್ವಚನ ನೀಡಿದರು.

ವಿದ್ಯಾರ್ಥಿ ದೆಸೆಯಲ್ಲಿ ಬಹಳಷ್ಟು ಆಕರ್ಷಣೆಗಳಿರುತ್ತವೆ. ಅವುಗಳ ಹಿಂದೆ ಹೋದರೆ ವಿದ್ಯಾಭ್ಯಾಸ ಮೊಟಕಾಗುತ್ತದೆ, ಬದುಕಿನ ಹಾದಿ ತಪ್ಪುತ್ತದೆ, ಜೀವನದ ಅಧಃಪತನವಾಗುತ್ತದೆ ಎಂದು ಎಚ್ಚರಿಸಿದರು.

ಇಂದು ಮಾದಕ ವಸ್ತುಗಳ ವ್ಯಾಪಾರಸ್ಥರು ವಿದ್ಯಾರ್ಥಿಗಳು ಮತ್ತು ಯುವಜನತೆಯನ್ನು ಗುರಿಯಾಗಿಸಿಕೊಂಡಿದ್ದಾರೆ, ಮೊಬೈಲ್‌ಗಳಲ್ಲೇ ಜೂಜಾಟದ ಆ್ಯಪ್‌ಗಳಿವೆ, ದೊಡ್ಡ ದೊಡ್ಡ ಸೆಲೆಬ್ರಿಟಿಗಳು ಯುವಜನತೆಗೆ ಜೂಜಾಟವಾಡುವಂತೆ ಪತ್ರಿಕೆಗಳ ಮುಖಪುಟಗಳಲ್ಲಿ ಜಾಹೀರಾತುಗಳ ಮೂಲಕ ಬಹಿರಂಗವಾಗಿಯೇ ಪ್ರೇರೇಪಿಸುತ್ತಿದ್ದಾರೆ, ಅಂಗಡಿಗಳಲ್ಲಿ ಗುಟ್ಕಾ, ತಂಬಾಕು, ಸಿಗರೇಟು, ಬೀಡಿ, ಮದ್ಯದಂತಹ ರಕ್ತ ಬೀಜಾಸುರರು ರಾರಾಜಿಸುತ್ತಿದ್ದಾರೆ, ವಿದ್ಯಾರ್ಥಿಗಳು ಮತ್ತು ಯುವಜನತೆ ಇವುಗಳ ವಿಷಯದಲ್ಲಿ ಅತ್ಯಂತ ಜಾಗರೂಕರಾಗಿರಬೇಕು, ಉತ್ತಮ ಭವಿಷ್ಯಕ್ಕಾಗಿ ಅವುಗಳಿಂದ ದೂರವಿರಬೇಕು ಎಂದು ಕಿವಿಮಾತು ಹೇಳಿದರು.

ಭವಿಷ್ಯದ ಜೀವನ ಉಜ್ವಲವಾಗಬೇಕಾದರೆ ಇಂದಿನ ವರ್ತಮಾನದಲ್ಲಿ ನಮ್ಮ ನಡತೆ ಉತ್ತಮವಾಗಿರಬೇಕು, ಪ್ರತಿಭಾ ಪುರಸ್ಕಾರ ಎನ್ನುವುದು ಕೇವಲ ಬೆನ್ನು ತಟ್ಟುವುದು ಎಂಬುದನ್ನು ವಿದ್ಯಾರ್ಥಿಗಳು ಅರಿಯಬೇಕು, ಪ್ರತಿಭಾ ಪುರಸ್ಕಾರ, ಸನ್ಮಾನಗಳಿಂದ




ಮೈಮರೆಯಬಾರದು. ಯಾವುದೇ ಭ್ರಮೆಗೊಳಗಾಗದೆ ಮುಂದಿನ ಶಿಕ್ಷಣವನ್ನು ಶ್ರದ್ಧೆ ಮತ್ತು ಪರಿಶ್ರಮದಿಂದ ಮಾಡಬೇಕು ಎಂದು ತಿಳಿ ಹೇಳಿದರು.

ವಿದ್ಯಾರ್ಥಿಗಳು ಮತ್ತು ಯುವಜನತೆ ತಮ್ಮ ಶಕ್ತಿ ಮತ್ತು ಸಾಮರ್ಥ್ಯವನ್ನು ಸದ್ಬಳಕೆ ಮಾಡಿಕೊಳ್ಳಬೇಕು, ಶಿಕ್ಷಣವಂತರಾಗುವುದರ ಜೊತೆಗೆ ಸಂಸ್ಕಾರವಂತರೂ ಆಗಬೇಕು, ಶಿಸ್ತನ್ನು ಮೈಗೂಡಿಸಿಕೊಳ್ಳಬೇಕು ಎಂದು ಹೇಳಿದರು.

ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದ ಶಾಸಕ ಎಚ್.ಡಿ.ತಮ್ಮಯ್ಯ, ಹೆಚ್ಚು ಅಂಕ ಪಡೆದ ವಿದ್ಯಾರ್ಥಿಗಳಿಗೆ ಪ್ರತಿಭಾ ಪುರಸ್ಕಾರ ಮಾಡುವುದರಿಂದ ಇನ್ನೂ ಹೆಚ್ಚಿನ ಸಾಧನೆಗೆ ಅವರನ್ನು ಪ್ರೇರೇಪಿಸಿದಂತಾಗುತ್ತದೆ ಎಂದು ತಿಳಿಸಿದರು. ಸಖರಾಯಪಟ್ಟಣದ ಅವಧೂತರು ಹೇಳುತ್ತಿದ್ದ ಹಾಗೆ ವಿದ್ಯಾರ್ಥಿಗಳು ಕ್ಷಣಿಕ ಸುಖಕ್ಕೆ ಆಕರ್ಷಿತರಾಗದೇ ಶ್ರದ್ಧೆ, ಶಿಸ್ತು, ಪರಿಶ್ರಮದಿಂದ ಗುರಿ ಸಾಧಿಸಬೇಕು ಎಂದರು.

ವಿಧಾನ ಪರಿಷತ್ ಸದಸ್ಯ ಸಿ.ಟಿ.ರವಿ ಮಾತನಾಡಿ, ವಿದ್ಯಾರ್ಥಿಗಳು ಯಾವುದೇ ಪರಿಸ್ಥಿತಿಯಲ್ಲೂ ಆತ್ಮವಿಶ್ವಾಸವನ್ನು ಕಳೆದುಕೊಳ್ಳಬಾರದು, ಒಂದು ಅವಕಾಶ ತಪ್ಪಿದರೆ ಇನ್ನೊಂದು ಅವಕಾಶದ ಬಾಗಿಲು ತೆರೆಯುತ್ತದೆ ಎಂಬುದನ್ನು ಮನಗಾಣಬೇಕು ಎಂದು ತಿಳಿಸಿದರು.

ಸಾಹಿತಿ ಚಟ್ನಳ್ಳಿ ಮಹೇಶ್ ಮಾತನಾಡಿ, ಜೀವನದಲ್ಲಿ ಯಶಸ್ಸು ಗಳಿಸಬೇಕಾದರೆ ಅಂಕ ಗಳಿಕೆ ಮುಖ್ಯವಲ್ಲ. ಯಾವುದೇ ಕಪ್ಪು ಚುಕ್ಕೆ ಇಲ್ಲದೇ ಬದುಕುವುದು ಮುಖ್ಯ ಎಂದು ತಿಳಿಸಿದರು. ಸರ್ಕಾರಿ ನೌಕರರು, ಅಧಿಕಾರಿಗಳು ರೈತ ಪರ ಮತ್ತು ಬಡವರ ಪರವಾಗಿರಬೇಕು, ರೈತರು ಸಹಾಯ ಕೇಳಿ ಬಂದಾಗ ಅವರನ್ನು ಕೂರಿಸಿ ಮಾತನಾಡಿಸಬೇಕು, ಅವರ ಸಮಸ್ಯೆಗಳಿಗೆ ಸ್ಪಂದಿಸಬೇಕು ಎಂದು ಮನವಿ ಮಾಡಿದರು.

ಸರ್ಕಾರಿ ನೌಕರರ ಸಂಘದ ರಾಜ್ಯಾಧ್ಯಕ್ಷ ಸಿ.ಎಸ್.ಷಡಾಕ್ಷರಿ ಮಾತನಾಡಿ, ತಾವು ಸಂಘದ ಅಧ್ಯಕ್ಷರಾದ ನಂತರ ಕಳೆದ 5 ವರ್ಷಗಳಿಂದ ಪ್ರತಿ ವರ್ಷ ಎಸ್‌ಎಸ್‌ಎಲ್‌ಸಿ ಮತ್ತು ಪಿಯುಸಿ ಪರೀಕ್ಷೆಯಲ್ಲಿ ಅತಿ ಹೆಚ್ಚು ಅಂಕ ಪಡೆದ ಸರ್ಕಾರಿ ನೌಕರರ ಮಕ್ಕಳಿಗೆ ಪ್ರತಿಭಾ ಪುರಸ್ಕಾರ ಮಾಡಲಾಗುತ್ತಿದೆ, ಕಳೆದ 5 ವರ್ಷಗಳಲ್ಲಿ 50 ಸಾವಿರ ವಿದ್ಯಾರ್ಥಿಗಳಿಗೆ ಪುರಸ್ಕಾರ ಮಾಡಲಾಗಿದೆ, ಪ್ರತಿವರ್ಷ ರಾಜ್ಯಾದ್ಯಂತ 10 ಸಾವಿರ ವಿದ್ಯಾರ್ಥಿಗಳಿಗೆ ಪ್ರತಿಭಾ ಪುರಸ್ಕಾರ ಮಾಡಲಾಗುತ್ತಿದೆ ಎಂದು ತಿಳಿಸಿದರು.

ಶಿರಾಜ್ಯ ಸರ್ಕಾರಿ ನೌಕರರಿಗೆ ಉಚಿತ ಚಿಕಿತ್ಸೆ ಒದಗಿಸುವ ಆರೋಗ್ಯ ಸಂಜೀವಿನಿ ಯೋಜನೆ ಸದ್ಯದಲ್ಲೇ ಮುಖ್ಯಮಂತ್ರಿಗಳಿಂದ ಲೋಕಾರ್ಪಣೆಯಾಗಲಿದೆ, ರಾಜ್ಯದ 5 ಲಕ್ಷ ಸರ್ಕಾರಿ ನೌಕರರು ಹಾಗೂ ಅವರ ಕುಟುಂಬ ವರ್ಗದವರು ಸೇರಿ 25 ಲಕ್ಷ ಜನ ಯೋಜನೆಯ ಲಾಭ ಪಡೆಯಲಿದ್ದಾರೆ ಎಂದು ಹೇಳಿದರು.

# ಇಂದಿನ ರಾಶಿ ಭವಿಷ್ಯ

### ಮೇಷ ರಾಶಿ

ನಿಮ್ಮನ್ನು ಫಿಟ್ ಆಗಿ ಮತ್ತು ಚೆನ್ನಾಗಿರಿಸಿಕೊಳ್ಳಲು ಹೆಚ್ಚಿನ ಕ್ಯಾಲೋರಿಯ ಆಹಾರವನ್ನು ತಪ್ಪಿಸಿ ನೀವು ಇತರರ ಮಾತುಗಳನ್ನು ನಂಬಿ ಇಂದು ಹೂಡಿಕೆ ಮಾಡಿದಲ್ಲಿ ಇಂದು ಆರ್ಥಿಕ ನಷ್ಟದ ಸಾಧ್ಯತೆಯಿದೆ. ಕೌಟುಂಬಿಕ ಸಮಸ್ಯೆಗೆ ಮೊದಲ ಆದ್ಯತೆ ನೀಡಬೇಕು. ನೀವು ವಿಳಂಬವಿಲ್ಲದೇ ಇದನ್ನು ಚರ್ಚಿಸಬೇಕು, ಏಕೆಂದರೆ ಒಮ್ಮೆ ಇದನ್ನು ಬಗೆಹರಿಸಿದ ನಂತರ ಮನೆಯಲ್ಲಿನ ಜೀವನ ನಡೆಸಲು ಹೆಚ್ಚು ಸುಲಭವಾಗುತ್ತದೆ ಮತ್ತು ನಿಮ್ಮ ಕುಟುಂಬದ ಸದಸ್ಯರ ಮೇಲೆ ಪ್ರಭಾವ ಬೀರಲು ನಿಮಗೆ ಯಾವುದೇ ತೊಂದರೆ ಕಂಡುಬರುವುದಿಲ್ಲ.

### ವೃಷಭ ರಾಶಿ

ಕಳೆದ ಉದ್ಯಮಗಳ ಯಶಸ್ಸು ನಿಮ್ಮ ಆತ್ಮವಿಶ್ವಾಸವನ್ನು ಹೆಚ್ಚಿಸುತ್ತದೆ. ಇಂದು ನೀವು ನಿಮ್ಮ ಮಕ್ಕಳ ಕಾರಣದಿಂದ ಆರ್ಥಿಕ ಲಬಹವನ್ನು ಪಡೆಯುವ ಸಾಧ್ಯತೆ ಕಂಡುಬರುತ್ತಿದೆ. ಇದರಿಂದ ನೀವು ತುಂಬಾ ಸಂತೋಷಪಡುತ್ತೀರಿ. ದಿನದ ಉತ್ತರಾರ್ಧದಲ್ಲಿ ಅತ್ಯಾಕರ್ಷಕ ಮತ್ತು ಮನರಂಜನೆಯ ಏನನ್ನಾದರೂ ಹೊಂದಿಸಿ. ಇಂದು ನಿಮ್ಮ ಪ್ರೀತಿಪಾತ್ರರು ತನ್ನ ಮನಸ್ಥಿತಿಯನ್ನು ನಿಮ್ಮ ಮುಂದೆ ಇಡಲು ಸಾಧ್ಯವಾಗುವುದಿಲ್ಲ ಇದರಿಂದಾಗಿ ನೀವು ಅಸಮಾಧಾನಗೊಳ್ಳಬಹುದು.

### ಮಿಥುನ ರಾಶಿ

ಇಂದು ನಿಮಗೆ ತುಂಬ ಉನ್ನತ ಶಕ್ತಿಯಿರುವ ದಿನ ಮತ್ತು ನೀವು ಸಣ್ಣ ವಿಷಯಗಳಿಗೂ ಕಿರಿಕಿರಿಗೊಳ್ಳುತ್ತೀರಿ. ಯಶಸ್ಸಿಗೆ ಇಂದಿನ ಸೂತ್ರವೆಂದರೆ ನಾವೀನ್ಯತೆಯಿರವ ಮತ್ತು ಉತ್ತಮ ಅನುಭವ ಹೊಂದಿರುವ ಜನರ ಸಲಹೆಯಂತೆ ನಿಮ್ಮ ಹಣವನ್ನು ಹೂಡುವುದಾಗಿದೆ. ಒಬ್ಬ ಸ್ನೇಹಿತ ತನ್ನ ವೈಯಕ್ತಿಕ ಸಮಸ್ಯೆಗಳನ್ನು ಪರಿಹರಿಸುವಲ್ಲಿ ನಿಮ್ಮ ಸಲಹೆ ಪಡೆದುಕೊಳ್ಳುತ್ತಾರೆ.

### ಕರ್ಕ ರಾಶಿ

ನೀವು ಕಳೆದುಹೋದದ್ದರ ಬಗ್ಗೆ ಯೋಚಿಸುತ್ತಿದ್ದರೆ ನಿಮ್ಮ ಹತಾಶೆ ನಿಮ್ಮ ಆರೋಗ್ಯವನ್ನು ನಾಶಮಾಡಬಹುದು – ಸಾಧ್ಯವಾದಷ್ಟೂ ವಿಶ್ರಾಂತಿ ತಗೆದುಕೊಳ್ಳಲು ಪ್ರಯತ್ನಿಸಿ. ಹೂಡಿಕೆ ಮಾಡುವುದು ಅನೇಕ ಬಾರಿ ನಿಮಗೆ ಪ್ರಯೋಜನಕಾರಿಯೆಂದು ಸಾಬೀತುಪಡಿಸುತ್ತದೆ, ಇಂದು ನಿಮಗೆ ಈ ಮಾತು ಅರ್ಥವಾಗಬಹುದು ಏಕೆಂದರೆ ಯಾವುದೇ ಹಳೆಯ ಹೂಡಿಕೆಯಿಂದ ನೀವು ಪ್ರಯೋಜನವನ್ನು ಪಡೆಯಬಹುದು ಹಿರಿಯರ ಬಳಿ ನಿಮ್ಮ ಮಹತ್ವಾಕಾಂಕ್ಷೆಗಳನ್ನು ವ್ಯಕ್ತಪಡಿಸಿ ಹಾಗೂ ಅವರು ನಿಮಗೆ ಸಹಾಯ ಮಾಡಲು ಸಾಧ್ಯವಾದಷ್ಟೂ ಪ್ರಯತ್ನಿಸುತ್ತಾರೆ.

### ಸಿಂಹ ರಾಶಿ

ನಿಮ್ಮ ಮುಂಗೋಪ ನಿಮ್ಮನ್ನು ಇನ್ನೂ ಹೆಚ್ಚು ತೊಂದರೆಯಲ್ಲಿ ಸಿಲುಕಿಸಬಹುದು. ಜೀವನದ ಕೆಟ್ಟ ಕಾಲದಲ್ಲಿ ಹಣ ನಿಮ್ಮ ಕೆಲಸಕ್ಕೆ ಬರುತ್ತದೆ ಆದ್ದರಿಂದ ಇಂದಿನಿಂದಲೇ ನಿಮ್ಮ ಹಣವನ್ನು ಸಂಗ್ರಹಿಸುವ ಬಗ್ಗೆ ಯೋಚಿಸಿ ಇಲ್ಲದಿದ್ದರೆ ನೀವು ತೊಂದರೆಗೊಳಗಾಗಬಹುದು. ನಿಮ್ಮ ಮಕ್ಕಳಿಗಾಗಿ ಯೋಜನೆಗಳು ಮಾಡಲು ಅತ್ಯುತ್ತಮ ದಿನ. ತಮ್ಮ ಪ್ರೀತಿಪತ್ರರೊಡನೆ ಸಣ್ಣ ಪ್ರಯಾಣ ಕೈಗೊಳ್ಳುವವರು ಅತ್ಯಂತ ಸ್ಮರಣೀಯ ಸಮಯವನ್ನು ಹೊಂದುತ್ತಾರೆ.

### ಕನ್ಯಾ ರಾಶಿ

ಒತ್ತಡದ ಕೆಲಸದ ವೇಳಾಪಟ್ಟಿ ನಿಮ್ಮ ಸಹನೆಯನ್ನು ಕೆಣಕಬಹುದು. ವಿದೇಶಿ ಸಂಪರ್ಕಗಳನ್ನು ಹೊಂದಿರುವ ವ್ಯಾಪಾರಿಗಳಿಗೆ ಇಂದು ಹಣದ ನಷ್ಟವಾಗುವ ಸಾಧ್ಯತೆ ಇದೆ ಆದ್ದರಿಂದ ಇಂದು ಯೋಚಿಸಿ ಅರ್ಥಮಾಡಿಕೊಂಡು ನಡೆಯಿರಿ ನಿಮ್ಮ ಹಠಮಾರಿ ಪ್ರಕೃತಿ ನಿಮ್ಮ ಪೋಷಕರ ಶಾಂತಿಯನ್ನು ಹಾಳು ಮಾಡಬಹುದು. ನೀವು ಅವರ ಸಲಹೆಯನ್ನು ಪಾಲಿಸಬೇಕು. ಅವರಿಗೆ ನೋವುಂಟುಮಾಡದಿರಲು ಆಜ್ಞಾಧಾರಕರಾಗಿರುವುದು ಒಳ್ಳೆಯದು. ಪ್ರಣಯದ ನೆನಪುಗಳು ನಿಮ್ಮ ದಿನವನ್ನು ಆಕ್ರಮಿಸುತ್ತವೆ.

### ತುಲಾ ರಾಶಿ

ನಿಮ್ಮ ಬಗ್ಗೆ ನಿಮಗೇ ಉತ್ತಮ ಅಭಿಪ್ರಾಯ ಬರಲು ಕೆಲಸಗಳನ್ನು ಮಾಡಲು ಒಂದು ಅದ್ಭುತ ದಿನ. ಹಣಕ್ಕೆ ಸಂಬಂಧಿಸಿದ ಯಾವುದೇ ವಿಷಯ ನ್ಯಾಯಾಲಯ ಪ್ರಕರಣದಲ್ಲಿ ಸಿಲುಕಿಕೊಂಡಿದ್ದರೆ, ಇಂದು ನೀವು ಅದರಲ್ಲಿ ವಿಜಯವನ್ನು ಪಡೆಯಬಹುದು ಮತ್ತು ನೀವು ಹಣದ ಲಾಭವನ್ನು ಪಡೆಯಬಹುದು. ಶಿಶುವಿನ ಅನಾರೋಗ್ಯ ನಿಮ್ಮನ್ನು ವ್ಯಸ್ತವಾಗಿಡುತ್ತದೆ. ನೀವು ತಕ್ಷಣ ಗಮನ ನೀಡುವ ಅಗತ್ಯವಿರುತ್ತದೆ.

### ವೃಶ್ಚಿಕ ರಾಶಿ

ನೀವು ಧೀರ್ಘಕಾಲೀನ ಅನಾರೋಗ್ಯದಿಂದ ಬಳಲಬಹುದು. ಹಣಕಾಸಿನಲ್ಲಿ ಸುಧಾರಣೆ ನಿಶ್ಚಿತ. ಕೆಲವರಿಗೆ ಕುಟುಂಬದಲ್ಲಿ ಒಂದು ಹೊಸ ಆಗಮನ ಸಂಭ್ರಮಾಚರಣೆ ಮತ್ತು ಆನಂದದ ಕ್ಷಣಗಳನ್ನು ತೆರೆದಿಡುತ್ತದೆ. ಪ್ರೀತಿಪಾತ್ರರೊಡನೆ ಸಹಿತಿಂಡಿ ಮತ್ತು ಮಿಠಾಯಿ ಹಂಚಿಕೊಳ್ಳುವ ಸಾಧ್ಯತೆಯಿದೆ. ಇದು ನಿಮ್ಮನ್ನು ವ್ಯಕ್ತಪಡಿಸಲು ಮತ್ತು ಸೃಜನಶೀಲ ಸ್ವರೂಪದ ಯೋಜನೆಗಳಲ್ಲಿ ಕೆಲಸ ಮಾಡಲು ಒಳ್ಳೆಯ ಸಮಯ.

### ಧನು ರಾಶಿ

ದೈಹಿಕ ಲಾಭಕ್ಕಾಗಿ ವಿಶೇಷವಾಗಿ ಮಾನಸಿಕ ದೃಢತೆಗಾಗಿ ಧ್ಯಾನ ಮತ್ತು ಯೋಗ ಪ್ರಾರಂಭಿಸಿ. ನಿಮ್ಮ ಆರ್ಥಿಕ ಸ್ಥಿತಿ ಸುಧಾರಿಸಿದರೂ ಹಣದ ಹೊರಹರಿವು ನಿಮ್ಮ ಯೋಜನೆಗಳನ್ನು ಕಾರ್ಯರೂಪಕ್ಕೆ ತರುವಲ್ಲಿ ತೊಂದರೆಯುಂಟುಮಾಡುತ್ತದೆ. ಕುಟುಂಬದ ಸದಸ್ಯರ ಖುಷಿಯ ಸ್ವಭಾವ ಮನೆಯಲ್ಲಿನ ವಾತಾವರಣವನ್ನು ಹಗುರಗೊಳಿಸುತ್ತದೆ. ನಿಮ್ಮ ಪ್ರೀತಿಯ ಜೀವನದಲ್ಲಿ ಕಹಿ ಘಟನೆಗಳನ್ನು ಕ್ಷಮಿಸಿ.

### ಮಕರ ರಾಶಿ

ಸ್ನೇಹಿತರ ಮೂಲಕ ದೊರಕುವ ಜ್ಯೋತಿಶ್ಶಾಸ್ತ್ರದ ಮಾರ್ಗದರ್ಶನ ನಿಮ್ಮ ಆರೋಗ್ಯವನ್ನು ಸುಧಾರಿಸಲು ನಿಮ್ಮನ್ನು ಉತ್ತೇಜಿಸುತ್ತದೆ. ನೀವು ಸ್ವಲ್ಪ ಹೆಚ್ಚುವರಿ ಹಣ ಮಾಡಲು ಯೋಜಿಸುತ್ತದ್ದಲ್ಲಿ ಸುಭದ್ರ ಆರ್ಥಿಕ ಯೋಜನೆಗಳಲ್ಲಿ ಹೂಡಿಕೆ ಮಾಡಿ. ಮನೆಯ ವಿಷಯಗಳು ಮತ್ತು ಬಾಕಿಯಿರುವ ಗೃಹಕೃತ್ಯಗಳನ್ನು ಪೂರೈಸಲು ಒಂದು ಅನುಕೂಲಕರ ದಿನ. ಇಂದು, ನೀವು ನಿಮ್ಮ ಪ್ರಿಯತಮೆ ನಿಮ್ಮನ್ನು ಎಷ್ಟು ಪ್ರೀತಿಸುತ್ತಾರೆಂದು ತಿಳಿದುಕೊಳ್ಳುತ್ತೀರಿ.

### ಕುಂಭ ರಾಶಿ

ನಿಮ್ಮ ಚೈತನ್ಯವನ್ನು ಪುನಃ ಸಂಪಾದಿಸಲು ವಿಶ್ರಾಂತಿ ತೆಗೆದುಕೊಳ್ಳಿ. ಆರ್ಥಿಕ ಭಾಗವು ಬಲಗೊಳ್ಳುವ ಪೂರ್ಣ ಸಾಧ್ಯತೆ ಇದೆ.ನೀವು ಯಾವುದೇ ವ್ಯಕ್ತಿಗೆ ಸಾಲ ನೀಡಿದ್ದರೆ, ಇಂದು ನೀವು ಆ ಹಣವನ್ನು ಮರಳಿ ಪಡೆಯುವ ನಿರೀಕ್ಷೆಯಿದೆ ನೀವು ಹೆಚ್ಚೇನೂ ಮಾಡದೇ ಇತರರ ಗಮನ ಸೆಳೆಯಲು ಇದೊಂದು ಪರಿಪೂರ್ಣ ದಿನ. ಪ್ರೀತಿಯ ಭಾವಪರವಶತೆಯನ್ನು ಅನುಭವಿಸಲು ಯಾರಾದರೂ ದೊರಕಬಹುದು.

### ಮೀನ ರಾಶಿ

ಆರೋಗ್ಯ ಪರಿಪೂರ್ಣವಾಗಿರುತ್ತದೆ. ಈ ರಾಶಿಚಕ್ರದ ವಿವಾಹಿತ ಜನರಿಗೆ ಇಂದು ಅತ್ತೆಮನೆಯ ಕಡೆಯಿಂದ ಹಣದ ಪ್ರಯೋಜನವಾಗುವ ಸಾಧ್ಯತೆ ಇದೆ. ಮನೆಯಲ್ಲಿನ ಕೆಲವು ಬದಲಾವಣೆಗಳು ನಿಮ್ಮನ್ನು ಭಾವುಕರನ್ನಾಗಿಸಬಹುದು– ಆದರೆ ನಿಮಗೆ ಮುಖ್ಯವಾದವರಿಗೆ ನೀವು ನಿಮ್ಮ ಭಾವನೆಗಳನ್ನು ಪರಿಣಾಮಕಾರಿಯಾಗಿ ಹೇಳಲು ಸಾಧ್ಯವಾಗುತ್ತದೆ.

# ಅಂಗನವಾಡಿ ಕೇಂದ್ರಗಳಲ್ಲಿ ಎಲ್‌ಕೆಜಿ–ಯುಕೆಜಿ ತರಗತಿ ಪ್ರಾರಂಭ



**ಚಿಕ್ಕಮಗಳೂರು:** ಸಕ್ಷಮ್‌ಯೋಜನೆಯಡಿಅಂಗನವಾಡಿ ಕೇಂದ್ರಗಳನ್ನು ಸದೃಢಗೊಳಿಸುವ ಉದ್ದೇಶದೊಂದಿಗೆ ಮೂಲಭೂತ ಸೌಕರ್ಯಗಳನ್ನು ಒದಗಿಸಿ ಖಾಸಗಿ ಶಾಲೆಗಳಿಗಿಂತ ಉತ್ತಮಗುಣಮಟ್ಟದ ಶಿಕ್ಷಣವನ್ನು ನೀಡಲು ಸರ್ಕಾರ ಮುಂದಾಗಿದೆಎಂದು ಶಾಸಕ ಹೆಚ್.ಡಿ. ತಮ್ಮಯ್ಯ ಹೇಳಿದರು.

ಅವರು ಇಂದು ತಾಲ್ಲೂಕು ಪಂಚಾಯಿತಿ ಸಭಾಂಗಣದಲ್ಲಿತಾಲ್ಲೂಕು ಆಡಳಿತ, ತಾ.ಪಂ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ಶಿಶು ಅಭಿವೃದ್ಧಿಯೋಜನೆ ಇವರುಗಳ ಸಂಯುಕ್ತಾಶ್ರಯದಲ್ಲಿಏಪ ѓಡಿಸಲಾಗಿದ್ದಅಂಗನವಾಡಿಕಾರ್ಯಕತ ѓ ಮತ್ತು ಸಹಾಯಕಿಯರಿಗೆ ಸಮವಸ್ತ್ರ ವಿತರಣೆಕಾರ್ಯಕ್ರಮದಲ್ಲಿ ಭಾಗವಹಿಸಿ ಸಮವಸ್ತ್ರ ವಿತರಿಸಿ ಮಾತನಾಡಿದರು.

ಈ ಯೋಜನೆಯಡಿ ಚಿಕ್ಕಮಗಳೂರು ತಾಲ್ಲೂಕಿನಲ್ಲಿ 40 ಅಂಗನವಾಡಿ ಕೇಂದ್ರಗಳನ್ನು ಗುರ್ತಿಸಿದ್ದು, ಈ ಅಂಗನವಾಡಿ ಕೇಂದ್ರಗಳಿಗೆ ಟಿವಿ, ಪೆನ್‌ಡ್ರೈವ್, ಸ್ಟೆಬಿಲೈಜರ್ ವಿತರಣೆ ಮಾಡಲಾಗುತ್ತಿದ್ದು, ಅಂಗನವಾಡಿಕೇಂದ್ರಕ್ಕೆ ಆಗಮಿಸುವ 3–6 ವರ್ಷದ ಮಕ್ಕಳಿಗೆ ಹಾಗೂ ಇತರೆ ಫಲಾನುಭವಿಗಳಿಗೆ ಶಿಕ್ಷಣ ನೀಡಲಾಗುವುದುಎಂದು ಹೇಳಿದರು.

ಪ್ರತಿ ವರ್ಷದಂತೆತಾಲ್ಲೂಕಿನ 407 ಅಂಗನವಾಡಿ ಕೇಂದ್ರಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ʼ ಕಾರ್ಯಕರ್ತೆಯರು ಮತ್ತು ಸಹಾಯಕಿಯರಿಗೆ ಸಮವಸ್ತ್ರ ವಿತರಣೆ ಮಾಡಿದ ಅವರು, ಜೊತೆಗೆಇತರ ಪರಿಕರಗಳನ್ನು ನೀಡಲಾಗುವುದು. ಇಲಾಖೆ ವತಿಯಿಂದಉತ್ತಮಗುಣಮಟ್ಟದಎರಡು ಸಮವಸ್ತ್ರದ ಸೀರೆಗಳನ್ನು ವಿತರಿಸಲಾಗುವುದೆಂದರು.

ಅಕ್ಟೋಬರ್.2 ಕ್ಕೆ ಅಂಗನವಾಡಿ ಕೇಂದ್ರಗಳನ್ನು ಪ್ರಾರಂಭಿಸಿ 50 ವರ್ಷಗಳು ತುಂಬುತ್ತಿರುವ ಈ ಸಂದರ್ಭದಲ್ಲಿತಾಲ್ಲೂಕಿನ 47 ಅಂಗನವಾಡಿ ಕೇಂದ್ರಗಳಲ್ಲಿ ಎಲ್‌ಕೆಜಿ, ಯುಕೆಜಿ ತರಗತಿಗಳನ್ನು ಪ್ರಾರಂಭಿಸಲು ಸಚಿವೆ ಲಕ್ಷ್ಮೀ ಹೆಬ್ಬಾಳ್ಕರ್ ತಿಳಿಸಿದ್ದಾರೆ ಎಂದರು.

ಈ ಸಂಬಂಧ ಈಗಾಗಲೇ ಪಠ್ಯಪುಸ್ತಕಗಳು ಸರಬರಾಜಾಗುತ್ತಿದ್ದು, ಕನ್ನಡ ಹಾಗೂ ಇಂಗ್ಲಿಷ್ ಮಾಧ್ಯಮದಲ್ಲಿ ತರಗತಿಗಳನ್ನು ನಡೆಸಲಾಗುವುದು. 4–5 ವರ್ಷದ ಮಕ್ಕಳಿಗೆ ಎಲ್‌ಕೆಜಿ, 5–6 ವರ್ಷದ ಮಕ್ಕಳಿಗೆ ಯುಕೆಜಿ ತರಗತಿಗಳನ್ನು ಪ್ರತ್ಯೇಕ ಕೊಠಡಿಗಳಲ್ಲಿ ನಡೆಸಲಾಗುವುದೆಂದು ಮಾಹಿತಿ ನೀಡಿದರು.

ಇಲಾಖೆ ವತಿಯಿಂದಅಂಗನವಾಡಿ ಕೇಂದ್ರಗಳಿಗೆ ಮಡಿಷನ್‌ಕಿಟ್ ಸರಬರಾಜು ಮಾಡಲಾಗಿದ್ದು, ಅಂಗನವಾಡಿ ಫಲಾನುಭವಿಗಳಿಗೆ ಈ ಕಿಟ್ಟನ್ನು ಪ್ರಥಮಚಿಕಿತ್ಸೆಗಾಗಿ ಬಳಸಲಾಗುತ್ತಿದೆ ಎಂದರು.

ಮೊದಲಿಗೆ ಶಿಶು ಅಭಿವೃದ್ಧಿಯೋಜನಾಧಿಕಾರಿರಂಗನಾಥ್ ಸ್ವಾಗತಿಸಿ ಮಾತನಾಡಿ, ರಾಜ್ಯದಎಲ್ಲಾಅಂಗನವಾಡಿ ಕೇಂದ್ರಗಳಲ್ಲಿ ಹಂತ ಹಂತವಾಗಿಆಂಗ್ಲ ಮಾಧ್ಯಮದಲ್ಲಿಎಲ್‌ಕೆಜಿ, ಯುಕೆಜಿ ವಿನೂತನ ತರಗತಿಗಳನ್ನು 2025 ರಅಕ್ಟೋಬರ್ 2 ರಂದು ವಿಧ್ಯುಕ್ತವಾಗಿ ಸರ್ಕಾರದಆದೇಶದಂತೆಆರಂಭಿಸಲಾಗುವುದು. ಖಾಸಗಿ ಶಾಲೆಗಳ ಶಿಕ್ಷಣಕ್ಕೆ ಕಡಿಮೆಇಲ್ಲದಂತೆಕಾರ್ಯ ನಿರ್ವಹಿಸಲು ಸಚಿವರು ಸೂಚನೆ ನೀಡಿದ್ದಾರೆಎಂದು ಹೇಳದರು.

ಈ ಸಂದರ್ಭದಲ್ಲಿತಾ.ಪಂ ಕಾರ್ಯನಿರ್ವಹಣಾಧಿಕಾರಿ ವಿಜಯ್‌ಕುಮಾರ್, ಎಸಿಡಿಪಿಓ ರೂಪಾಕುಮಾರಿ, ವಸಂತಕುಮಾರಿ ಹಾಗೂ ಅಂಗನವಾಡಿಕಾರ್ಯಕರ್ತೆಯರು ಮತ್ತು ಸಹಾಯಕಿಯರು ಉಪಸ್ಥಿತರಿದ್ದರು.

# ಕೋಟಿರೂ ವೆಚ್ಚದಲ್ಲಿ ಅಂಬೇಡ್ಕರ್ ಭವನ ನವೀಕರಣ



**ಚಿಕ್ಕಮಗಳೂರು:** ನಗರದ ಹೃದಯ ಭಾಗದಲ್ಲಿರುವಡಾ. ಅಂಬೇಡ್ಕರ್ ಭವನವನ್ನು ಸುಮಾರು 2 ಕೋಟಿರೂ ವೆಚ್ಚದಲ್ಲಿ ನವೀಕರಣಗೊಳಿಸಲಾಗುವುದೆಂದು ಶಾಸಕ ಹೆಚ್.ಡಿ. ತಮ್ಮಯ್ಯ ತಿಳಿಸಿದರು.

ಅವರುಇಂದು ನಗರದಅಂಬೇಡ್ಕರ್ ಭವನ ನವೀಕರಣ ಸಂಬಂಧ ಅಧಿಕಾರಿಗಳು ಹಾಗೂ ಶೋಷಿತ ವರ್ಗದ ಸಂಘಟನೆಗಳ ಪ್ರಮುಖರೊಂದಿಗೆ ಭೇಟಿಮಾಡಿ ನಂತರ ಮಾತನಾಡಿದರು.

ರಾಜ್ಯಸರ್ಕಾರದ ಮುಖ್ಯಮಂತ್ರಿ ಸಿದ್ದರಾಮಯ್ಯ ಹಾಗೂ ಸಮಾಜಕಲ್ಯಾಣ ಸಚಿವ ಹೆಚ್.ಸಿ. ಮಹದೇವಪ್ಪನವರ ನೇತೃತ್ವದಲ್ಲಿ ನಗರದ ಹೃದಯ ಭಾಗದಲ್ಲಿರುವಅಂಬೇಡ್ಕರ್ ಭವನ ಸಮಗ್ರಅಭಿವೃದ್ಧಿ ಹಾಗೂ ಮೂಲಭೂತ ಸೌಕರ್ಯಒದಗಿಸಲು 2 ಕೋಟಿರೂಅನುದಾನ ಬಿಡುಗಡೆ ಮಾಡಿದೆಎಂದು ಹೇಳಿದರು.

ಶೋಷಿತ ವರ್ಗದ ಸಂಘಟನೆಗಳ ಪ್ರಮುಖರು ಹಾಗೂ ಜಿಲ್ಲಾ ಮಟ್ಟದ ಅಧಿಕಾರಿಗಳ ಸಭೆಯನ್ನು ನಡೆಸಿ ಚರ್ಚಿಸಲಾಗಿದ್ದು, ಅಭಿಪ್ರಾಯ ಸಂಗ್ರಹಿಸಲಾಗಿದೆ. ಅಂಬೇಡ್ಕರ್ ಭವನ ನಿರ್ವಹಣೆ ಮತ್ತುಅನುದಾನವನ್ನು ಸದ್ಬಳಕೆ ಮಾಡುವ ಮೂಲಕ ಸಮಗ್ರಅಭಿವೃದ್ಧಿ ಮಾಡಲಾಗುವುದೆಂದು ಹೇಳಿದರು.

ಸುಸಜ್ಜಿತ ಶೌಚಾಲಯ, ಸ್ವಚ್ಛತೆ, ಅಡುಗೆ ಮನೆ, ಸಿಸಿ ಟಿವಿ ಮುಂತಾದವುಗಳನ್ನು ಅಳವಡಿಸಲಾಗುವುದು. ನಗರದ ಹೊರಭಾಗದಲ್ಲಿ 5–10 ಎಕರೆಜಾಗವನ್ನು ಜಿಲ್ಲಾಡಳಿತ ಗುರ್ತಿಸಿದ್ದು, ಸಧ್ಯದಲ್ಲೇಜಿಲ್ಲಾಮಟ್ಟದಅಂಬೇಡ್ಕರ್‌ಅಧ್ಯಯನ ಸಂಸ್ಥೆ ಅಥವಾ ಬುದ್ಧ ವಿಹಾರ ಮಾಡಲು ನಿರ್ಧಾರ ಕೈಗೊಳ್ಳಲಾಗಿದೆ ಎಂದರು.

ವಕೀಲ ಅನಿಲ್‌ಕುಮಾರ್ ಮಾತನಾಡಿ, ಈ ಅಂಬೇಡ್ಕರ್ ಭವನವನ್ನು ಸುಸಜ್ಜಿತವಾಗಿ ಅಭಿವೃದ್ಧಿಪಡಿಸಿ ಬಡವರ ಅನುಕೂಲಕ್ಕೆ ಸದ್ಬಳಕೆ ಮಾಡಿಕೊಳ್ಳಲು ನಿರ್ಧರಿಸಲಾಗಿದೆಎಂದು ತಿಳಿಸಿದರು.

ಬಿಎಸ್‌ಪಿ ರಾಜ್ಯ ಪ್ರಧಾನ ಕಾರ್ಯದರ್ಶಿ ಕೆ.ಟಿ. ರಾಧಾಕೃಷ್ಣ ಮಾತನಾಡಿ, ನಗರದಅಂಬೇಡ್ಕರ್ ಭವನತುಂಬಾ ಶಿಥಿಲಾವಸ್ಥೆಯಲ್ಲಿದ್ದು,

ಈ ಬಗ್ಗೆ ಅನೇಕ ವರ್ಷಗಳ ಹೋರಾಟಇಂದು ಫಲಿಸಿದೆ. ಶಾಸಕ ಹೆಚ್.ಡಿ. ತಮ್ಮಯ್ಯನವರ ಪರಿಶ್ರಮದ ಫಲವಾಗಿ ರಾಜ್ಯಸರ್ಕಾರದಿಂದ 2 ಕೋಟಿರೂಅನುದಾನ ಬಿಡುಗಡೆಯಾಗಿದೆಎಂದು ಹೇಳಿದರು.

ಇಂದು ನಡೆದ ಸಭೆಯಲ್ಲಿ ಸೂಕ್ತ ಸಲಹೆಗಳನ್ನು ನೀಡಲಾಗಿದ್ದು, ಶೋಷಿತ ಸಮುದಾಯಕ್ಕೆ ಈ ಭವನ ಮುಂದೆ ಅನುಕೂಲವಾಗಲಿದೆಎಂದರು.

ಜಿಲ್ಲಾಕಾಂಗ್ರೆಸ್ ಕಾರ್ಯದರ್ಶಿ ಹಿರೇಮಗಳೂರು ರಾಮಚಂದ್ರ ಮಾತನಾಡಿ, ಅಂಬೇಡ್ಕರ್ ಭವನ ನವೀಕರಣಗೊಳ್ಳುತ್ತಿರುವುದು ಶೋಷಿತರು, ಬಡವರು, ಅಂಬೇಡ್ಕರ್ ಅನುಯಾಯಿಗಳು ಹಾಗೂ ಎಲ್ಲಾ ವರ್ಗದಜನರ ಪರವಾಗಿ ಧನ್ಯವಾದಗಳನ್ನು ಅರ್ಪಿಸಿದ ಅವರು, ಶಾಸಕರ ಮುಂದಿನ ಜೀವನಉಜ್ವಲವಾಗಿ ಬೆಳೆಯಲಿ, ರಾಜಕೀಯವಾಗಿ ಪ್ರಜ್ವಲಿಸಲಿ ಎಂದು ಶುಭಹಾರೈಸಿದರು.

### ಸ್ತ್ರೀಶಕ್ತಿ ಮಹಿಳೆಯರಿಗೆ ಕಿರುಸಾಲ ಯೋಜನೆ ಅರ್ಜಿ ಆಹ್ವಾನ

**ಶಿವಮೊಗ್ಗ:** ಶಿವಮೊಗ್ಗ ಜಿಲ್ಲೆಗಳ ಪರಿಶಿಷ್ಟ ಪಂಗಡದ ಸ್ತ್ರೀಶಕ್ತಿ ಮಹಿಳೆಯರನ್ನು ಗುಂಪು ಚಟುವಟಿಕೆಗಳ ಮೂಲಕ ಆರ್ಥಿಕವಾಗಿ ಸಬಲರನ್ನಾಗಿಸಲು ಕಿರುಸಾಲ ಯೋಜನೆಯಡಿ ರೂ. 20.00 ಲಕ್ಷಗಳ ಬಡ್ಡಿರಹಿತ ಸಾಲ ನೀಡಲು ಉದ್ದೇಶಿಸಿದ್ದು, ಅರ್ಹ ಗುಂಪುಗಳಿಂದ ಅರ್ಜಿ ಆಹ್ವಾನಿಸಿದೆ.

ಆಸಕ್ತ ಗುಂಪುಗಳು ನಿಗದಿತ ಅರ್ಜಿ ನಮೂನೆಯನ್ನು ಉಪನಿರ್ದೇಶಕರ ಕಚೇರಿ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ಶಿವಮೊಗ್ಗ ಇಲ್ಲಿ ಪಡೆದು, ಭರ್ತಿ ಮಾಡಿದ ಅರ್ಜಿಯನ್ನು ಆ. 30ರೊಳಗಾಗಿ ಸಲ್ಲಿಸುವಂತೆ ಇಲಾಖೆಯ ಉಪನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿರುತ್ತಾರೆ.


## ಗ್ರಾಮ ಪಂಚಾಯತಿ ಕಾರ್ಯಾಲಯ ವಡೆಯರಹತ್ತೂರು

ತಾಲ್ಲೂಕು : ನ್ಯಾಮತಿ ಜಿಲ್ಲೆ : ದಾವಣಗೆರೆ

ಸಂ: ಗ್ರಾ.ಪಂ/ವ/ಇ–ಟೆಂಡರ್‌ಪ್ರಕಟಣೆ/ಸಿಆರ್:/2025–26 ದಿನಾಂಕ: 28.07.2025

### ಇ–ಟೆಂಡರ್ ಪ್ರಕಟಣೆ:

ವಿಷಯ: 2025–26ನೇ ಸಾಲಿನ 15ನೇ ಹಣಕಾಸು ಯೋಜನೆಯ ಅನುದಾನದಡಿಯಲ್ಲಿ ಅನುಮೋದನೆಯಾದ ಕಾಮಗಾರಿಯನ್ನು ಇ–ಟೆಂಡರ್ ಟೆಂಡರ್ ಆಹ್ವಾನಿಸಿರುವ ಬಗ್ಗೆ

ನ್ಯಾಮತಿ ತಾಲ್ಲೂಕು ವಡೆಯರಹತೂರು ಗ್ರಾಮ ಪಂಚಾಯತಿಯಲ್ಲಿ 2025–26ನೇ ಸಾಲಿನ 15ನೇ ಹಣಕಾಸು ಯೋಜನೆಯ ಅನುದಾನದಡಿಯಲ್ಲಿ ಅನುಮೋದನೆಯಾದ 1) RDPR/2025-26/IND10572, 2) RDPR/2025-26/IND10571 ಅಕಾಮಗಾರಿಯನ್ನು ಇ–ಟೆಂಡರ್ ಆಹ್ವಾನಿಸಿದ್ದು, ದಿನಾಂಕ:29.07.2025 ರಿಂದ 04.08.2025 ಸಂಜೆ 5.00 ಗಂಟೆವರೆಗೆ ಅರ್ಜಿ ಸಲ್ಲಿಸಲು ಕೊನೆ ದಿನವಾಗಿದ್ದು, ದಿನಾಂಕ:06.08.2025 ರಂದು ಟೆಂಡರ್ ತೆರೆಯಲಾಗುವುದು. ಹೆಚ್ಚಿನ ಮಾಹಿತಿಗಾಗಿ ಅಧಿಕೃತ ವೆಬ್‌ಸೈಟ್ www.Kppp.gov.in & ವಡೆಯರಹತ್ತೂರು ಗ್ರಾಮ ಪಂಚಾಯತಿ ಕೇಂದ್ರ ಸ್ಥಾನಕ್ಕೆ ಭೇಟಿ ನೀಡಿ ಮಾಹಿತಿ ಪಡೆಯಲು ಕೋರಿದೆ ಹಾಗೂ ಕಾಮಗಾರಿಗಳಿಗೆ ಸಂಬಂಧಿಸಿದಂತೆ ಇ.ಎಂ.ಡಿ ಶೇ.2.5% ಮೊತ್ತವನ್ನು ಕಡ್ಡಾಯವಾಗಿ ಆನ್ ಲೈನ್ ಮೂಲಕ ಪಾವತಿಸುವುದು.

ಸಹಿ/–
ಪಂಚಾಯಿತಿ ಅಭಿವೃದ್ಧಿ ಅಧಿಕಾರಿ
ಗ್ರಾಮ ಪಂಚಾಯತ್ ವಡೆಯರಹತ್ತೂರು

ಸಹಿ/–
ಅಧ್ಯಕ್ಷರು
ಗ್ರಾಮ ಪಂಚಾಯತ್
ವಡೆಯರಹತ್ತೂರು


# ಜಂತ್ಲಿ ಶಿರೂರ ಗ್ರಾಮದಲ್ಲಿ ಡೆಂಗ್ಯೂ ವಿರೋಧಿ ಮಾಸಾಚರಣೆ



**ಗದಗ :** ಪ್ರಾಥಮಿಕ ಆರೋಗ್ಯ ಕೇಂದ್ರ ಜಂತಲಿಶಿರೂರಿನ ಜಂತಲಿಶಿರೂರ ಗ್ರಾಮದಲ್ಲಿ ಡೆಂಗ್ಯೂ ವಿರೋದಿ ,ಮಾಸಾಚರಣೆಯನ್ನು ಆಚರಿಸಲಾಯಿತು. ಕಾರ್ಯಕ್ರಮದಲ್ಲಿ ಜಂತಲಿ ಶಿರೂರ ಗ್ರಾಮ ಪಂಚಾಯ್ತಿಯ ಉಪಾಧ್ಯಕ್ಷರಾದ ರವಿ ದೊಡ್ಡಮನಿಯವರು ಮಾತನಾಡಿ, ಡೆಂಗ್ಯೂ ರೋಗವು ಪ್ರಸಕ್ತ ದಿನಮಾನದಲಿ ಗಂಭೀರರೋಗವಾಗಿ ಪರಿಣಮಿಸಿದೆ, ಇದನ್ನು ತಡೆಗಟ್ಟಲು ಆರೋಗ್ಯ ಇಲಾಖೆ ಸಾಕಷು ಕ್ರಮಗಳನ್ನು ತೆಗೆದುಕೊಳ್ಳುತ್ತಿದೆ, ಹಲವಾರು ಜಾಗೃತಿ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳುವದರ ಮೂಲಕಜನರಿಗೆ ಮುಂಜಾಗ್ರತಾ ಕ್ರಮಗಳಕುರಿತು ಅರಿವು ಮೂಡಿಸುತ್ತಿದ್ದಾರೆ. ಮುಂಜಾಗ್ರತಾ ಕ್ರಮಗಳನ್ನು ಅನುಸರಿಸಿದರೆ ಮಾತ್ರ ಡೆಂಗ್ಯೂ ನಿಯಂತ್ರಿಸಲು ಸಾಧ್ಯ ಎಂದರು.

ಹಿರಿಯ ಆರೋಗ್ಯ ನಿರೀಕ್ಷಣಾಧಿಕಾರಿಗಳಾದ ಮಲ್ಲಿಕಾರ್ಜುನ. ಎಫ್. ಕಲಕಂಬಿಯವರು ಮಾತನಾಡಿ ನೀರಿನ ತಾಣಗಳನ್ನು ಪರಿಶೀಲಿಸಿ, ಸ್ವಚ್ಛಗೊಳಿಸಿ, ಮುಚ್ಚಿಡಿ ಎಂಬ ಘೋಷವಾಕ್ಯದೊಂದಿಗೆ ಈ ಸಾಂಕ್ರಾಮಿಕ ರೋಗವನ್ನು ಎಲ್ಲರೂ ಸೇರಿ ನಿಯಂತ್ರಿಸೋಣ, ಡೆಂಗ್ಯೂರೋಗವು, ಈಡಿಸ್ ಈಜಿಪ್ಟೈ ಎಂಬ ಹಗಲು ಹೊತ್ತಿನಲಿ ಕಚ್ಚುವ ಸೊಳ್ಳೆಯಿಂದ ಹರಡುತ್ತದೆ. ಈರೋಗದಲಕ್ಷಣಗಳಾದಹೆಚ್ಚಿನಜ್ವರ, ತಲೆನೋವು, ವಾಂತಿ, ಸ್ನಾಯು ಮತುಸಂಧಿನೋವು, ಮತ್ತುವಿಶಿಷ್ಟಚರ್ಮದ ಗುಳ್ಳೆಗಳಅಥವಾದಡಸಲು/ ದದ್ದುಗಳನ್ನುಒಳಗೊಂಡಿರಬಹುದು. ಗುಣಮುಖವಾಗಲು ಸಾಮಾನ್ಯವಾಗಿ ಕಡಿಮೆ ಎಂದರೆ ಎರಡುರಿಂದ ಏಳು ದಿನಗಳ ಕಾಲ ತೆಗೆದುಕೊಳ್ಳುತ್ತದೆ. ಅಪರೂಪದ ಸಂದರ್ಭಗಳಲ್ಲಿ ಈ ಒಂದು ಸಣ್ಣ ಪ್ರಮಾಣದ ರೋಗವು ಮಾರಣಾಂತಿಕವಾದ ಡೆಂಗಿ ಹೆಮರಾಜಿಕ್ಷ ರವಾಗಿ ಪರಿಣಮಿಸಬಹುದು. ಪರಿಣಾಮವಾಗಿ ರಕ್ತಸ್ರಾವ, ರಕ್ತದಕಿರುಬಿಲ್ಲೆಗಳುಕಡಿಮೆಮಟ್ಟಕ್ಕೆಇಳಿಯುಯವುದು ಹಾಗೂರಕ್ತದಪ್ಲಾಸ್ಮಾದಸೋರಿಕೆ, ಅಥವಾ ಡೆಂಗಿಯ ಗಾಬರಿ ಲಕ್ಷಣಗಳಾದ, ಅಪಾಯಕಾರಿ ಕಡಿಮೆ ರಕ್ತದ ಒತ್ತಡಸಂಭವಿಸುತ್ತದೆಎಂದರು.

ಶಾಲಾ ಶಿಕ್ಷಕರೂ ಸಹಶಾಲೆಯ ಆವರಣದಲ್ಲಿ ಬಿದ್ದಿರುವ ಘನತ್ಯಾಜ್ಯಗಳನ್ನು ಗ್ರಾ.ಪಂ.ಯಗಮನಕ್ಕೆ ತಂದು ಘನತ್ಯಾಜ್ಯಗಳ ವಿಲೇವಾರಿಮಾಡಿಸಬೆಕು ಮತ್ತು ಶಾಲಾ ಪ್ರಾರ್ಥನಾಸಮಯದಲ್ಲಿ ಮಕ್ಕಳಿಗೆ ಡೆಂಗ್ಯೂ ಕುರಿತು ಮುಂಜಾಗ್ರತಾ ಕ್ರಮಗಳನ್ನು ತಿಳಿಸಬೇಕು ಎಂದರು. ಸುಲಭ ವಿಧಾನಗಳಾದ ಬೇವಿನ ಸೊಪ್ಪಿನಹೊಗೆಯನ್ನು ಹಗಲು ಹೊತ್ತಿನಲ್ಲಿ ಹಾಕುವದು, ಮಲಗುವಾಗ ಸೊಳ್ಳೆಯ ಪರದೆಗಳನ್ನು ಬಳಸುವದು, ಮೈತುಂಬಾ ಬಟ್ಟೆಗಳನ್ನು ತೊಡುವದು, ಮನೆಯ ಸುತ್ತಮುತ್ತಲೂ ನೀರು ನಿಲ್ಲದಂತೆ ನೋಡಿಕೊಳ್ಳುವದು, ಮನೆಯಲ್ಲಿ ನೀರುಂಬಿದ ತಾಣಗಳಾದ ಡ್ರಮ್ಮು, ಸಿಮೆಂಟ್ ತೊಟ್ಟಿ, ಕಲ್ಲಿನ ಬಾನಿಗಳನ್ನು ಸೊಳ್ಳೆಗಳು ಒಳಹೋಗದಂತೆ ಮುಚ್ಚಬೇಕು, ಮನೆಯ ಮುಂದೆ ಇರುವನಲ್ಲಿ ನೀರಿನ ಗುಂಡಿಗಲಲ್ಲಿ ನೀರು ನಿಲ್ಲದಂತೆ ನೋಡಿಕೊಳ್ಳಬೇಕು. .

ಆರೋಗ್ಯ ನಿರೀಕ್ಷಣಾಧಿಕಾರಿಗಳಾದ ಶಿವಕುಮಾರ ಗುರಿಕಾರವರು ಮಾತನಾಡಿ, ಈ ರೋಗವನ್ನು ತಡೆಗಟ್ಟಲು ನಮ್ಮ ಇಲಾಖೆಯು ಗ್ರಾಮದಲ್ಲಿರುವ ಆಶಾಕಾರ್ಯಕರ್ತೆಯರು, ಆರೋಗ್ಯ ನಿರೀಕ್ಷಣಾಧಿಕಾರಿಗಳು ಹಾಗೂ ಪ್ರಾಥಮಿಕ ಆರೋಗ್ಯ ಸುರಕ್ಷಾಧಿಕಾರಿಗಳ ಮೂಲಕ ಪ್ರತಿದಿನ ಲಾರ್ವಾಸಮೀಕ್ಷೆಮಾಡಿ,ಲಾರ್ವಾ ಕಂಡುಬಂದ ತಾಣಗಳನ್ನು ನಾಶಪಡಿಸುತ್ತಿದ್ದಾರೆ. ಗ್ರಾಮ ಪಂಚಾಯ್ತಿಯಿಂದಲೂ ಗ್ರಾಮದಲ್ಲಿ ನೈರ್ಮಲ್ಯ ಕಾಪಾಡಿಕೊಳ್ಳಲು ಮನವಿ ಮಾಡಿಕೊಳ್ಳಲಾಗಿದ್ದು ಕ್ರಿಮಿನಾಶಕವನ್ನು ಕೊಳಚೆ ಪ್ರದೇಶಗಳಲ್ಲಿ ಈಗಾಗಲೇ ಸಿಂಪಡಿಸಲಾಗಿದೆಮತು ಅಗತ್ಯಬಿದ್ದರೆ ಮತ್ತೊಮ್ಮೆ ಕ್ರಿಮಿನಾಶಕ ಸಿಂಪಡಿಸಲಾಗುವದು ಎಂದರು.

ಕಾರ್ಯಕ್ರಮದಲ್ಲಿ ಜಂತಲಿಶಿರೂರ ಗ್ರಾಮಪಂಚಾಯ್ತಿಯ ಅಧ್ಯಕ್ಷರಾದ ಶ್ರೀಮತಿ ಜೈತುನಬಿಬಳ್ಳಾರಿಯವರು, ಗ್ರಾ.ಪಂ. ಯಸದಸ್ಯರಾದ ಯಲ್ಲಪ್ಪಹೊಂಬಳರವರು, ಶಾಲಾ ಶಿಕ್ಷಕರಾದ ಎಸ್. ಎಮ್. ಮರಿಗೌಡರವರು, ಶ್ರೀಕಾಂತ ಗೌರಿಪುರವರು, ಪ್ರಾಥಮಿಕ ಆರೋಗ್ಯ ಸುರಕ್ಷಾಧಿಕಾರಿಯಾದ ಶ್ರೀಮತಿಮಮ್ತಾಜ್ ಚಿಂತಗುಂಟಿಯವರು,ಅಂಗನವಾಡಿಕಾರ್ಯಕರ್ತೆಯರು, ಗ್ರಾಮಪಂಚಾಯ್ತಿಯ ನೀರು ಸರಬರಾಜು ಮಾಡುವವರು, ಆಶಾ ಕಾರ್ಯಕರ್ತೆಯರು, ಗ್ರಾಮದ ಗುರುಹಿರಿಯರು ಭಾಗವಹಿಸಿದ್ದರು.

# ಜಿಲ್ಲಾ ತಂಬಾಕು ನಿಯಂತ್ರಣ ಕೋಶದ ವತಿಯಿಂದ ತಂಬಾಕು ದಾಳಿ



**ಶಿವಮೊಗ್ಗ :** ಜಿಲ್ಲಾ ತಂಬಾಕು ನಿಯಂತ್ರಣ ಕೋಶದ ವತಿಯಿಂದ ದಿನಾಂಕ 31/7/2025 ರಂದು ಶಿವಮೊಗ್ಗ ನಗರದ ಮಂಜುನಾಥ ಬಡಾವಣೆಯಲ್ಲಿ ತಂಬಾಕು ನಿಯಂತ್ರಣ ಕಾನೂನು ಉಲ್ಲಂಘಿಸುವವರ ವಿರುದ್ಧ ದಾಳಿಗಳನ್ನು ಹಮ್ಮಿಕೊಳ್ಳಲಾಯಿತು.

ಒಟ್ಟು 43 ಪ್ರಕರಣಗಳನ್ನು ದಾಖಲಿಸಿ ರೂ. 3750 ದಂಡವನ್ನು ಸಂಗ್ರಹಿಸಲಾಯಿತು. ಹಾಗೂ ತಂಬಾಕು ಸೇವನೆಯಿಂದ ಉಂಟಾಗುವ ದುಷ್ಪರಿಣಾಮಗಳು ಹಾಗೂ ಕೋಟ್ಪಾ ಕಾಯ್ದೆಯ ಕುರಿತು ತಂಬಾಕು ಮಾರಾಟಗಾರರಿಗೆ ಹಾಗೂ ಸಾರ್ವಜನಿಕರಿಗೆ ಮಾಹಿತಿ ನೀಡಲಾಯಿತು. ತಂಬಾಕು ಜಾಹಿರಾತು ಫಲಕಗಳನ್ನು ತೆರವುಗೊಳಿಸಲಾಯಿತು.

ತಂಡದಲ್ಲಿ ಜಿಲ್ಲಾ ತಂಬಾಕು ನಿಯಂತ್ರಣ ಕೋಶದ ಜಿಲ್ಲಾ ಸಲಹೆಗಾರರಾದ ಹೇಮಂತ್ ರಾಜ್ ಅರಸ್ , ಸಮಾಜ ಕಾರ್ಯಕರ್ತರಾದ ರವಿರಾಜ್ , ಮಹಾನಗರ ಪಾಲಿಕೆ ಆರೋಗ್ಯ ನಿರೀಕ್ಷಕರಾದ ವಿಕಾಸ್ ಮತ್ತು ಪೊಲೀಸ್ ಇಲಾಖೆ ಹಾಗು ಮಹಾನಗರ ಪಾಲಿಕೆಯ ಸಿಬ್ಬಂದಿಗಳು ಭಾಗವಹಿಸಿದ್ದರು.


## ಮಾನ್ಯ ಸಿವಿಲ್ ಜಡ್ಜ್ ಮತ್ತು ಜೆ.ಎಂ. ಎಫ್.ಸಿ.ನ್ಯಾಯಾಲಯ, ಜಗಳೂರು

ಸಿ.ಆರ್‌ಮಿಸ್ ನಂ:750/2025

**ಅರ್ಜಿದಾರರು:**) 1 ಶ್ರೀ ವೀರಭದ್ರಪ್ಪ ಬಿನ್ ಲೇಟ್‌ವೀರಪ್ಪ ವಯಸ್ಸು 62 ವರ್ಷ, ಕೆಲಸ ವ್ಯವಸಾಯ 2) ಶ್ರೀಮತಿ ಗಂಗಮ್ಮ ತಂದೆ ಲೇಟ್ ವೀರಪ್ಪ ಕೋಂ ಕಲ್ಲೇಶಪ್ಪ ವಯಸ್ಸು 60 ವರ್ಷ, ಕೆಲಸ ಗೃಹಿಣಿ 3) ಭಿನ್ನಾಳ ಅನಿತ ತಂದೆ ಲೇಟ್ ವೀರಪ್ಪ ಕೋಂ ಬಸವರಾಜ ವಯಸ್ಸು 47 ವರ್ಷ, ಕೆಲಸ ಗೃಹಿಣಿ ಎಲ್ಲರ ವಾಸ ಸಿದ್ದಯ್ಯನಕೋಟೆ ಗ್ರಾಮ, ಜಗಳೂರು ತಾಲ್ಲೂಕು

### ವಿರುದ್ಧ

**ಎದುರುದಾರರು:** 1) ತಹಶೀಲ್ದಾರರು, ಜನನ ಮತ್ತು ಮರಣ ನೊಂದಣಾಧಿಕಾರಿಗಳು ತಾಲ್ಲೂಕು ಕಛೇರಿ, ಜಗಳೂರು, ದಾವಣಗೆರೆ ಜಿಲ್ಲೆ2) ನೀಲಮ್ಮ ಕೋಂ ಜಿ.ನಾಗಪ್ಪ ಮನೆ ನಂ.195, ಚಂದ್ರಶೇಖರಪುರ ಗ್ರಾಮ ಕೂಡ್ಲಿಗಿ ತಾಲ್ಲೂಕು, ವಿಜಯನಗರ ಜಿಲ್ಲೆ ..7026378446

## ಸಾರ್ವಜನಿಕ ನೋಟಿಸ್

ಮೇಲ್ಕಂಡ ಪ್ರಕರಣವನ್ನು ಅರ್ಜಿದಾರರಾದ 1 ರಿಂದ 3 ಮತ್ತು 2ನೇ ಎದುರುದಾರರ ತಾಯಿಯಾದ **ದೇವಿರಮ್ಮ ಕೋಂ ವೀರಪ [DEVIRAMMA-W/O VEERAPPA]** ಇವರು ದಿನಾಂಕ:18.04.2004ರಂದು ಜಗಳೂರು ತಾಲ್ಲೂಕು, ಸೊಕ್ಕೆ ಹೋಬಳಿ, ಸಿದ್ದಯ್ಯನಕೋಟೆ ಗ್ರಾಮದ ಅರ್ಜಿದಾರರ ಮನೆಯಲ್ಲಿ ಮರಣ ಹೊಂದಿದ್ದರಿಂದ ಸದರಿ ಅಂಶವನ್ನು ಎದುರುದಾರರು ನೊಂದಾಯಿಸಿಕೊಂಡು ಮರಣ ಸಮರ್ಥನಾ ಪತ್ರವನ್ನು ನೀಡುವಂತೆ ಕೋರಿ, ಅರ್ಜಿ ಸಲ್ಲಿಸಿರುತ್ತಾರೆ. ಸದರಿ ಅರ್ಜಿದಾರರ ಅರ್ಜಿಯನ್ನು ಮಾನ್ಯ ನ್ಯಾಯಾಲಯವು ನೊಂದಾಯಿಸಿ ಕೊಂಡು ಪ್ರಕರಣವನ್ನು **ದಿನಾಂಕ:–17– 9–2025ರ ಬೆಳಿಗ್ಗೆ 11.00 ಗಂಟೆಗೆ** ವಿಚಾರಣೆಗೆ ನಿಗದಿಪಡಿಸಿದ್ದು ಅರ್ಜಿದಾರರ ಅರ್ಜಿಗೆ ಯಾರಾದರೂ ತಕರಾರು ಇದ್ದಲ್ಲಿ ತಾವಾಗಲೀ, ತಮ್ಮ ಪರ ವಕೀಲರ ಮುಖಾಂತರವಾಗಲೀ, ನಿಗದಿತ ದಿನಾಂಕ ಸಮಯದಂದು ಮೇಲ್ಕಂಡ ನ್ಯಾಯಾಲಯದಲ್ಲಿ ತಮ್ಮ ಅಹವಾಲು ಸಲ್ಲಿಸಬಹುದು. ತಪ್ಪಿದ್ದಲ್ಲಿ ಪ್ರಕರಣವನ್ನು ಏಕಪಕ್ಷೀಯವಾಗಿ ತೀರ್ಮಾನಿಸಲಾಗುವುದು ತಿಳಿಯಿರಿ. ನ್ಯಾಯಾಲಯದ ಅಪ್ಪಣೆಯ ಮೇರೆಗೆ ದಿನಾಂಕ:– 01–08–2025ರಂದು ನೀಡಲಾಗಿದೆ.

ನ್ಯಾಯಾಲಯದ ಆದೇಶದ ಮೇರೆಗೆ

ಸಹಿ/–
ಅರ್ಜಿದಾರರ ಪರ ವಕೀಲರು
(ಡಿ.ಪ್ರಕಾಶ ಸಿ. ಬಸವರಾಜ)
ವಕೀಲರು

ಸಹಿ/–
ಶಿರಸ್ತೇದಾರರು
ಸಿವಿಲ್ ಜಡ್ಜ್ ಮತ್ತು ಜೆ.ಎಂ.
ಎಫ್.ಸಿ.ನ್ಯಾಯಾಲಯ,
ಜಗಳೂರು

## ಚಳ್ಳಕೆರೆ: ತಂಬಾಕು ಕಾರ್ಯಾಚರಣೆ ಜಾಗೃತಿ

**ಚಿತ್ರದುರ್ಗ :** ಚಳ್ಳಕೆರೆ ತಾಲ್ಲೂಕಿನ ಬಸ್ ನಿಲ್ದಾಣದ ಹಿಂಭಾಗದಲ್ಲಿ ಜಿಲ್ಲಾ ಮಟ್ಟದ ತಂಬಾಕು ತನಿಖಾ ತಂಡವು ಬುಧವಾರ ತಂಬಾಕು ಉತ್ಪನ್ನಗಳ ಮಾರಾಟಗಾರರ ಅಂಗಡಿಗಳಿಗೆ ಭೇಟಿ ನೀಡಿ, ತಂಬಾಕು ಕಾರ್ಯಾಚರಣೆ ಜಾಗೃತಿ ಮೂಡಿಸಲಾಯಿತು.

ಯುವ ಜನತೆಯು ಅತೀ ಹೆಚ್ಚಾಗಿ ತಂಬಾಕಿನ ದುಶ್ಚಟಗಳಿಗೆ ಒಳಗಾಗುತ್ತಿದ್ದಾರೆ. ಇದರಿಂದಾಗಿ ಸಮಾಜದಲ್ಲಿ ಸಾವಿನ ಸಂಖ್ಯೆಯಲ್ಲಿ ಹೆಚ್ಚಾಗಿ ಯುವಕರೇ ಬಲಿಯಾಗುತ್ತಿದ್ದಾರೆ ಎಂದು ಯುವಕರಿಗೆ ಮತ್ತು ಅಂಗಡಿ ಮಾಲೀಕರಿಗೆ ತಿಳಿಸುತ್ತಾ ತಂಬಾಕು ಕಾರ್ಯಾಚರಣೆಯನ್ನು ಮಾಡಿ ಸಾರ್ವಜನಿಕರಲ್ಲಿ ಮತ್ತು ಸಾರ್ವಜನಿಕ ಸ್ಥಳಗಳಲ್ಲಿ ಧೂಮಪಾನ ಮಾಡದಂತೆ, ಪಾನ್ ಮಸಾಲ, ತಂಬಾಕು ಜಗಿದು ಉಗಿಯದಂತೆ ಎಚ್ಚರಿಸಿ ಜಾಗೃತಿಯನ್ನು ಮೂಡಿಸಲಾಯಿತು.

ಸಂಬಂಧಪಟ್ಟ ಸೆಕ್ಷನ್-4, 6ಎ ಮತ್ತು 6ಬಿ ಬೋರ್ಡ್‌ಗಳನ್ನು ಹಾಕಲು ಸೂಚಿಸಲಾಯಿತು ಮತ್ತು ಸೆಕ್ಷನ್-4 ಅಡಿಯಲ್ಲಿ 19 ಕೇಸುಗಳನ್ನು ದಾಖಲಿಸಿ ರೂ. 1750 ದಂಡವನ್ನು ಮತ್ತು ಸೆಕ್ಷನ್-6ಎ ಅಡಿಯಲ್ಲಿ 07 ಕೇಸುಗಳನ್ನು ದಾಖಲಿಸಿ ರೂ. 550 ದಂಡವನ್ನು ವಸೂಲಿ ಮಾಡಲಾಯಿತು.

## ಆ. 01 ರಂದು ವ್ಯಸನ ಮುಕ್ತ ದಿನಾಚರಣೆ

**ದಾವಣಗೆರೆ:** ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ ಹಾಗೂ ಮದ್ಯಪಾನ ಸಂಯಮ ಮಂಡಳಿ ವತಿಯಿಂದ ಶ್ರೀಶ್ರೀಶ್ರೀ ಮ.ನಿ.ಪ್ರ. ಡಾ.ಮಹಾಂತ ಶಿವಯೋಗಿ ಸ್ವಾಮೀಜಿ ಅವರ ಜನ್ಮ ದಿನದ ನಿಮಿತ್ತ ಆಗಸ್ಟ್ 01 ರಂದು, ಬೆಳಿಗ್ಗೆ 11 ಗಂಟೆಗೆ, ಜಿಲ್ಲಾಧಿಕಾರಿ ಕಚೇರಿಯ ಸಭಾಂಗಣದಲ್ಲಿ ವ್ಯಸನ ಮುಕ್ತ ದಿನಾಚರಣೆಯನ್ನು ಹಮ್ಮಿಕೊಳ್ಳಲಾಗಿದೆ ಎಂದು ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯ ಹಿರಿಯ ಸಹಾಯಕ ನಿರ್ದೇಶಕ ಧನಂಜಯಪ್ಪ.ಬಿ ತಿಳಿಸಿದ್ದಾರೆ.

## 10 ಖಾಯಂ ಚಾಲಕ ಹುದ್ದೆ : ಮಾಜಿ ಸೈನಿಕರಿಂದ ಅರ್ಜಿ ಆಹ್ವಾನ

**ದಾವಣಗೆರೆ :** ಭಾರತ್ ಎಲೆಕ್ಟ್ರಾನಿಕ್ಸ್ ಲಿಮಿಟೆಡ್ ಬೆಂಗಳೂರು 10 ಖಾಯಂ ಚಾಲಕ ಹುದ್ದೆಗಳಿಗಾಗಿ 43 ವರ್ಷದೊಳಗಿನ ಶೇಪ್-1 ಮೆಡಿಕಲ್ ಕ್ಯಟಗೆರಿ ಹೊಂದಿರುವ ಅರ್ಹ ಮಾಜಿ ಸೈನಿಕರಿಂದ ಅರ್ಜಿ ಆಹ್ವಾನಿಸಲಾಗಿದೆ. ಅರ್ಜಿ ಸಲ್ಲಿಸಲು ಕೊನೆಯ ದಿನವಾಗಿದೆ. ಆಸಕ್ತ ಹರ್ಹ ಅಭ್ಯರ್ಥಿಗಳು ಎಸ್.ಎಸ್.ಎಲ್.ಸಿ ಉತ್ತೀರ್ಣರಾಗಿದ್ದು, ಕನ್ನಡ ಭಾಷಾ ಜ್ಞಾನವನ್ನು ಕಡ್ಡಾಯವಾಗಿ ಹೊಂದಿರಬೇಕು.

ಅರ್ಜಿಯನ್ನು ತಿತಿತಿ.ಛಜಟ-ಟಿಟಜುಚಿಟಿ/ಛಿಚಿಡಿಜಜಡಿ ನಲ್ಲಿ ಸಲ್ಲಿಸಬಹುದಾಗಿದೆ. ಹೆಚ್ಚಿನ ಮಾಹಿತಿಗಾಗಿ ಇಲಾಖೆ ದೂರವಾಣಿ ಸಂಖ್ಯೆ 080-22195650 ಗೆ ಸಂಪರ್ಕಿಸಬಹುದು ಎಂದು ಸೈನಿಕ ಕಲ್ಯಾಣ ಮತ್ತು ಪುನರ್ವಸತಿ ಉಪನಿರ್ದೇಶಕ ಡಾ.ಸಿ.ಎ.ಹಿರೇಮಠ ತಿಳಿಸಿದ್ದಾರೆ.

## ವೈದ್ಯಕೀಯ ಮತ್ತು ದಂತ ವೈದ್ಯಕೀಯ ವಿದ್ಯಾಭ್ಯಾಸಕ್ಕೆ ಅರ್ಜಿ ಆಹ್ವಾನ

**ದಾವಣಗೆರೆ:** ಪ್ರಸಕ್ತ ಶೈಕ್ಷಣಿಕ ಸಾಲಿನಲ್ಲಿ ಮಾಜಿ ಸೈನಿಕರು, ಮಾಜಿ ಸೈನಿಕ ಅವಲಂಬಿತ ಮಕ್ಕಳ ವೈದ್ಯಕೀಯ ಮತ್ತು ದಂತ ವೈದ್ಯಕೀಯ ವ್ಯಾಸಂಗಕ್ಕಾಗಿ ಕೇಂದ್ರ ಸರ್ಕಾರದ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವಾಲಯದ ಸೀಟು ಹಂಚಿಕೆ ಮೇರೆಗೆ ಕೇಂದ್ರಿಯ ಸೈನಿಕ ಮಂಡಳಿಯಿಂದ ಡಿಫೆನ್ಸ್ ಕೋಟಾದಡಿ ಅರ್ಜಿ ಆಹ್ವಾನಿಸಲಾಗಿದೆ.

ರಾಷ್ಟ್ರೀಯ ಅರ್ಹತೆ ಮತ್ತು ಪ್ರವೇಶ ಪರೀಕ್ಷೆ (ನೀಟ್) ಯಲ್ಲಿ ಅರ್ಹತೆ ಪಡೆದಿರುವ ವಿದ್ಯಾರ್ಥಿಗಳು ಕೆ.ಎಸ್.ಬಿ ಜಾಲತಾಣದ ಬದಲಾಗಿ ಗೂಗಲ್ ಫಾರಂ ಮೂಲಕ ಆಗಸ್ಟ್ 15ರೊಳಗಾಗಿ ಸೈನಿಕ ಕಲ್ಯಾಣ ಮತ್ತು ಪುನರ್ವಸತಿ ಕಲ್ಯಾಣ ಇಲಾಖೆಯಿಂದ ಪಡೆದ ದೃಢೀಕೃತ ಅರ್ಹತಾ ಪ್ರಮಾಣ ಪತ್ರದೊಂದಿಗೆ ಜಾಲತಾಣ DESW Website - www.desw.gov.in and DGR Website - www.dgrindia.gov.in ನಲ್ಲಿ ಅರ್ಜಿ ಸಲ್ಲಿಸಬಹುದಾಗಿದೆ. ಹೆಚ್ಚಿನ ಮಾಹಿತಿಗಾಗಿ ಸೈನಿಕ ಕಲ್ಯಾಣ ಮತ್ತು ಪುನರ್ವಸತಿ ಇಲಾಖೆ ದೂರವಾಣಿ ಸಂಖ್ಯೆ 080182-220925 ಗೆ ಸಂಪರ್ಕಿಸಬಹುದು ಎಂದು ಇಲಾಖೆಯ ಉಪನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಅನಾಮಧೇಯ ಶವ ಪತ್ತೆ

**ದಾವಣಗೆರೆ :** ನಗರದ ಚಿಗಟೇರಿ ಜಿಲ್ಲಾ ಆಸ್ಪತ್ರೆಯ ವಾರ್ಡ್ ನಂ: 209ರಲ್ಲಿ ಹಾವೇರಿ ಜಿಲ್ಲೆಯ ಸುಣಗಾರ ಗ್ರಾಮದ ವಾಸಿಯಾದ ಅಶೋಕ ಬಿನ್ ರಾಮಪ್ಪ (31 ವರ್ಷ) ವ್ಯಕ್ತಿ ಮೃತನಾದ ಕುರಿತು ದಾವಣಗೆರೆ ಬಡಾವಣೆ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

ಮೃತರ ಚಹರೆ ವಿವರ: ಅಶೋಕ 6 ಅಡಿ ಎತ್ತರ, ಕೋಲುಮುಖ, ತೆಳುವಾದ ಮೈಕಟ್ಟು, ಗೋಧಿ ಮೈಬಣ್ಣ, ಬಚ್ಚುಬಾಯಿ ಸುಮಾರು 3 ಇಂಚು ತಲೆ ಕೂದಲು, ಕಪ್ಪು ಮತ್ತು ಕೆಂಪು ಪಟ್ಟಿಯ ಟೀ ಶರ್ಟ್, ಮೆರೂನ್ ಕಲರ್ ಚಡ್ಡಿಯನ್ನು ಧರಿಸಿರುತ್ತಾರೆ. ವಾರಸುದಾರರು ಇದ್ದಲ್ಲಿ ಬಡಾವಣೆ ಪೊಲೀಸ್ ಇನ್ಸ್‌ಪೆಕ್ಟರ್ ದೂರವಾಣಿ ಸಂಖ್ಯೆ 9480803249, 08192-272012, 259213, 253400 ತಿಳಿಸಬಹುದು.

## ಕುರಿ ಮತ್ತ ಮೇಕೆ ಸಾಕಾಣಿಕೆ ತರಬೇತಿ

**ದಾವಣಗೆರೆ:** ಕೆನರಾ ಬ್ಯಾಂಕ್ ಗ್ರಾಮೀಣ ಸ್ವ ಉದ್ಯೋಗ ತರಬೇತಿ ಸಂಸ್ಥೆಯಿಂದ ಬೆಂಗಳೂರು ಗ್ರಾಮಾಂತರ ಜಿಲ್ಲೆ ಹೊಸಕೋಟೆ ತಾಲ್ಲೂಕು ಸೊಣ್ಣಹಳ್ಳಿಪುರದಲ್ಲಿರುವ ಆಗಸ್ಟ್ ತಿಂಗಳ ಆಗಸ್ಟ್ 11 ರಿಂದ 13 ದಿನಗಳ ಕಾಲ ನಿರುದ್ಯೋಗಿ ಪುರುಷರು ಹಾಗೂ ಮಹಿಳೆಯರಿಗೆ ಉಚಿತ ಕುರಿ ಮತ್ತು ಮೇಕೆ ಸಾಕಾಣಿಕೆ ತರಬೇತಿ ಶಿಬಿರವನ್ನು ಏರ್ಪಡಿಸಲಾಗಿದೆ.

ಸ್ವಯಂ ಉದ್ಯೋಗಿಗಳಾಗಲು ಇಚ್ಚಿಸುವ 18 ರಿಂದ 35 ವರ್ಷ ವಯಸ್ಸಿನ ಕರ್ನಾಟಕ ರಾಜ್ಯದ ಯಾವುದೇ ಜಿಲ್ಲೆಯ ನಿರುದ್ಯೋಗಿ ಪುರುಷರು ಹಾಗೂ ಮಹಿಳೆಯರು ಈ ಶಿಬಿರದಲ್ಲಿ ಭಾಗವಹಿಸಬಹುದು.

ಆಸಕ್ತಿಯುಳ್ಳ ಶಿಬಿರಾರ್ಥಿಗಳು ಆಗಸ್ಟ್ 6 ರಂದು ಬೆಳಗ್ಗೆ 9 ಗಂಟೆಗೆ ಕೆನರಾ ಬ್ಯಾಂಕ್ ಗ್ರಾಮೀಣ ಸ್ವ ಉದ್ಯೋಗ ತರಬೇತಿ ಸಂಸ್ಥೆ, ಸೊಣ್ಣಹಳ್ಳಿಪುರ, ಹಸಿಗಾಳ (ಅಂಚೆ), ಹೊಸಕೋಟೆ ತಾಲ್ಲೂಕು, ಬೆಂಗಳೂರು ಗ್ರಾಮಾಂತರ ಜಿಲ್ಲೆ ಇಲ್ಲಿ ನಡೆಯುವ ನೇರ ಸಂದರ್ಶನಕ್ಕೆ ವಿದ್ಯಾರ್ಹತೆಗಳೊಂದಿಗೆ ಮತ್ತು ವಿಳಾಸ ದಾಖಲಾತಿಗಳೊಂದಿಗೆ ಹಾಜರಾಗಬೇಕು. ಹೆಚ್ಚಿನ ಮಾಹಿತಿಗಾಗಿ ದೂ.ಸಂ 9505894247, 8970476050, 9591514154, 9686248369, 8970446644 ಗಳಿಗೆ ಸಂಪರ್ಕಿಸಬಹುದೆಂದು ಸಂಸ್ಥೆಯ ನಿರ್ದೇಶಕರು ತಿಳಿಸಿದ್ದಾರೆ.

## ಕಾನೂನು ಪದವೀಧರರಿಗೆ ಶಿಷ್ಯವೇತನ ಪಡೆಯಲು ಅರ್ಜಿ ಆಹ್ವಾನ

**ದಾವಣಗೆರೆ :** ಪ್ರಸಕ್ತ ಸಾಲಿನ ಪರಿಶಿಷ್ಟ ಪಂಗಡದ ಕಾನೂನು ಪದವೀಧರರಿಗೆ ಶಿಷ್ಯವೇತನ ಪಡೆಯಲು ಆನ್‌ಲೈನ್ ಮೂಲಕ ಅರ್ಜಿ ಆಹ್ವಾನಿಸಲಾಗಿದೆ.

ಅರ್ಜಿ ಸಲ್ಲಿಸಲು ಇಲಾಖೆಯ ವೆಬ್‌ಸೈಟ್ www.tw.kar.nic.in ನಲ್ಲಿ ಸಲ್ಲಿಸಿ ಮೂಲ ಪ್ರತಿಯೊಂದಿಗೆ ಜಿಲ್ಲಾ ಪರಿಶಿಷ್ಟ ವರ್ಗಗಳ ಕಲ್ಯಾಣಾಧಿಕಾರಿಗಳ ಕಚೇರಿ ಕೊಠಡಿ ಸಂಖ್ಯೆ:45, ಜಿಲ್ಲಾಡಳಿತ ಭವನ ದಾವಣಗೆರೆ ಇಲ್ಲಿಗೆ ಸಲ್ಲಿಸಬೇಕೆಂದು ತಿಳಿಸಲಾಗಿದೆ.

# ರಾಷ್ಟ್ರಪತಿ ಅಧಿಕಾರ ಕುರಿತ ವಿಚಾರಣೆಗೆ ಸುಪ್ರೀಂಕೋರ್ಟ್ ಸಮ್ಮತಿ


**ನವದೆಹಲಿ:** ವಿಧಾನಸಭೆ ಅಂಗೀಕರಿಸಿದ ಮಸೂದೆಗಳನ್ನು ನಿರ್ವಹಿಸಲು ನ್ಯಾಯಲಯ ಸಮಯ ಮಿತಿಯನ್ನು ವಿಧಿಸಬಹುದೇ ಎಂಬ ಬಗ್ಗೆ ಸಾಂವಿಧಾನಿಕ ಸಮಸ್ಯೆಗಳನ್ನು ಪ್ರಸ್ತಾಪಿಸಿದ್ದ ರಾಷ್ಟ್ರಪತಿಗಳ ಉಲ್ಲೇಖವನ್ನು ವಿಚಾರಣೆ ಮಾಡಲು ಸುಪ್ರೀಂ ಕೋರ್ಟ್ ಸಮ್ಮತಿಸಿದೆ.

ಮುಖ್ಯ ನ್ಯಾಯಮೂರ್ತಿ ಬಿ.ಆರ್. ಗವಾಯಿ ನೇತೃತ್ವದ ಐದು ನ್ಯಾಯಾಧೀಶರ ಪೀಠವು ಆ. 12 ರೊಳಗೆ ಕೇಂದ್ರ ಮತ್ತು ರಾಜ್ಯಗಳು ತಮ್ಮ ಲಿಖಿತ ಸಲ್ಲಿಕೆಗಳನ್ನು ಸಲ್ಲಿಸುವಂತೆ ಕೇಳಿದೆ. ಹಾಗೂ ಆಗಸ್ಟ್ 19 ರಿಂದ ವಿಚಾರಣೆಯನ್ನು ಪ್ರಾರಂಭಿಸಲು ತೀರ್ಮಾನಿಸಿದೆ.

ಪಕ್ಷಗಳು ಸಮಯ ಮಿತಿಯನ್ನು ಕಟ್ಟುನಿಟ್ಟಾಗಿ ಪಾಲಿಸುವಂತೆ ಕೇಳಿಕೊಂಡ ನ್ಯಾಯಮೂರ್ತಿಗಳಾದ ಸೂರ್ಯಕಾಂತ್, ವಿಕ್ರಮ್ ನಾಥ್, ಪಿ.ಎಸ್. ನರಸಿಂಹ ಮತ್ತು ಎ.ಎಸ್. ಚಂದೂರ್ಕರ್ ಅವರನ್ನೂ ಒಳಗೊಂಡ ಪೀಠವು, ಆಗಸ್ಟ್ 19 ರಂದು ರಾಷ್ಟ್ರಪತಿಗಳ ಉಲ್ಲೇಖದ ನಿರ್ವಹಣೆಯನ್ನು ಪ್ರಶ್ನಿಸಿ ಕೇರಳ ಮತ್ತು ತಮಿಳುನಾಡಿನಂತಹ ರಾಜ್ಯಗಳು ಸಲ್ಲಿಸಿದ ಪ್ರಾಥಮಿಕ ಆಕ್ಷೇಪಣೆಗಳನ್ನು ಮೊದಲು ಆಲಿಸುವುದಾಗಿ ಹೇಳಿದೆ.

ರಾಷ್ಟ್ರಪತಿಗಳ ಉಲ್ಲೇಖವನ್ನು ಬೆಂಬಲಿಸುವ ಕೇಂದ್ರ ಮತ್ತು ರಾಜ್ಯಗಳ ಅರ್ಜಿಗಳನ್ನು





ಆಗಸ್ಟ್ 19, 20, 21 ಮತ್ತು 26 ರಂದು ವಿಚಾರಣೆ ನಡೆಸಲಾಗುವುದು ಎಂದು ಸುಪ್ರೀಂ ಕೋರ್ಟ್ ಹೇಳಿದೆ, ಆದರೆ ಅದನ್ನು ವಿರೋಧಿಸುವ ಅರ್ಜಿಗಳನ್ನು ಆಗಸ್ಟ್ 28 ಮತ್ತು ಸೆಪ್ಟೆಂಬರ್ 2, 3 ಮತ್ತು 9 ರಂದು ವಿಚಾರಣೆ ನಡೆಸಲಾಗುವುದು. ಯಾವುದೇ ರೀತಿಯ ಮರುಪ್ರತ್ಯಾರೋಪ ಸಲ್ಲಿಕೆಗಳಿದ್ದರೆ, ಅವುಗಳನ್ನು ಸೆಪ್ಟೆಂಬರ್ 10 ರಂದು ವಿಚಾರಣೆ ನಡೆಸಲಾಗುವುದು ಎಂದು ಪೀಠ ಹೇಳಿದೆ. ಜುಲೈ 22 ರಂದು, ರಾಷ್ಟ್ರಪತಿಗಳ ಉಲ್ಲೇಖದಲ್ಲಿ ಎತ್ತಲಾದ ಸಮಸ್ಯೆಗಳು ಇಡೀ ದೇಶದ ಮೇಲೆ ಪರಿಣಾಮ ಬೀರುತ್ತವೆ ಎಂದು ಸುಪ್ರೀಂ ಕೋರ್ಟ್ ಗಮನಿಸಿದೆ. ಮೇ ತಿಂಗಳಲ್ಲಿ, ರಾಷ್ಟ್ರಪತಿ ದ್ರೌಪದಿ ಮುರ್ಮು ಅವರು ರಾಜ್ಯ ವಿಧಾನಸಭೆಗಳು ಅಂಗೀಕರಿಸಿದ ಮಸೂದೆಗಳನ್ನು ನಿರ್ವಹಿಸುವಾಗ ರಾಷ್ಟ್ರಪತಿಗಳು ವಿವೇಚನೆಯನ್ನು ಚಲಾಯಿಸಲು ನ್ಯಾಯಾಂಗ ಆದೇಶಗಳ ಮೂಲಕ ಕಾಲಮಿತಿಗಳನ್ನು ವಿಧಿಸಬಹುದೇ ಎಂದು ಉನ್ನತ ನ್ಯಾಯಾಲಯದಿಂದ ತಿಳಿದುಕೊಳ್ಳಲು ವಿಧಿ 143(1) ರ ಅಡಿಯಲ್ಲಿ ಅಧಿಕಾರವನ್ನು ಚಲಾಯಿಸಿದ್ದರು. ತಮಿಳುನಾಡು ಸರ್ಕಾರ ಪ್ರಶ್ನಿಸಿದ ಮಸೂದೆಗಳನ್ನು ನಿರ್ವಹಿಸುವಲ್ಲಿ ರಾಜ್ಯಪಾಲರ ಅಧಿಕಾರಗಳ ಕುರಿತು ಸುಪ್ರೀಂ ಕೋರ್ಟ್ ಏಪ್ರಿಲ್ 8 ರಂದು ನೀಡಿದ ತೀರ್ಪಿನ ಹಿನ್ನೆಲೆಯಲ್ಲಿ ರಾಷ್ಟ್ರಪತಿಗಳಿಂದ ಇಂತಹ ನಿರ್ಧಾರ ಬಂದಿತ್ತು. ಮೊದಲ ಬಾರಿಗೆ ತೀರ್ಪು, ರಾಷ್ಟ್ರಪತಿಗಳು ಅಂತಹ ಉಲ್ಲೇಖವನ್ನು ಸ್ವೀಕರಿಸಿದ ದಿನಾಂಕದಿಂದ ಮೂರು ತಿಂಗಳೊಳಗೆ ರಾಜ್ಯಪಾಲರು ತಮ್ಮ ಪರಿಗಣನೆಗೆ ಕಾಯ್ದಿರಿಸಿದ ಮಸೂದೆಗಳ ಬಗ್ಗೆ ನಿರ್ಧರಿಸಬೇಕೆಂದು ಸೂಚಿಸಿದೆ.

# ಸಮರ್ಪಕ ಯೂರಿಯಾ ಗೊಬ್ಬರ ವಿತರಿಸಲು ಎಚ್.ಪಿ.ರಾಜೇಶ್ ಆಗ್ರಹ

**ಜಗಳೂರು :** ರೈತರಿಗೆ ಸಮರ್ಪಕವಾಗಿ ಯೂರಿಯಾ ರಸಗೊಬ್ಬರ ವಿತರಿಸಲು ಸರ್ಕಾರ ತಕ್ಷಣವೇ ಅಗತ್ಯಕ್ರಮ ಕೈಗೊಳ್ಳಬೇಕು ಎಂದು ಮಾಜಿ ಶಾಸಕ ಎಚ್.ಪಿ.ರಾಜೇಶ್ ಆಗ್ರಹಿಸಿದರು.

ಪಟ್ಟಣದ ಕೃಷಿ ಇಲಾಖೆ ಅಧಿಕಾರಿಗಳೊಂದಿಗೆ ಬಿಜೆಪಿ ಪಕ್ಷದ ರೈತ ಮೋರ್ಚಾ ಪದಾಧಿಕಾರಿಗಳೊಂದಿಗೆ ಚರ್ಚಿಸಿ ನಂತರ ಮಾತನಾಡಿದ ಅವರು, ಉತ್ತಮ ಮಳೆಯಾಗಿ ಬೆಳೆಗಳು ಕೈಗೆಟುಕುವ ಸ್ಥಿತಿಯಲ್ಲಿ ಯೂರಿಯಾ ರಸ ಗೊಬ್ಬರ ಕೃತಕ ಅಭಾವ ಉಂಟಾಗಿದೆ. ಕೂಡಲೇ ಸಕಾಲದಲ್ಲಿ ಕೃಷಿ ಇಲಾಖೆ ಅಧಿಕಾರಿಗಳು ರಸಗೊಬ್ಬರ ವಿತರಿಸಲು ಮುಂದಾಗಬೇಕು ಎಂದು ಹೇಳಿದರು.



ಪಟ್ಟಣದಲ್ಲಿ ಮಲ್ಪೆ-ಮೊಳಕಾಲ್ಮೂರು ರಾಜ್ಯ ಹೆದ್ದಾರಿ ಮುಖ್ಯ ರಸ್ತೆ ವಿಸ್ತರಣೆ ಕಾರ್ಯದ ಬಗ್ಗೆ ಶಾಸಕರು ಸ್ಪಷ್ಟನೆ ನೀಡಬೇಕು. ಮೂರು ನಾಲ್ಕು ಬಾರಿ ಜಿಲ್ಲಾಧಿಕಾರಿಗಳ ನೇತೃತ್ವದಲ್ಲಿ ಅಳತೆ ಸಮೀಕ್ಷೆ ಕಾರ್ಯ ನಡೆದಿದೆ. ಅಲ್ಲದೆ ಹೋರಾಟಗಾರರು ರಸ್ತೆಯ ಎರಡೂ ಬದಿ 69 ಅಡಿ ಅಗಲೀಕರಣಕ್ಕೆ ಆಗ್ರಹಿಸಿ ಪ್ರತಿಭಟನೆ ನಡೆಸಿದ್ದಾರೆ. ಆದರೆ ಕೆಲ ವರ್ತಕರು ತಮಗಿಷ್ಟ ಬಂದಂತೆ ಮಳಿಗೆ ತೆರವುಗೊಳಿಸಿಕೊಂಡು ಪುನಃ ಕಟ್ಟಡ ನಿರ್ಮಾಣ ಮಾಡಿಕೊಳ್ಳುತ್ತಿದ್ದಾರೆ. ಇದು ಗೊಂದಲದ ಗೂಡಾಗಿದೆ. ಶಾಸಕರು ಮತ್ತು ವರ್ತಕರ ಮಧ್ಯೆ ಒಳ ಒಪ್ಪಂದ ನಡೆದಿದೆಯಾ? ಎಂಬ ಅನುಮಾನಗಳು ಮೂಡುತ್ತಿವೆ. ಸರ್ಕಾರದ ನಿಯಮಾನು ಸಾರ ಸರ್ಕಾರಿ ಸ್ವಾಮ್ಯದಲ್ಲಿರುವ ಕಟ್ಟಡಗಳನ್ನು ನಿಯಮಾನುಸಾರ 69 ಅಡಿ ಅಗಲೀಕರಣಕ್ಕೆ ಮೊದಲು ತೆರವುಗೊಳಿಸಲಿ, ಪಟ್ಟಣ ಪಂಚಾಯಿತಿ ಬಿಜೆಪಿ ತೆಕ್ಕೆಯಲ್ಲಿದ್ದರೂ ಯಾವುದೇ ಪರಿಪೂರ್ಣ ಮಾಹಿತಿ ಸಿಗುತ್ತಿಲ್ಲ ಎಂದರು.

ಈ ಸಂದರ್ಭದಲ್ಲಿ ಬಿಜೆಪಿ ರೈತ ಮೋರ್ಚಾ ರಾಜ್ಯ ಕಾರ್ಯದರ್ಶಿ ಡಾ.ನವೀನ್ ಕುಮಾರ್, ಉಪಾಧ್ಯಕ್ಷ ಲೋಕಿಕೆರೆ ನಾಗರಾಜ್, ಪಟ್ಟಣ ಪಂಚಾಯಿತಿ ಅಧ್ಯಕ್ಷ ನವೀನ್ ಕುಮಾರ್, ಸದಸ್ಯ ರೇವಣ್ಣ, ಮುಖಂಡರಾದ ಬಿಸ್ತುವಳ್ಳಿ ಬಾಬು, ಓಬಳೇಶ್, ಬಿದರಕೆರೆ ರವಿಕುಮಾರ್, ಜೆ.ವಿ.ನಾಗರಾಜ್, ಮರೇನಹಳ್ಳಿ ಶೇಖರಪ್ಪ ಇದ್ದರು.

# ಜಗಳೂರಿನಲ್ಲಿ ಗೊಬ್ಬರಕ್ಕಾಗಿ ರೈತರ ಆಕ್ರೋಶ

## ರಸ್ತೆ ತಡೆದು ಪ್ರತಿಭಟನೆ, ಸರ್ಕಾರ-ಅಧಿಕಾರಿಗಳ ವಿರುದ್ಧ ಘೋಷಣೆ

**ಜಗಳೂರು:** ತಾಲ್ಲೂಕಿನಲ್ಲಿ ಮುಂಗಾರು ಮಳೆ ಬಿರುಸಾಗಿ ಸುರಿಯುತ್ತಿದ್ದರೂ, ಮೆಕ್ಕೆಜೋಳ ಫಸಲಿಗೆ ಅಗತ್ಯವಾದ ಯೂರಿಯಾ ಗೊಬ್ಬರ ಸಿಗದೆ ರೈತರು ಹೈರಾಣಾಗಿದ್ದಾರೆ. ಕಳೆದ ಒಂದು ವಾರದಿಂದ ಅಂಗಡಿಗಳಿಗೆ ಅಲೆದಾಡಿದರೂ ಗೊಬ್ಬರ ಸಿಗದ ಕಾರಣ, ನೂರಾರು ರೈತರು ಇಂದು ಜಗಳೂರಿನ ಅಂಬೇಡ್ಕರ್ ವೃತ್ತದಲ್ಲಿ ದಾವಣಗೆರೆ ಮತ್ತು ಚಿತ್ರದುರ್ಗ ರಸ್ತೆಗಳನ್ನು ಬಂದ್ ಮಾಡಿ, ಸರ್ಕಾರ ಮತ್ತು ಅಧಿಕಾರಿಗಳ ವಿರುದ್ಧ ಘೋಷಣೆ ಕೂಗಿ ತಮ್ಮ ಆಕ್ರೋಶ ಹೊರಹಾಕಿದರು.

ನಿನ್ನೆ ತಾಲ್ಲೂಕು ಕಚೇರಿಗೆ ಮುತ್ತಿಗೆ ಹಾಕಿ ಗೊಬ್ಬರಕ್ಕಾಗಿ ಆಗ್ರಹಿಸಿದ್ದ ರೈತರು, ಇಂದು ರೈತ ಸಂಘದ ಹುಚ್ಚವನಹಳ್ಳಿ ಮಂಜುನಾಥ್ ಬಣ ಮತ್ತು ವಾಸುದೇವ ಮೇಟಿ ಬಣದ ನೇತೃತ್ವದಲ್ಲಿ ಅಕ್ಷರಶಃ ಬೀದಿಗಿಳಿದು ಪ್ರತಿಭಟನೆ ನಡೆಸಿದರು.

ದೊಡ್ಡ ರೈತರು ಹೆಚ್ಚಿನ ಬೆಲೆಗೆ ಗೊಬ್ಬರ ಖರೀದಿಸುತ್ತಿದ್ದಾರೆ, ಆದರೆ ಸಣ್ಣ ಮತ್ತು ಅತಿ ಸಣ್ಣ ರೈತರಿಗೆ ತಮ್ಮ ಬೆಳೆಗಳನ್ನು ಉಳಿಸಿಕೊಳ್ಳಲು ಯೂರಿಯಾ ಗೊಬ್ಬರ ಸಿಗುತ್ತಿಲ್ಲ. ಮಾರಾಟಗಾರರು ಕೃತಕ ಅಭಾವ ಸೃಷ್ಟಿಸುತ್ತಿದ್ದಾರೆ. ಅಧಿಕಾರಿಗಳು



ಯಾವುದೇ ಕ್ರಮ ಕೈಗೊಳ್ಳುತ್ತಿಲ್ಲ ಎಂದು ರೈತ ಮುಖಂಡರು ದೂರಿದರು.

ಒಂದು ವಾರದಿಂದಲೂ ಸಣ್ಣ ಮತ್ತು ಅತಿ ಸಣ್ಣ ರೈತರು ಅಂಗಡಿಗಳ ಮುಂದೆ ಸಾಲುಗಟ್ಟಿ ನಿಂತಿದ್ದರೂ ಗೊಬ್ಬರ ಸಿಗದಿರುವುದು ಅವರ ಆತಂಕಕ್ಕೆ ಕಾರಣವಾಗಿದೆ. ಉತ್ತಮ ಮಳೆಯಾಗುತ್ತಿದ್ದು, ಮೆಕ್ಕೆಜೋಳ ಬೆಳೆಗೆ ಯೂರಿಯಾ ಗೊಬ್ಬರ ನೀಡುವುದು ಅತಿ ಅವಶ್ಯಕವಾಗಿದೆ ಎಂದು ರೈತರು ತಿಳಿಸಿದರು.

ಸ್ಥಳಕ್ಕೆ ಆಗಮಿಸಿದ ತಹಶೀಲ್ದಾರ್, ಕೃಷಿ ಇಲಾಖೆಯ ಉಪನಿರ್ದೇಶಕರು ಹಾಗೂ ಜಂಟಿ ಕೃಷಿ ನಿರ್ದೇಶಕರು, "ನಾಳೆ ಜಗಳೂರು ತಾಲೂಕಿಗೆ 160 ಟನ್ ಯೂರಿಯಾ ಗೊಬ್ಬರ ಬರಲಿದ್ದು, ಗುರುವಾರ ಎಪಿಎಂಸಿ ಆವರಣದಲ್ಲಿ ವಿತರಣೆಗೆ ಕ್ರಮ ಕೈಗೊಳ್ಳಲಾಗುವುದು" ಎಂದು ಭರವಸೆ ನೀಡಿದರು. ಆದರೆ, ಅಧಿಕಾರಿಗಳ ಸಮಜಾಯಿಷಿಗೆ ಒಪ್ಪದ ರೈತರು, "ಒಂದು ವಾರದಿಂದಲೂ ಅಧಿಕಾರಿಗಳು ನೆಪ ಹೇಳುತ್ತಿದ್ದಾರೆ. ನಮಗೆ ನಾಳೆಯಿಂದಲೇ ಗೊಬ್ಬರ ವಿತರಿಸಬೇಕು" ಎಂದು ಒತ್ತಾಯಿಸಿದರು. ಇದಕ್ಕೆ ಪ್ರತಿಯಾಗಿ ಅಧಿಕಾರಿಗಳು, 'ತಾಲ್ಲೂಕಿಗೆ ಹಂತ ಹಂತವಾಗಿ ಯೂರಿಯಾ ಗೊಬ್ಬರ ಪೂರೈಸಲಾಗುತ್ತಿದೆ. ಆದರೆ, ರೈತರು ಅಗತ್ಯಕ್ಕಿಂತಲೂ ಹೆಚ್ಚುವರಿಯಾಗಿ ರಸಗೊಬ್ಬರ ಬಳಸುತ್ತಿದ್ದಾರೆ. ಯೂರಿಯಾ ಗೊಬ್ಬರವನ್ನು ಮಿತವಾಗಿ ಬಳಸಬೇಕು' ಎಂದು ಮನವಿ ಮಾಡಿದರು.

ಪ್ರತಿಭಟನೆಯಲ್ಲಿ ಕುಮಾರ್ ಭರಮಸಮುದ್ರ, ತಿಪ್ಪೇಸ್ವಾಮಿ, ಮಲ್ಲೇಶ್, ಚಿರಂಜೀವಿ ಚಿಕ್ಕಮಲ್ಲನಹೊಳೆ, ರಾಜು ಸೇರಿದಂತೆ ರೈತ ಸಂಘದ ಪದಾಧಿಕಾರಿಗಳು, ಮುಖಂಡರು, ರೈತರು ಮತ್ತು ರೈತ ಮಹಿಳೆಯರು ಭಾಗವಹಿಸಿದ್ದರು.

# ರಾಜ್ಯ ರಾಜಕೀಯದಲ್ಲಿ ಭಾರೀ ಸಂಚಲನ ಮೂಡಿಸಿದ ಮಲ್ಲಿಕಾರ್ಜುನ ಖರ್ಗೆ ಹೇಳಿಕೆ

**ಬೆಂಗಳೂರು :** ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಅವರ ಹೇಳಿಕೆ ರಾಜ್ಯ ರಾಜಕೀಯದಲ್ಲಿ ಭಾರೀ ಸಂಚಲನ ಮೂಡಿಸಿದ್ದು, ನಾಯಕತ್ವ ಬದಲಾವಣೆ ಬಗೆಗಿನ ಚರ್ಚೆಗೂ ಇಂಬು ನೀಡಿದೆ. ಈ ಹಿಂದೆ ತಮಗೆ ಮುಖ್ಯಮಂತ್ರಿಯಾಗುವ ಅವಕಾಶಗಳು ತಪ್ಪಿ ಹೋದ ಬಗ್ಗೆ ವಿಜಯಪುರದ ಕಾರ್ಯಕ್ರಮದಲ್ಲಿ ಮಲ್ಲಿಕಾರ್ಜುನ ಖರ್ಗೆ ಹೇಳಿಕೆ ನೀಡುವ ಮೂಲಕ ಮೊದಲ ಬಾರಿಗೆ ತಮ ಅಸಮಾಧಾನವನ್ನು ಹೊರಹಾಕಿದ್ದರು. ಆದರೆ ಅವರು ತಮ ಹೇಳಿಕೆ ನೀಡುವ ವೇಳೆಯಲ್ಲಿ ಸ್ಥಾನಮಾನಗಳು ಸಿಗಲಿ, ಸಿಗದೇ ಇರಲಿ ಪಕ್ಷನಿಷ್ಠೆ ಮುಖ್ಯ ಎಂಬ ಅಭಿಪ್ರಾಯವನ್ನು ವ್ಯಕ್ತಪಡಿಸಿದ್ದರು.

ಖರ್ಗೆಯವರ ಹೇಳಿಕೆಗಳನ್ನು ಬೇರೆ ರೀತಿಯಲ್ಲೇ ಬಿಂಬಿಸ ಲಾಗುತ್ತಿದೆ. ರಾಷ್ಟ್ರ ರಾಜಕಾರಣದಿಂದ ರಾಜ್ಯ ರಾಜಕಾರಣಕ್ಕೆ ಖರ್ಗೆ ಮರಳುತ್ತಾರೆ., ಮುಖ್ಯಮಂತ್ರಿಯಾಗುತ್ತಾರೆ ಎಂಬೆಲ್ಲಾ ಚರ್ಚೆಗಳು ನಡೆಯುತ್ತವೆ. ಇದು ಕಾಂಗ್ರೆಸ್‌ನ ಸಚಿವರು, ಶಾಸಕರಿಗೆ ಬಿಸಿ ತುಪ್ಪವಾಗಿದೆ.

ಸಿದ್ದರಾಮಯ್ಯನವರ ಬೆಂಬಲಿಗರು ಶಾಸಕಾಂಗ ಸಭೆಯಲ್ಲಿ 5 ವರ್ಷಗಳಿಗೆ ಸಿದ್ದರಾಮಯ್ಯನವರನ್ನು ಮುಖ್ಯಮಂತ್ರಿ ಎಂದು ಆಯ್ಕೆ ಮಾಡಲಾಗಿದೆ. ಯಾವುದೇ ಸಂದರ್ಭದಲ್ಲೂ ಬದಲಾವಣೆಯ ಪ್ರಶ್ನೆ ಇಲ್ಲ ಎಂದು ಹೇಳುವ ಮೂಲಕ ಖರ್ಗೆಯವರ ರಂಗಪ್ರವೇಶಕ್ಕೆ ಪರೋಕ್ಷವಾಗಿ ವಿರೋಧ ವ್ಯಕ್ತಪಡಿಸುತ್ತಿದ್ದಾರೆ.



ಇದಕ್ಕೆ ಪ್ರತಿಯಾಗಿ ಸಿದ್ದರಾಮಯ್ಯನವರನ್ನು ಅಸಹನೆಯಿಂದಲೇ ಸಹಿಸಿಕೊಂಡಿರುವ ಕೆಲ ಸಚಿವರು, ಶಾಸಕರು ಮಲ್ಲಿಕಾರ್ಜುನ ಖರ್ಗೆಯವರಿಗೆ ಪ್ರಧಾನಿಯಾಗುವ ಅರ್ಹತೆ ಇದೆ. ಮುಖ್ಯಮಂತ್ರಿ ಸೇರಿದಂತೆ ಯಾವುದೇ ಸ್ಥಾನಗಳನ್ನು ನಿಭಾಯಿಸುವ ಸಾಮರ್ಥ್ಯ ಅವರಿಗಿದೆ. 50 ವರ್ಷಗಳ ಹಿರಿಯ ಅನುಭವಿ ರಾಜಕಾರಣಿ ಮಲ್ಲಿಕಾರ್ಜುನ ಖರ್ಗೆಯವರು ರಾಜ್ಯ ರಾಜಕಾರಣಕ್ಕೆ ಬಂದರೆ ಅದರಲ್ಲಿ ತಪ್ಪೇನೂ ಇಲ್ಲ ಎಂದು ಅಡ್ಡಗೋಡೆ ಮೇಲೆ ದೀಪ ಇಡುವಂತಹ ಮಾತುಗಳನ್ನಾಡುತ್ತಿದ್ದಾರೆ.

ಖರ್ಗೆ ರಾಜ್ಯ ರಾಜಕಾರಣಕ್ಕೆ ಬರುತ್ತಾರೋ, ಇಲ್ಲವೋ ಎಂಬುದು ಮಿಲಿಯನ್ ಡಾಲರ್ ಪ್ರಶ್ನೆಯಾಗಿದ್ದು, ಇದಕ್ಕೆ ಸದ್ಯಕ್ಕೆ ನಿಖರ ಉತ್ತರ ದೊರೆಯುವ ಸಾಧ್ಯತೆಗಳು ಕಡಿಮೆ. ಖರ್ಗೆಯವರು ಅತ್ಯಂತ ಪಕ್ಷನಿಷ್ಠರಾಗಿದ್ದು, ಈವರೆಗೂ ಯಾವುದೇ ವೇದಿಕೆಗಳಲ್ಲಿ ತಮಗಾದ ರಾಜಕೀಯ ಅನ್ಯಾಯದ ಬಗ್ಗೆ ಅಸಮಾಧಾನ ವ್ಯಕ್ತಪಡಿಸಿರಲಿಲ್ಲ. ಪಕ್ಷದಲ್ಲಿ ಬಹಳಷ್ಟು ಉನ್ನತ ಸ್ಥಾನಗಳನ್ನು ಅನುಭವಿಸಿದ ಉನ್ನತ ನಾಯಕರು ಕಾಂಗ್ರೆಸ್ ತೊರೆದು ಹೊರ ಹೋದರು. ಪದೇಪದೇ ಅವಕಾಶ ವಂಚಿತರಾದರೂ ಕೂಡ ಖರ್ಗೆಯವರು ಪಕ್ಷದಲ್ಲೇ ಉಳಿಯುವ ಮೂಲಕ ಸೈದ್ಧಾಂತಿಕ ನಿಷ್ಠೆ ಪ್ರದರ್ಶಿಸಿದರು.

ಎಐಸಿಸಿ ಅಧ್ಯಕ್ಷರಾಗಿರುವ ಅವರು ಈಗ ತಮಗೆ ಅವಕಾಶ ತಪ್ಪಿದ್ದರ ಬಗ್ಗೆ ವಿಷಾದ ವ್ಯಕ್ತಪಡಿಸಿದ್ದು ವ್ಯಾಪಕ ಚರ್ಚೆಗೆ ಗಾಸವಾಗಿದೆ. ರಾಜ್ಯದಲ್ಲಿ ಮುಖ್ಯಮಂತ್ರಿ ಸ್ಥಾನದ ಮೇಲೆ ಉಪ ಮುಖ್ಯ ಮಂತ್ರಿ ಡಿ.ಕೆ.ಶಿವಕುಮಾರ್, ಸಚಿವರಾದ ಪರಮೇಶ್ವರ್, ಎಂ.ಬಿ.ಪಾಟೀಲ್ ಸೇರಿದಂತೆ ಅರ್ಧ ಡಜನ್‌ಗೂ ಹೆಚ್ಚಿನ ನಾಯಕರು ಕಣ್ಣಿಟ್ಟಿದ್ದಾರೆ.

ಈ ಹಿಂದೆ ವಿಧಾನಸಭೆ ಚುನಾವಣೆಯಲ್ಲಿ ಡಿಕೆಶಿ ಬಹಿರಂಗ ಹೇಳಿಕೆ ನೀಡಿ ಖರ್ಗೆಯವರು ಮುಖ್ಯಮಂತ್ರಿಯಾಗುವುದಾದರೆ ತಾವು ರೇಸ್‌ನಿಂದ ಹಿಂದೆ ಸರಿಯುವುದಾಗಿ ಹೇಳಿದ್ದರು. ಆದರೆ ಆ ವೇಳೆ ಮಲ್ಲಿಕಾರ್ಜುನ ಖರ್ಗೆ ತಾವು ರಾಜಕೀಯಕ್ಕೆ ಮರಳುವುದಿಲ್ಲ ಎಂದಿದ್ದರು. ಈ ಮತ್ತೆ ಖರ್ಗೆಯವರನ್ನು ಎಳೆದು ತರುವ ಮೂಲಕ ಸಿದ್ದರಾಮಯ್ಯನವರ ನಾಯಕತ್ವದ ಅಧಿಪತ್ಯಕ್ಕೆ ಅಡೆತಡೆ ಸೃಷ್ಟಿಸುವ ಪ್ರಯತ್ನಗಳಾಗಿದ್ದವು ಎಂಬ ಚರ್ಚೆಗಳಾಗುತ್ತಿವೆ.

# ಸಂಖ್ಯಾಶಾಸ್ತ್ರಕ್ಕೆ 'ಮಹಾಲನೋಬಿಸ್' ಕೊಡುಗೆ ಅಪಾರ




**ಚಿತ್ರದುರ್ಗ :** ಸಾಂಖ್ಯಿಕ ತಜ್ಞರಾದ ಪ್ರೊ.ಪಿ.ಸಿ.ಮಹಾಲನೋಬಿಸ್ ಅವರು ಸಂಖ್ಯಾಶಾಸ್ತ್ರಕ್ಕೆ ಅಪಾರವಾದ ಕೊಡುಗೆ ನೀಡಿದ್ದಾರೆ ಎಂದು ಜಿಲ್ಲಾ ಪಂಚಾಯಿತಿ ಮುಖ್ಯ ಯೋಜನಾಧಿಕಾರಿ ಸಿ.ಎಸ್.ಗಾಯತ್ರಿ ಹೇಳಿದರು.

ನಗರದ ಜಿಲ್ಲಾ ಸಂಖ್ಯಾ ಸಂಗ್ರಹಣಾಧಿಕಾರಿಗಳ ಕಚೇರಿಯಲ್ಲಿ ಮಂಗಳವಾರ ಸಾಂಖ್ಯಿಕ ತಜ್ಞರಾದ ಪ್ರೊ.ಪಿ.ಸಿ.ಮಹಲನೋಬಿಸ್ ಅವರ ಜನ್ಮ ದಿನಾಚರಣೆಯನ್ನು "ಸಾಂಖ್ಯಿಕ ದಿನಾಚರಣೆ"ಯನ್ನಾಗಿ ಆಚರಿಸುವ ಸಲುವಾಗಿ "75 years of National sample Survey" ವಿಷಯದ ಕುರಿತು ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು.

ಪ್ರೊ.ಪಿ.ಸಿ.ಮಹಾಲನೋಬಿಸ್ ಅವರು ಭಾರತ ಸಂಖ್ಯಾಶಾಸ್ತ್ರದ ಪಿತಾಮಹರಾಗಿದ್ದು, ಅವರು ಹಾಕಿಕೊಟ್ಟ ದಾರಿಯಲ್ಲಿ ನಾವೆಲ್ಲರೂ ಸಾಗಬೇಕು. ಸಾಂಖ್ಯಿಕ ಇಲಾಖೆಯಲ್ಲಿ ಸೇವೆ ಸಲ್ಲಿಸುವ ಅಧಿಕಾರಿಗಳು, ಸಿಬ್ಬಂದಿಗಳು ಸಾಂಖ್ಯಿಕ ಕ್ಷೇತ್ರಕ್ಕೆ ಸಣ್ಣ ಪ್ರಮಾಣದ ಕೊಡುಗೆ ನೀಡುವುದೇ ನಮ್ಮ ಜೀವಮಾನದಲ್ಲಿ ಮಾಡುವ ಸಾಧನೆ ಎಂದು ತಿಳಿಸಿದ ಅವರು, ಸಾಂಖ್ಯಿಕ ಇಲಾಖೆಯಲ್ಲಿ ಕಾರ್ಯನಿರ್ವಹಿಸುವವರಿಗೆ ಸಾಕಷ್ಟು ಅವಕಾಶಗಳಿದ್ದು, ಬಹುಮುಖ ವ್ಯಕ್ತಿತ್ವ ವಿಕಸನಕ್ಕೆ ಸಾಂಖ್ಯಿಕ ಇಲಾಖೆ ಸಹಾಯಕವಾಗಲಿದೆ ಎಂದು ಹೇಳಿದರು.

ಭದ್ರಾ ಮೇಲ್ದಂಡೆ ಯೋಜನೆಯ ಉಪನಿರ್ದೇಶಕಿ ಕುಮುದಾ ಮಾತನಾಡಿ, ಯಾವುದೇ ಒಂದು ಜನಸಾಮಾನ್ಯರ ಕಾರ್ಯಯೋಜನೆಗೆ ಸರ್ವೆಯ ಅಂಕಿ-ಅಂಶಗಳು ಪ್ರಮುಖ ಪಾತ್ರ ವಹಿಸುತ್ತವೆ. ಪ್ರೊ.ಪಿ.ಸಿ. ಮಹಾಲನೋಬಿಸ್ ಅವರ ಕೊಡುಗೆ ಇಂದಿನ ಕಾಲಕ್ಕೆ ಒಂದು ಇಲಾಖೆಯಾಗಿ, ಇಲಾಖೆಯಡಿ ಕಾರ್ಯನಿರ್ವಹಿಸುವ ಹಲವರಿಗೆ ಉದ್ಯೋಗ ದೊರಕಿದ್ದು ಸಹ ಅವರ ಮೇರು ಕೊಡುಗೆಯಾಗಿದೆ ಎಂದು ಹೇಳಿದರು.

ಜಿಲ್ಲಾ ಸಂಖ್ಯಾ ಸಂಗ್ರಹಣಾಧಿಕಾರಿ ಎನ್.ರವಿಕುಮಾರ ಮಾತನಾಡಿ, ರಾಷ್ಟ್ರೀಯ ಮಾದರಿ ಸಮೀಕ್ಷೆಯು ನಮ್ಮ ಜೀವನದ ತಳಮಟ್ಟದಿಂದ ಮೇಲಿನ ಹಂತದವರೆಗೂ ಒಂದು ಸಮೀಕ್ಷೆ ನಡೆಸಲಾಗುವುದು ಎಂದು ತಿಳಿಸಿದರು.

ಬಾಲಕರ ಸರ್ಕಾರಿ ಪದವಿ ಪೂರ್ವ ಕಾಲೇಜಿನ ಉಪನ್ಯಾಸಕ ಚನ್ನಬಸಪ್ಪ ಅವರು "75 years of National sample Survey" ವಿಷಯದ ಕುರಿತು ಉಪನ್ಯಾಸ ನೀಡಿದರು.

ಕಾರ್ಯಕ್ರಮದಲ್ಲಿ ಜಿಲ್ಲಾ ಸಂಖ್ಯಾ ಸಂಗ್ರಹಣಾಧಿಕಾರಿಗಳ ಕಚೇರಿಯ ಸಹಾಯಕ ಸಂಖ್ಯಾ ಸಂಗ್ರಹಣಾಧಿಕಾರಿ ಅಶ್ವತ್ಥಾಮ, ಸಹಾಯಕ ನಿರ್ದೇಶಕಿ ಶಶಿರೇಖಾ, ತೋಟಗಾರಿಕೆ ಇಲಾಖೆಯ ಶಶಿಧರ್ ಸೇರಿದಂತೆ ಸಾಂಖ್ಯಿಕ ಇಲಾಖೆಯ ಅಧಿಕಾರಿಗಳು ಮತ್ತು ಸಿಬ್ಬಂದಿ ಇದ್ದರು.

## ಗ್ಯಾಸ್ ಸಿಲಿಂಡರ್ ತುಂಬಿದ್ದ ಟ್ರಕ್‌ಗೆ ಬಸ್ ಡಿಕ್ಕಿ

# 18 ಕನ್ವಾರಿಯಾ ಯಾತ್ರಿಗಳ ಸಾವು

**ರಾಂಚಿ :** ಜಾರ್ಖಂಡ್‌ನ ದಿಯೋಘರ್ ಜಿಲ್ಲೆಯಲ್ಲಿ ಅಡುಗೆ ಅನಿಲ ಸಿಲಿಂಡರ್‌ಗಳನ್ನು ತುಂಬಿದ್ದ ಟ್ರಕ್‌ಗೆ ಬಸ್ ಡಿಕ್ಕಿ ಹೊಡೆದ ಪರಿಣಾಮ ಕನಿಷ್ಠ 18 ಕನ್ವಾರಿಯಾಗಳು ಸಾವನ್ನಪ್ಪಿದ್ದು, ಹಲವರು ಗಾಯಗೊಂಡಿರುವ ಘಟನೆ ಸಂಭವಿಸಿದೆ.

ಹಲವಾರು ಗಾಯಾಳುಗಳ ಸ್ಥಿತಿ ಗಂಭೀರವಾಗಿರುವುದರಿಂದ ಸಾವು-ನೋವುಗಳು ಹೆಚ್ಚಾಗುವ ಸಾಧ್ಯತೆ ಇದೆ. ಮೃತಪಟ್ಟವರ ಗುರುತು ಇನ್ನೂ ಪತ್ತೆಯಾಗಿಲ್ಲ. ಸದ್ಯ ಮೃತದೇಹಗಳನ್ನು ದಿಯೋಘರ್ ಸದರ್ ಆಸ್ಪತ್ರೆಗೆ ರವಾನಿಸಲಾಗಿದ್ದು, ಗಾಯಾಳುಗಳು ಚಿಕಿತ್ಸೆ ಪಡೆಯುತ್ತಿದ್ದಾರೆ. ಸ್ಥಳೀಯರ ಪ್ರಕಾರ, 20 ಕ್ಕೂ ಹೆಚ್ಚು ಭಕ್ತರು ಗಂಭೀರವಾಗಿ ಗಾಯಗೊಂಡಿದ್ದಾರೆ.

ಮೋಹನಪುರ ಪೊಲೀಸ್ ಠಾಣೆ ವ್ಯಾಪ್ತಿಯ ಜಮುನಿಯಾ ಅರಣ್ಯದ ಬಳಿ ಬೆಳಿಗ್ಗೆ 4.30




ರ ಸುಮಾರಿಗೆ ಅಪಘಾತ ಸಂಭವಿಸಿದೆ. ದಿಯೋಘರ್‌ನ ಮೋಹನಪುರದ ಜಮುನಿಯಾ ಅರಣ್ಯದ ಬಳಿ, ಕನ್ವಾರಿಯಾ ಕುಟುಂಬವನ್ನು ಹೊತ್ತೊಯ್ಯುತ್ತಿದ್ದ 32 ಆಸನಗಳ ಬಸ್, ಗ್ಯಾಸ್ ಸಿಲಿಂಡರ್‌ಗಳನ್ನು ಸಾಗಿಸುತ್ತಿದ್ದ ಟ್ರಕ್‌ಗೆ ಡಿಕ್ಕಿ ಹೊಡೆದ ಪರಿಣಾಮ ಕನಿಷ್ಠ ಐದು ಜನರು ಸಾವನ್ನಪ್ಪಿದ್ದಾರೆ ಮತ್ತು ಅನೇಕರು ಗಾಯಗೊಂಡಿದ್ದಾರೆ ಎಂದು ಸಿನ್ಹಾ ಸುದ್ದಿಗಾರರಿಗೆ ತಿಳಿಸಿದ್ದಾರೆ.

ಮೋಹನಪುರ ಪೊಲೀಸ್ ಠಾಣೆ ವ್ಯಾಪ್ತಿಯ ಜಮುನಿಯಾ ಅರಣ್ಯದ ಬಳಿ ಬೆಳಿಗ್ಗೆ 4.30 ರ ಸುಮಾರಿಗೆ ಈ ಅಪಘಾತ ಸಂಭವಿಸಿದೆ. ನನ್ನ ಲೋಕಸಭಾ ಕ್ಷೇತ್ರವಾದ ದಿಯೋಘರ್‌ನಲ್ಲಿ, ಪವಿತ್ರ ಶ್ರಾವಣ ಮಾಸದಲ್ಲಿ ಕನ್ವರ್ ಯಾತ್ರೆಯ ಸಮಯದಲ್ಲಿ ಬಸ್ ಮತ್ತು ಟ್ರಕ್ ನಡುವೆ ಸಂಭವಿಸಿದ ದುರಂತ ಅಪಘಾತದಲ್ಲಿ 18 ಭಕ್ತರು ಪ್ರಾಣ ಕಳೆದುಕೊಂಡರು ಎಂದು ಗೊಡ್ಡಾ ಸಂಸದ ನಿಶಿಕಾಂತ್ ದುಬೆ ಎಕ್ಸ್ ಪೋಸ್ಟ್‌ನಲ್ಲಿ ಬರೆದಿದ್ದಾರೆ.

ಬಾಬಾ ಬೈದ್ಯನಾಥ್ ಅವರ ಕುಟುಂಬಗಳಿಗೆ ಈ ದುಃಖವನ್ನು ಭರಿಸುವ ಶಕ್ತಿ ನೀಡಲಿ ಎಂದು ಪ್ರಾರ್ಥಿಸಿದ್ದಾರೆ. ದಿಯೋಘರ್ ಉಪವಿಭಾಗಾಧಿಕಾರಿ ರವಿ ಕುಮಾರ್ ಅವರ ಪ್ರಕಾರ, ಕನ್ವಾರಿಯರು ಬಾಸುಕಿನಾಥ್ ದೇವಸ್ಥಾನಕ್ಕೆ ಹೋಗುತ್ತಿದ್ದರು. ಕನ್ವಾರಿಯರು ಶಿವನ ಭಕ್ತರಾಗಿದ್ದಾರೆ.

# 30 ವರ್ಷಗಳ ಕಾಲ ಜ್ಞಾನವನ್ನು ಧಾರೆ ಎರೆದ ಶಿಕ್ಷಕಿ ಎಂ.ಜಿ. ಲತಾ

### ಹೊಸಕುಂದವಾಡ ಶಾಲೆಯ ಹಳೇ ವಿದ್ಯಾರ್ಥಿಗಳಿಂದ ಗುರುವಿಗೆ ವಂದನೆ



**ದಾವಣಗೆರೆ :** ಗು ಎಂದರೆ ಕತ್ತಲೆ, ಮತ್ತು ರು ಎಂದರೆ ಹೋಗಲಾಡಿಸುವವನು. ಹೀಗಾಗಿ, ಗುರು ಎಂದರೆ ಕತ್ತಲೆಯನ್ನು ಹೋಗಲಾಡಿಸುವ ಮತ್ತು ಜ್ಞಾನೋದಯದ ಮುನ್ಸೂಚಕನಾದ ಶಿಕ್ಷಕ.

ಈ ಮಾತಿಗೆ ತಕ್ಕಂತೆ 30 ವರ್ಷಗಳ ಕಾಲ ಜ್ಞಾನವನ್ನು ಧಾರೆ ಎರೆದ ಶಿಕ್ಷಕಿ ಎಂ.ಜಿ. ಲತಾ ದಾವಣಗೆರೆ ಸಮೀಪದ ಹೊಸಕುಂದವಾಡ ಶಾಲೆಯಲ್ಲಿ ಸುಧೀರ್ಘವಾಗಿ ಕರ್ತವ್ಯ ನಿರ್ವಹಿಸಿ ಅನೇಕ ವಿದ್ಯಾರ್ಥಿಗಳಿಗೆ ಜ್ಞಾನವನ್ನು ನೀಡಿ ಮಾರ್ಗದರ್ಶಕರಾಗಿ ಇಂದಿಗೂ ಸಹ ಅಚ್ಚುಮೆಚ್ಚಿನ ಶಿಕ್ಷಕರಾಗಿದ್ದಾರೆ.

ಎಂ.ಜಿ. ಲತಾ ಜೂನ್ 10, 1996 ರಂದು ದಾವಣಗೆರೆ ದಕ್ಷಿಣ ವಲಯದ ಹೊಸ ಕುಂದುವಾಡದಲ್ಲಿನ ಉನ್ನತಿಕರಿಸಿದ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಯಲ್ಲಿ ಮೊದಲು ಕರ್ತವ್ಯಕ್ಕೆ ಸೇರಿದ ಪ್ರಪ್ರಥಮ ಮಹಿಳಾ ಶಿಕ್ಷಕಿಯಾಗಿ ಮಕ್ಕಳಿಗೆ ಜ್ಞಾನ ಧಾರೆ ಎರೆದಿದ್ದಾರೆ. 2013 ರಂದು ಕುರ್ಕಿಯ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಗೆ ವರ್ಗಾವಣೆಗೊಂಡ ಇವರು ಆರು ವರ್ಷ ಸೇವೆ ಸಲ್ಲಿಸಿ ಪುನಹ ಹೊಸಕುಂದವಾಡದ ಶಾಲೆಗೆ ಮರಳಿ. ಆರು ವರ್ಷಗಳ ಕಾಲ ಕರ್ತವ್ಯ ನಿರ್ವಹಿಸಿದ್ದಾರೆ.

ಶಿಕ್ಷಕಿ ಲತಾ ಅವರು ನಮ್ಮನ್ನು ಬಿಟ್ಟು ಹೋಗ್ತಾರೆ ಎಂದು ಇಂದಿಗೂ ಹಳೆಯ ವಿದ್ಯಾರ್ಥಿಗಳು ಹಾಗೂ ಈಗಿನ ವಿದ್ಯಾರ್ಥಿಗಳು ಭಾವುಕತೆಯನ್ನು ವ್ಯಕ್ತಪಡಿಸುತ್ತಾರೆ. ಅವರ ಸೇವಾವಧಿಯಲ್ಲಿ ಮಾಡಿದಂತಹ ವಿದ್ಯಾರ್ಥಿಗಳಿಗೆ ಸೇವಾ ಮನೋಭಾವನೆ ಹಾಗೂ ವಿದ್ಯಾರ್ಥಿಗಳಿಗೆ ತಿಳಿಸುವಂತ ಪಾಠ ಪ್ರವಚನಗಳ ಬಗ್ಗೆ ಹಳೆಯ ವಿದ್ಯಾರ್ಥಿಗಳು ಇಂದಿಗೂ ಮೇಲು ಹಾಕುತ್ತಿದ್ದಾರೆ. ಹೊಸ ಕುಂದುವಾಡದಲ್ಲಿನ ಉನ್ನತಿಕರಿಸಿದ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಯಲ್ಲಿ ಶಿಕ್ಷಕಿ ಲತಾ ಅವರಿಂದ ಶಿಕ್ಷಣ ಪಡೆದು ಬದುಕು ಕಟ್ಟಿಕೊಂಡಿರುವ ಹಳೇ ವಿದ್ಯಾರ್ಥಿಗಳು ಜೊತೆಗೆ ಹೊಸ ಕುಂದುವಾಡ ಗ್ರಾಮಸ್ಥರು, ಎಸ್‌ಡಿಎಂಸಿ ಸದಸ್ಯರು ಲತಾ ಅವರ ನಿವೃತ್ತಿಯ ಹಿನ್ನೆಲೆ ಗೌರವ ಸನ್ಮಾನದೊಂದಿಗೆ ಬೀಳ್ಕೊಟ್ಟು, ಆಶೀರ್ವಾದ ಪಡೆದು ಮುಂದಿನ ಅವರ ಜೀವನ ಸುಖಕರವಾಗಿರಲಿ ಎಂದು ಹಾರೈಕೆಯೊಂದಿಗೆ ಗುರು ವಂದನೆ ಅರ್ಪಿಸಿದ್ದಾರೆ.ಅಲ್ಲದೇ ಅದೇ ಶಾಲೆಯಲ್ಲಿ 14 ವರ್ಷಗಳ ಕಾಲ ವಿದ್ಯಾರ್ಥಿಗಳಿಗೆ ಶಿಕ್ಷಣ ನೀಡಿ ಭವಿಷ್ಯದ ಬೆಳಕು ನೀಡಿ ನಿವೃತ್ತಿ ಹೊಂದಿದ ದೈಹಿಕ ಶಿಕ್ಷಕ ಹೆಚ್.ಎಸ್. ಮೋಹನ್ ಕುಮಾರ್ ಅವರನ್ನು ಸಹ ಶಿಕ್ಷಕಿ ಲತಾ ಅವರೊಂದಿಗೆ ಸನ್ಮಾನಿಸಿ ಗುರು ವಂದನೆ ಸಲ್ಲಿಸಲಾಯಿತು.

# ರಾಜಕೀಯ ಸಮಾನತೆಯಿದ್ದರೂ ಆರ್ಥಿಕ, ಶೈಕ್ಷಣಿಕ ಅಸಮಾನತೆ ಹೋಗಿಲ್ಲ: ಜಿ. ಬಿ. ವಿನಯ್ ಕುಮಾರ್

**ದಾವಣಗೆರೆ:** ದೇಶದಲ್ಲಿ ರಾಜಕೀಯ ಸಮಾನತೆ ಇದ್ದರೂ ಆರ್ಥಿಕ, ಸಾಮಾಜಿಕ, ಶೈಕ್ಷಣಿಕ ಅಸಮಾನತೆ ಹೋಗಿಲ್ಲ ಎಂದು ಇನ್ ಸೈಟ್ಸ್ ಐಎಎಸ್ ಸಂಸ್ಥೆ ಸಂಸ್ಥಾಪಕ ನಿರ್ದೇಶಕ ಹಾಗೂ ಸ್ವಾಭಿಮಾನಿ ಬಳಗದ ರಾಜ್ಯಾಧ್ಯಕ್ಷ ಜಿ. ಬಿ. ವಿನಯ್ ಕುಮಾರ್ ಬೇಸರ ವ್ಯಕ್ತಪಡಿಸಿದರು.

ಹರಿಹರ ತಾಲ್ಲೂಕಿನ ಧ.ರಾ.ಮ ಸರ್ಕಾರಿ ಸಂಯುಕ್ತ ಪದವಿ ಪೂರ್ವ ಕಾಲೇಜಿನಲ್ಲಿ ಕರ್ನಾಟಕ ದಲಿತ ಸಂಘರ್ಷ ಸಮಿತಿ ಹಾಗೂ ಇನ್ ಸೈಟ್ಸ್ ಐಎಎಸ್ ಇವರ ಸಹಯೋಗದೊಂದಿಗೆ ಏರ್ಪಡಿಸಿದ್ದ ಐಎಎಸ್, ಕೆಎಎಸ್ ಸ್ಪರ್ಧಾತ್ಮಕ ಪರೀಕ್ಷೆಗಳ ತಯಾರಿ ಕುರಿತು ಮಾರ್ಗದರ್ಶನ ಕಾರ್ಯಕ್ರಮದಲ್ಲಿ ಮುಖ್ಯ ಅತಿಥಿಗಳಾಗಿ ಪಾಲ್ಗೊಂಡು ಮಾತನಾಡಿದ ಅವರು, ಬಡವರು ಹಾಗೂ ಶ್ರೀಮಂತರು ಸೇರಿದಂತೆ ಯಾರೇ ಆದರೂ ಮತದ ಮೌಲ್ಯ ಒಂದೇ. ಆದ್ರೆ, ಸಾಮಾಜಿಕ, ಶೈಕ್ಷಣಿಕ, ಆರ್ಥಿಕ ಸಮಾನತೆ ಸಿಕ್ಕಿಲ್ಲ. ಇದು ಸಿಗಬೇಕಾದರೆ ಶಿಕ್ಷಣದಿಂದ ಮಾತ್ರ ಸಾಧ್ಯ ಎಂದು ಪ್ರತಿಪಾದಿಸಿದರು.



ಭಾರತದ ಸಂವಿಧಾನವು ಪ್ರತಿಯೊಬ್ಬರಿಗೂ ಸ್ವಾತಂತ್ರ್ಯ ನೀಡಿದೆ. ಆದರೆ, ಅಸಮಾನತೆ ಇನ್ನೂ ತಾಂಡವವಾಡುತ್ತಿದೆ. ಅವಕಾಶಗಳು ಮತ್ತು ಸ್ಥಾನಮಾನಗಳಲ್ಲಿ ಸಮಾನತೆ ಸಿಕ್ಕಾಗ ಮಾತ್ರ ಸಾಮಾಜಿಕ, ಆರ್ಥಿಕ ಮತ್ತು ರಾಜಕೀಯ, ಸಾಮಾಜಿಕ ನ್ಯಾಯ ಸಿಗುತ್ತದೆ. ಪ್ರತಿಯೊಬ್ಬ ನಾಗರಿಕರಿಗೂ ಸಮಾನವಾದ ಅವಕಾಶ ಸಿಗಬೇಕು. ಕಷ್ಟದಲ್ಲಿರುವವರಿಗೆ ಸಹಾಯ ಮಾಡುವ ಗುಣ ಪ್ರತಿಯೊಬ್ಬರೂ ಮೈಗೂಡಿಸಿಕೊಳ್ಳಬೇಕು. ನಾವು ಬೆಳೆಯಬೇಕಾದರೆ ಉತ್ತಮ ಸಂಸ್ಕೃತಿ, ಮಾನವೀಯ ಮೌಲ್ಯಗಳು, ಉತ್ತಮ ಗುಣಗಳು, ಉತ್ಕೃಷ್ಟ ಗುಣಮಟ್ಟದ ಶಿಕ್ಷಣ ಸಿಗಬೇಕು. ಶಿಕ್ಷಣ ಕ್ಷೇತ್ರದಲ್ಲಿನ ಅಸಮಾನತೆ ತೊಲಗಿದರೆ ಸಹಜವಾಗಿಯೇ ಒಂದೊಂದೇ ಅವಕಾಶ ಮತ್ತು ಸ್ಥಾನಮಾನಗಳು ಹುಡುಕಿಕೊಂಡು ಬರುತ್ತವೆ ಎಂದು ಅಭಿಪ್ರಾಯಪಟ್ಟರು.

ಬಡವರು, ಹಿಂದುಳಿದವರು, ಶೋಷಿತರು, ಅಲ್ಪಸಂಖ್ಯಾತರು ಸೇರಿದಂತೆ ಎಲ್ಲಾ ವರ್ಗದವರು ಸೇರಿ ಮತ ಹಾಕಿ ಶಾಸಕರು, ಸಂಸದರನ್ನಾಗಿ ಮಾಡುತ್ತೇವೆ. ನೀವು ಹಾಕಿದ ಮತಗಳು ಅಭಿವೃದ್ಧಿ, ಶೈಕ್ಷಣಿಕ ಪ್ರಗತಿ, ಜನರಜೀವನ ಮಟ್ಟ ಸುಧಾರಣೆ ಆಗಬೇಕು. ಶಾಸಕರು, ಸಂಸದರ ಅಧಿಕಾರ ಶ್ರೀಮಂತಿಕೆ, ಉದ್ಯಮ ಬೆಳೆಸಲು ಆಗಬಾರದು. ಜನರ ಸೇವೆಗಾಗಿಯೇ ಮೀಸಲಿಡುವಂತಾಗಬೇಕು. ಇಂದಿನ ಯುವಕ ಯುವತಿಯರೇ ಮುಂದಿನ ದೇಶದ ಭವಿಷ್ಯ ಬರೆಯುವವರು. ಮತ ಹಾಕುವಾಗ ಆಲೋಚಿಸಿ ಚಲಾಯಿಸಬೇಕು. ಅಧಿಕಾರದ ಗದ್ದುಗೆ ಏರಿ ಹೋದ ಮೇಲೆ ಸಂತ್ರಸ್ತರಾಗಬಾರದು. ಶಿಕ್ಷಣದ ಅಸಮಾನತೆಯಿಂದ ಹೊರ ಬಂದು ನೀವೂ ಕೂಡ ಐಎಎಸ್, ಐಪಿಎಸ್ ಅಧಿಕಾರಿಗಳಾಗಬೇಕು. ದೊಡ್ಡ ಉದ್ಯಮಿಗಳಾಗಬೇಕು ಎಂದು ಸಲಹೆ ನೀಡಿದರು.

ಬಿಎ, ಬಿಎಸ್ಸಿ, ಬಿಕಾಂ ಸೇರಿದಂತೆ ಪದವಿ ಪಡೆದ ಬಳಿಕ ಉದ್ಯೋಗಾವಕಾಶಗಳು ದಾವಣಗೆರೆಯಲ್ಲಿಯೇ ಸಿಗುತ್ತದೆ ಎಂದು–ಕೊಂಡು ಸುಮ್ಮನೆ ಕೂರಬಾರದು. ಪ್ರಯತ್ನ ಮಾಡಬೇಕು. ಸ್ಪರ್ಧಾತ್ಮಕ ಪರೀಕ್ಷೆಗಳಿಗೆ ಸಜ್ಜಾಗಿ. ಐಎಎಸ್, ಐಪಿಎಸ್, ಕೆಎಎಸ್ ಪರೀಕ್ಷೆಗಳ ಬಗ್ಗೆ ತಯಾರಿ ನಡೆಸಿ. ಪುಸ್ತಕಗಳು, ದಿನಪತ್ರಿಕೆಗಳನ್ನು ಹೆಚ್ಚಾಗಿ ಓದಿ. ಎಷ್ಟು ಪುಸ್ತಕಗಳನ್ನು ಓದುತ್ತೀರೋ ಅಷ್ಟು ಜ್ಞಾನ ಸಂಪಾದನೆ ಆಗುತ್ತದೆ. ಜೊತೆಗೆ ಜೀವನದಲ್ಲಿ ದೊಡ್ಡ ಗುರಿ ಸಾಧಿಸುವ ಪ್ರಯತ್ನಕ್ಕೆ ಪೂರಕವಾಗುವ ಜೊತೆಗೆ ಧೈರ್ಯವನ್ನೂ ತಂದುಕೊಡುತ್ತದೆ ಎಂದು ಹೇಳಿದರು.

ಪ್ರತಿಯೊಂದು ರಂಗಗಳಲ್ಲಿಯೂ ಜಾತಿ ಎನ್ನೋದು ಹಾಸುಹೊಕ್ಕಾಗಿದೆ. ರಾಜ–ಕಾರಣ, ಉದ್ಯಮ, ಸರ್ಕಾರಿ ಕೆಲಸ ಸೇರಿದಂತೆ ಯಾವ ವಿಚಾರಕ್ಕೂ ಬಂದರೂ ಜಾತಿಯಿಂದಲೇ ಗುರುತಿಸುವಂತ ಸ್ಥಿತಿ ನಿರ್ಮಾಣವಾಗಿದೆ. ಜಾತಿ ಅನ್ನೋದು ದೇಶ ಕಾಡುತ್ತಿರುವ ದೊಡ್ಡ ಪಿಡುಗು, ದೊಡ್ಡ ಗುರುತು ಆಗಿದೆ. ದೇಶವು ಜಾತ್ಯಾತೀತ ರಾಷ್ಟ್ರ ಎನ್ನುತ್ತೇವೆ. ಆದ್ರೆ, ಜಾತಿ ಗುರುತುವಿಕೆಯೇ ಇಲ್ಲಿ ಪ್ರಧಾನವಾಗಿದೆ. ಜಾತಿ ಮೀರಿ ಪ್ರಯತ್ನ ಮಾಡಿದಾಗ ಉತ್ತಮ ಸಾಧನೆ ಮಾಡಲು ಸಾಧ್ಯವಾಗುತ್ತದೆ ಎಂದು ತಿಳಿಸಿದರು.

ದಕ್ಷಿಣ ಭಾರತದಲ್ಲಿ ಮೊದಲ ಹಾಗೂ ದೇಶದಲ್ಲಿ 3 ನೇ ಸ್ಥಾನ ಪಡೆದಿರುವ ಐಎಎಸ್ ಕೋಚಿಂಗ್ ಸೆಂಟರ್ ಇನ್ ಸೈಟ್ಸ್ ಐಎಎಸ್ ಸಂಸ್ಥೆ. ಒಂದೂವರೆ ಸಾವಿರ ಜನರು ಐಎಎಸ್, ಐಪಿಎಸ್ ಅಧಿಕಾರಿಗಳನ್ನು ಕೊಟ್ಟ ಸಂಸ್ಥೆ ನನ್ನದು. ನಾನೇ ಮುಖ್ಯ ಮಾರ್ಗದರ್ಶಕ. ಈ ಸಂಸ್ಥೆ ಕಟ್ಟಿ ಬೆಳೆಸಲು ಕಾರಣವಾಗಿದ್ದೇ ಜ್ಞಾನ ಸಂಪಾದನೆ. ಇದು ಬಂದಿದ್ದು ಪುಸ್ತಕಗಳನ್ನು ಹೆಚ್ಚಾಗಿ ಓದಿದ್ದರಿಂದ. ನೀವೆಲ್ಲರೂ ಪುಸ್ತಕಗಳನ್ನು ಓದುವ ಜೊತೆಗೆ ಪಠ್ಯೇತರ ಚಟುವಟಿಕೆಗಳಲ್ಲಿಯೂ ಹೆಚ್ಚಾಗಿ ಪಾಲ್ಗೊಳ್ಳುವಂತಾಗಬೇಕು. ಪಠ್ಯ ಪುಸ್ತಕಗಳ ಹುಳುಗಳಾಗದೇ ಜ್ಞಾನಾರ್ಜನೆಯತ್ತ ಹೆಚ್ಚಿನ ಗಮನ ಹರಿಸಿ ಎಂದು ಕಿವಿಮಾತು ಹೇಳಿದರು.

ಆಂಗ್ಲ ಭಾಷೆ ಶಿಕ್ಷಕ ಬಿ. ಜಿ. ಸಿದ್ದಪ್ಪ ಕಾರ್ಯಕ್ರಮ ಉದ್ಘಾಟಿಸಿದರು. ಹರಿಹರದ ಧ.ರಾ.ಮ ಸರ್ಕಾರಿ ಪ.ಪೂ. ಕಾಲೇಜಿನ ಪ್ರಾಚಾರ್ಯ ರಾಜಶೇಖರಯ್ಯ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದರು. ಹರಿಹರ ತಾಲ್ಲೂಕಿನ ಡಿ.ಎಸ್.ಎಸ್. ಸಂಚಾಲಕ ಪಿ.ಜೆ. ಮಹಾಂತೇಶ್, ಸಮಾಜ ಸೇವಕರಾದ ಮುಗ್ದುಂ, ಉಪನ್ಯಾಸಕ ಬಿ.ಜಿ. ಸಿದ್ದಪ್ಪ, ಹರಿಹರದ ಲಕ್ಕಮ್ಮ ಶಿಕ್ಷಕಿಯವರ ಪುತ್ರ ಶಿವಕುಮಾರ್ ಸಂಬಳಿ ಮತ್ತಿತರರು ಹಾಜರಿದ್ದರು. ಐಶ್ವರ್ಯ ಪ್ರಾರ್ಥಿಸಿದರು. ಭೌತಶಾಸ್ತ್ರ ಉಪನ್ಯಾಸಕಿ ಕೆ. ಎಸ್. ಪುಷ್ಪಾ ನಿರೂಪಿಸಿದರು. ಚಂದ್ರನಾಯ್ಕ ವಂದಿಸಿದರು.

# ಬೆಂಗಳೂರು : ವಿದ್ಯಾರ್ಥಿನಿ ಮೇಲೆ ಅತ್ಯಾಚಾರವೆಸಗಿದ ಆರೋಪದಲ್ಲಿ ಇಬ್ಬರು ಉಪನ್ಯಾಸಕರು ಸೇರಿ ಮೂವರ ಬಂಧನ

**ಬೆಂಗಳೂರು :** ವಿದ್ಯಾರ್ಥಿನಿ ಮೇಲೆ ನಿರಂತರವಾಗಿ ಅತ್ಯಾಚಾರ ವೆಸಗಿದ ಆರೋಪದ ಮೇಲೆ ದಕ್ಷಿಣ ಕನ್ನಡ ಜಿಲ್ಲೆಯ ಮೂಡಬಿದರೆ ಕಾಲೇಜೊಂದರ ಇಬ್ಬರು ಉಪನ್ಯಾಸಕರು ಹಾಗೂ ಸ್ನೇಹಿತನನ್ನು ಮಾರತಹಳ್ಳಿ ಠಾಣೆ ಪೊಲೀಸರು ಬಂಧಿಸಿದ್ದಾರೆ.

ಭೌತಶಾಸ್ತ್ರ ಉಪನ್ಯಾಸಕ ನರೇಂದ್ರ, ಜೀವಶಾಸ್ತ್ರ ಉಪನ್ಯಾಸಕ ಸಂದೀಪ್ ಹಾಗೂ ಅವರ ಸ್ನೇಹಿತ ಅನೂಪ್ ಬಂಧಿತರು.ನೋಟ್ಸ್ ಕೊಡುವ ನೆಪದಲ್ಲಿ ವಿದ್ಯಾರ್ಥಿನಿ ಜೊತೆ ನರೇಂದ್ರ ಹತ್ತಿರವಾಗಿದ್ದು, ತದ ನಂತರದಲ್ಲಿ ಸಲಹೆ ಬೆಳೆಸಿಕೊಂಡು ಹಂತ ಹಂತವಾಗಿ ಚಾಟ್ ಮಾಡುತ್ತಿದ್ದನು.

ವಿದ್ಯಾರ್ಥಿನಿ ಬೆಂಗಳೂರಿಗೆ ಬಂದ ನಂತರವೂ ಚಾಟ್ ಮಾಡುವುದು ನಿಲ್ಲಿಸಿರಲಿಲ್ಲ. ನೋಟ್ಸ್ ಕೊಡುವ ನೆಪದಲ್ಲಿ ಮಾರತಹಳ್ಳಿಯಲ್ಲಿರುವ ಸ್ನೇಹಿತನ ರೂಂ ಗೆ ವಿದ್ಯಾರ್ಥಿನಿಯನ್ನು ಕರೆಸಿಕೊಂಡು ಅತ್ಯಾಚಾರವೆಸಗಿದ್ದು, ಈ ವಿಚಾರ ಯಾರಿಗೂ ಹೇಳದಂತೆ ಬೆದರಿಕೆ ಹಾಕಿದ್ದಾನೆ. ಅಲ್ಲದೇ ಉಪನ್ಯಾಸಕ ಸಂದೀಪ್ ಸಹ ವಿದ್ಯಾರ್ಥಿನಿ ಮೇಲೆ ಅತ್ಯಾಚಾರಕ್ಕೆ ಯತ್ನಿಸಿದ್ದಾಗ ಆಕೆ ವಿರೋಧ ವ್ಯಕ್ತಪಡಿಸಿದಾಗ ನರೇಂದ್ರನ ಜೊತೆ ನೀನು ಇರುವ ಫೋಟೋ, ವಿಡಿಯೋ ನನ್ನ ಬಳಿ ಇದೆ ಎಂದು ಬ್ಲ್ಯಾಕ್‌ಮೇಲ್ ಮಾಡಿ ಅತ್ಯಾಚಾರವೆಸಗಿದ್ದಾನೆ.

ಘಟನೆ ಬೆನ್ನಲ್ಲೇ ವಿದ್ಯಾರ್ಥಿನಿಯನ್ನು ಸಂಪರ್ಕಿಸಿದ ಅನೂಪ್, ನೀನು ನನ್ನ ರೂಂಗೆ ಬಂದಿರುವುದು ಸಿಸಿ ಟಿವಿಯಲ್ಲಿ ಸೆರೆಯಾಗಿದೆ ಎಂದು ಬೆದರಿಕೆ ಹಾಕಿ ಅತ್ಯಾಚಾರವೆಸಗಿದ್ದಾನೆ.ತನಗಾದ ಅನ್ಯಾಯವನ್ನು ಎದುರಿಸಲು ಸಾಧ್ಯವಾಗದೇ ವಿದ್ಯಾರ್ಥಿನಿ ಸುಮ್ಮನಾಗಿದ್ದಳು. ತದ ನಂತರದಲ್ಲಿ ಉಪನ್ಯಾಸಕರಿಂದಲೇ ಸಮಸ್ಯೆ ಹೆಚ್ಚಾದಾಗ ಪೋಷಕರ ಬಳಿ ಹೇಳಿಕೊಂಡಿದ್ದಾಳೆ. ಪೋಷಕರು ಮಹಿಳಾ ಆಯೋಗಕ್ಕೆ ಮಗಳನ್ನು ಕರೆದೊಯ್ದು ನಂತರ ಪೊಲೀಸರಿಗೆ ದೂರು ಕೊಡಿಸಿದ್ದಾರೆ.

ಪ್ರಕರಣ ದಾಖಲಿಸಿಕೊಂಡು ತನಿಖೆ ಕೈಗೊಂಡ ಪೊಲೀಸರು ಇದೀಗ ಮೂವರನ್ನು ಬಂಧಿಸಿ, ತನಿಖೆ ಮುಂದುವರೆಸಿದ್ದಾರೆ. ಈ ಹಿಂದೆಯೂ ಸಹ ಈ ಇಬ್ಬರು ಉಪನ್ಯಾಸಕರು ಕೆಲವು ವಿದ್ಯಾರ್ಥಿಗಳ ಮೇಲೆ ಅತ್ಯಾಚಾರವೆಸಗಿ ಬೆದರಿಕೆ ಹಾಕಿರುವ ಶಂಕೆ ವ್ಯಕ್ತವಾಗಿದ್ದು, ತನಿಖೆ ಮುಂದುವರೆದಿದೆ.

# ಶಾಲೆಯಲ್ಲಿ ಬಿಸಿಯೂಟ ಸೇವಿಸಿ 25 ಮಕ್ಕಳು ಅಸ್ವಸ್ಥ; ಆಸ್ಪತ್ರೆಗೆ ದಾಖಲು



**ಕಲಬುರಗಿ:** ಜೇವರ್ಗಿ ತಾಲೂಕಿನ ಮಾರಡಗಿ ಎಸ್.ಎ. ಗ್ರಾಮದ ಸರಕಾರಿ ಕಿರಿಯ ಪ್ರಾಥಮಿಕ ಶಾಲೆಯಲ್ಲಿ ಮಧ್ಯಾಹ್ನದ ಬಿಸಿಯೂಟ ಸೇವಿಸಿ ಸುಮಾರು 25 ವಿದ್ಯಾರ್ಥಿಗಳು ಅಸ್ವಸ್ಥರಾಗಿರುವುದು ಮಂಗಳವಾರ ನಡೆದಿದೆ. ಮಧ್ಯಾಹ್ನದ ಊಟದ ವಾಂತಿ, ಭೇದಿ ಮೊದಲಾದ ಲಕ್ಷಣಗಳು ಕಾಣಿಸಿಕೊಂಡಿದ್ದರಿಂದ ಮಕ್ಕಳನ್ನು ಆಸ್ಪತ್ರೆಗೆ ದಾಖಲಿಸಲಾಗಿದೆ. ಇದರಿಂದ ಗ್ರಾಮಸ್ಥರು, ಪೋಷಕರಲ್ಲಿ ಆತಂಕ ಮೂಡಿದೆ.

ಅಹಿತಕರ ಪರಿಸ್ಥಿತಿಯನ್ನು ಗಮನಿಸಿದ ಶಿಕ್ಷಕರು ಹಾಗೂ ಸ್ಥಳೀಯರು ಮಕ್ಕಳನ್ನು ತಕ್ಷಣವೇ ಗಂವಾರದ ಸರ್ಕಾರಿ ಪ್ರಾಥಮಿಕ ಆರೋಗ್ಯ ಕೇಂದ್ರಕ್ಕೆ ಕರೆತಂದು ಪ್ರಾಥಮಿಕ ಚಿಕಿತ್ಸೆ ಕೊಡಿಸಿದ್ದಾರೆ. ಬಳಿಕ ಹೆಚ್ಚಿನ ನಿಗಾ ಹಾಗೂ ಚಿಕಿತ್ಸೆಗಾಗಿ ಜೇವರ್ಗಿ ತಾಲೂಕು ಆಸ್ಪತ್ರೆಗೆ ಮಕ್ಕಳನ್ನು ದಾಖಲಿಸಲಾಗಿದೆ ಎಂದು ವೈದ್ಯಾಧಿಕಾರಿಗಳು ತಿಳಿಸಿದ್ದಾರೆ. ಈ ಘಟನೆ ಕುರಿತು ಮಾಹಿತಿ ತಿಳಿದ ತಕ್ಷಣ ತಾಲೂಕು ಆರೋಗ್ಯಾಧಿಕಾರಿ ಡಾ. ಮಹೇಶ್ ಶರ್ಮ, ತಹಸೀಲ್ದಾರ್ ಮಲ್ಲಣ್ಣ ಯಲಗೋಡ್, ಪಿಎಸ್‌ಐ ಗಜಾನನ ಬಿರಾದಾರ್, ಜೆಡಿಎಸ್ ಮುಖಂಡ ಬಸವರಾಜ ಪಾಟೀಲ್ ನರಿಬೋಳ ಹಾಗೂ ಕಾಂಗ್ರೆಸ್ ನಾಯಕ ರಾಜಶೇಖರ್ ಸೀರಿ ಮತ್ತಿತರರು ಆಸ್ಪತ್ರೆ ಭೇಟಿ ನೀಡಿ, ಮಕ್ಕಳು, ಪೋಷಕರಿಗೆ ಧೈರ್ಯ ತುಂಬಿದ್ದಾರೆ.ಈ ನಡುವೆ, ಆಹಾರದಲ್ಲಿ ವಿಷದ ಅಂಶ ಇದ್ದಿರಬಹುದೆಂಬ ಶಂಕೆಯ ಹಿನ್ನೆಲೆಯಲ್ಲಿ ಆಹಾರ ಮಾದರಿ ಪರೀಕ್ಷೆಗೆ ಕಳಿಸಲಾಗಿದ್ದು, ಲೋಪದೋಷ ಕಂಡುಬಂದಲ್ಲಿ ತಪ್ಪಿತಸ್ಥರ ವಿರುದ್ಧ ಕಾನೂನು ಕ್ರಮ ಕೈಗೊಳ್ಳಲಾಗುವುದು ಎಂದು ಅಧಿಕಾರಿಗಳು ತಿಳಿಸಿದ್ದಾರೆ.

# ಇಡಿ ದಾಳಿ ರಾಜಕೀಯ ಪ್ರೇರಿತ ಅಲ್ಲ : ಬಿಜೆಪಿ ಜಿಲ್ಲಾಧ್ಯಕ್ಷ ಸೀಕಲ್ ರಾಮಚಂದ್ರಗೌಡ

**ಚಿಕ್ಕಬಳ್ಳಾಪುರ :** ಅಕ್ರಮ ಆಸ್ತಿಗಳಿಕೆ, ವಿದೇಶಿ ವಿನಿಮಯ ನಿರ್ವಹಣೆ ಕಾಯಿದೆ ಉಲ್ಲಂಘನೆ ಆರೋಪದಡಿ ಬಾಗೇಪಲ್ಲಿ ಕ್ಷೇತ್ರದ ಶಾಸಕ ಎಸ್.ಎನ್.ಸುಬ್ಬಾರೆಡ್ಡಿ ಅವರ ನಿವಾಸ, ಕಚೇರಿಗಳ ಮೇಲೆ ಇಡಿ ದಾಳಿ ನಡೆಸಿದ್ದು ರಾಜಕೀಯ ಪ್ರೇರಿತ ಅಲ್ಲ, ಅದೊಂದು ಸಹಜ ಕಾನೂನು ಪ್ರಕ್ರಿಯೆ ಎಂದು ಬಿಜೆಪಿ ಜಿಲ್ಲಾಧ್ಯಕ್ಷ ಸೀಕಲ್ ರಾಮಚಂದ್ರಗೌಡ ತಿಳಿಸಿದರು. ಈ ಸಂಬಂಧ ಪತ್ರಿಕಾ ಹೇಳಿಕೆ ಬಿಡುಗಡೆ ಮಾಡಿ ಮಾತನಾಡಿರುವ ಅವರು ಇಡಿ ದಾಳಿಯಿಂದ ಆತಂಕ, ಭಯ ಬಿದ್ದಿರುವ ಶಾಸಕ ಎಸ್.ಎನ್.ಸುಬ್ಬಾರೆಡ್ಡಿ ಅವರು ಕಳೆದ ವಿಧಾನಸಭೆ ಚುನಾವಣೆ ಯಲ್ಲಿ ಬಿಜೆಪಿಯ ಪರಾಜಿತ ಅಭ್ಯರ್ಥಿಯ ಪಿತೂರಿಯಿಂದ ಇಡಿ ದಾಳಿ ನಡೆಸಿದೆ ಎಂದು ಆರೋಪಿಸಿರುವುದು ಸತ್ಯಕ್ಕೆ ದೂರ ಎಂದರು.

# ಅಹಿಂದ ಮತಬ್ಯಾಂಕ್ ಅಲ್ಲ, ಭಾರತದ ಆತ್ಮಸಾಕ್ಷಿಯ ಧ್ವನಿ: ಸಿಎಂ ಸಿದ್ದರಾಮಯ್ಯ

**ಬೆಂಗಳೂರು:** ಬಿಜೆಪಿ ತನ್ನ ಹುಟ್ಟಿನಿಂದಲೇ ಸಾಮಾಜಿಕ ನ್ಯಾಯದ ಪರವಾಗಿ ಇಲ್ಲ, ಮೀಸಲಾತಿ ಪರವಾಗಿಯೂ ಇಲ್ಲ. ಬಿಜೆಪಿ ನಿರಂತರವಾಗಿ ಸಾಮಾಜಿಕ ನ್ಯಾಯ ಮತ್ತು ಮೀಸಲಾತಿಯನ್ನು ವಿರೋಧಿಸುತ್ತಾ ಬಂದಿರುವುಕ್ಕೆ ಇಡೀ ದೇಶ ಸಾಕ್ಷಿಯಾಗಿದೆ. ಅಹಿಂದ ಒಂದು ಮತಬ್ಯಾಂಕ್ ಅಲ್ಲ, ಇದು ಭಾರತದ ಆತ್ಮಸಾಕ್ಷಿಯ ಧ್ವನಿ ಎಂದು ಸಿಎಂ ಸಿದ್ದರಾಮಯ್ಯ ಹೇಳಿದರು.

ಕೆಪಿಸಿಸಿ ಕಚೇರಿಯಲ್ಲಿ ನಡೆದ ಎಐಸಿಸಿ ಹಿಂದುಳಿದ ವರ್ಗಗಳ ಸಲಹಾ ಸಮಿತಿ ಸಭೆಯಲ್ಲಿ ಸಿಎಂ ಸಿದ್ದರಾಮಯ್ಯ ಅವರು ಮಾತನಾಡಿದರು. ಬಸವಣ್ಣ, ನಾಲ್ವಡಿ ಕೃಷ್ಣರಾಜ ಒಡೆಯರ್ ಮತ್ತು ದೇವರಾಜ ಅರಸ್ ಅವರ ಭೂಮಿಯಿಂದ, ಸಾಮಾಜಿಕ ನ್ಯಾಯವನ್ನು ಕೇವಲ ಘೋಷಣೆಯಾಗಿ ಅಲ್ಲ, ಜೀವಂತ ರಾಜಕೀಯ ಚೈತನ್ಯವಾಗಿ ಒಪ್ಪಿಕೊಂಡ ಈ ನಾಡಿನಿಂದ ನಿಮಗೆ ಆತ್ಮೀಯ ಸ್ವಾಗತ. ಇಂದು ನಾನು ಇಲ್ಲಿ ಕರ್ನಾಟಕದ




ಮುಖ್ಯಮಂತ್ರಿಯಾಗಿ ಮಾತ್ರವಲ್ಲ, ಸಾಮಾಜಿಕ ನ್ಯಾಯವನ್ನು ನಂಬುವ ಎಲ್ಲರ ಪ್ರತಿನಿಧಿಯಾಗಿ ನಿಂತಿದ್ದೇನೆ. ಬೆಂಗಳೂರಿನಲ್ಲಿ ನಡೆಯುತ್ತಿರುವ ಈ ಮೊದಲ AICC OBC ಸಲಹಾ ಸಮಿತಿಯ ಸಭೆ, ನಮ್ಮ ಒಗ್ಗಟ್ಟಿನ ಗುರಿಯನ್ನು ಸ್ಪಷ್ಟವಾಗಿ ತೋರಿಸುತ್ತದೆ. ದೇಶದಲ್ಲಿ ಒಡಕು ಮತ್ತು ಶ್ರೀಮಂತ ವರ್ಗದ ಜನರ ಶಕ್ತಿಗಳು ಸಮಾನತೆ ಮತ್ತು ಸೌಭ್ರಾತೃತ್ವದ ತತ್ವಗಳ ವಿರುದ್ಧ ಕತ್ತಿಗಳನ್ನು ಹರಿತಗೊಳಿಸುತ್ತಿರುವ ಈ ಸಂದರ್ಭದಲ್ಲಿ, ಭಾರತದ ಸಾಮಾಜಿಕ ಪ್ರಜಾಪ್ರಭುತ್ವದ ಅಡಿಪಾಯವನ್ನು ಬಲಗೊಳಿಸುವುದು ನಮ್ಮ ಕರ್ತವ್ಯ ಎಂದು ಹೇಳಿದರು.

ಇದು ಕೇವಲ ಹಿಂದುಳಿದ ವರ್ಗಗಳಿಗೆ ಮೀಸಲಾತಿಯ ಹೋರಾಟವಲ್ಲ. ಇದು ಗೌರವ, ಘನತೆ ಮತ್ತು ಅಧಿಕಾರಕ್ಕಾಗಿ ಹೋರಾಟ. ಆದ್ದರಿಂದ, ಒಡಕಿನ ಗುಂಪು ರಾಜಕೀಯವನ್ನು ಮೀರಿ, ಒಪ್ಪಿಗೆಯ ಚೈತನ್ಯದೊಂದಿಗೆ ಈ ಸಂವಾದವನ್ನು ಪ್ರಾರಂಭಿಸೋಣ. ಬಾಬಾಸಾಹೇಬ್ ಅಂಬೇಡ್ಕರ್ ಹೇಳಿದಂತೆ, 'ಶಿಕ್ಷಣ ಪಡೆಯಿರಿ, ಚೈತನ್ಯ ತುಂಬಿರಿ, ಸಂಘಟಿತರಾಗಿರಿ.' OBC, SC, ST ಮತ್ತು ಅಲ್ಪಸಂಖ್ಯಾತ ಸಮುದಾಯಗಳಾದ AHINDA ಸಮುದಾಯಗಳ ಜನರು ಗಣನೆಗೆ ಮಾತ್ರವಲ್ಲ, ಆಲಿಸಲ್ಪಡಬೇಕು. ಇಲ್ಲದಿದ್ದರೆ ಭಾರತವು ಎಂದಿಗೂ ನಿಜವಾದ ಪ್ರಜಾಪ್ರಭುತ್ವವಾಗಲು ಸಾಧ್ಯವಿಲ್ಲ ಎಂದು ತಿಳಿಸಿದರು.

ಹಿಂದುಳಿದ ವರ್ಗಗಳಿಗೆ ನ್ಯಾಯಕ್ಕಾಗಿ ನಮ್ಮ ಚಳವಳಿ ಹೊಸದಲ್ಲ. ಇದು ಶತಮಾನಗಳ ಹೋರಾಟ, ಸುಧಾರಕರ ಕನಸು, ರಾಜರ ಧೈರ್ಯ ಮತ್ತು ಬಡವರ ಸಹನಶಕ್ತಿಯಲ್ಲಿ ಬೇರೂರಿದೆ ಎಂದು ಹೇಳಿ, ಸಾಮಾಜಿಕ ನ್ಯಾಯಕ್ಕಾಗಿ ನಡೆದ ಕಾಂಗ್ರೆಸ್‌ನ ಐತಿಹಾಸಿಕ ಪ್ರಯತ್ನಗಳ ಬಗ್ಗೆ ವಿವರಿಸಿದರು.

ಸಭೆಯಲ್ಲಿ ಡಿಸಿಎಂ ಡಿ.ಕೆ. ಶಿವಕುಮಾರ್, ರಾಜಸ್ಥಾನದ ಮಾಜಿ ಸಿಎಂ ಅಶೋಕ್ ಗೆಹ್ಲೋಟ್, ಛತ್ತೀಸ್‌ಗಢದ ಮಾಜಿ ಸಿಎಂ ಭೂಪೇಶ್ ಬಘೇಲ್, ಪುದುಚೇರಿಯ ಮಾಜಿ ಸಿಎಂ ವಿ. ನಾರಾಯಣಸ್ವಾಮಿ, ಕರ್ನಾಟಕದ ಮಾಜಿ ಸಿಎಂ ವೀರಪ್ಪ ಮೊಯಿಲಿ, ಎಂಎಲ್‌ಸಿ ಬಿ.ಕೆ. ಹರಿಪ್ರಸಾದ್, ಎಐಸಿಸಿ ಪ್ರಧಾನ ಕಾರ್ಯದರ್ಶಿ, ಎಐಸಿಸಿ ಒಬಿಸಿ ವಿಭಾಗದ ರಾಷ್ಟ್ರೀಯ ಅಧ್ಯಕ್ಷ ಡಾ. ಅನಿಲ್ ಜೈಹಿಂದ್, ಎಐಸಿಸಿ ಹಾಗೂ ಕೆಪಿಸಿಸಿ ಸದಸ್ಯರು ಉಪಸ್ಥಿತರಿದ್ದರು.

# ಬ್ರಿಟನ್ ದೊರೆ ಚಾರ್ಲ್ಸ್ ಭೇಟಿಯಾದ ಭಾರತ ಕ್ರಿಕೆಟ್ ತಂಡ



**ಲಂಡನ್:** ಇಂಗ್ಲೆಂಡ್ ಕ್ರಿಕೆಟ್ ಸರಣಿಯ ಪ್ರವಾಸದಲ್ಲಿರುವ ಭಾರತದ ಪುರುಷರ ಮತ್ತು ಮಹಿಳಾ ತಂಡಗಳು ಸೆಂಟ್ ಜೇಮ್ಸ್ ಅರಮನೆಯಲ್ಲಿ ಬ್ರಿಟನ್ ದೊರೆ ಮೂರನೇ ಚಾರ್ಲ್ಸ್ ಅವರನ್ನು ಭೇಟಿಯಾಗಿ ಕ್ರಿಕೆಟ್ ಬಗ್ಗೆ ಚರ್ಚಿಸಿದವು. ಭೇಟಿಯ ಫೋಟೊಗಳನ್ನು ಬಿಸಿಸಿಐ ತನ್ನ ಅಧಿಕೃತ ಸಾಮಾಜಿಕ ಜಾಲತಾಣ ಖಾತೆಯಲ್ಲಿ ಹಂಚಿಕೊಂಡಿದೆ.

ಭಾರತ ಟೆಸ್ಟ್ ತಂಡದ ನಾಯಕ ಶುಭಮನ್ ಗಿಲ್, ಮಹಿಳಾ ತಂಡದ ನಾಯಕಿ ಹರ್ಮನ್‌ಪ್ರೀತ್ ಕೌರ್ ಸೇರಿದಂತೆ ಎಲ್ಲ ಆಟಗಾರರ ಮತ್ತು ತಂಡದ ಸಿಬ್ಬಂದಿ ಕೈಕುಲುಕಿದ ಚಾರ್ಲ್ಸ್, ಕೆಲಕಾಲ ತಮಾಷೆ ಮಾಡಿ ನಕ್ಕಿದ್ದಾ–ರೆ. ಈ ವೇಳೆ ಕ್ರಿಕೆಟ್ ಬಗ್ಗೆಯೂ ಚರ್ಚಿಸಿ ಮುಂಬರುವ ಪಂದ್ಯಗಳಿಗೆ ಶುಭ ಹಾರೈಸಿದ್ದಾರೆ. ಕೊನೆಯಲ್ಲಿ ಭಾರತ ತಂಡದೊಂದಿಗೆ ಫೋಟೊ ಕ್ಲಿಕ್ಕಿಸಿಕೊಂಡಿದ್ದಾರೆ. ಬಿಸಿಸಿಐ ಕಾರ್ಯದರ್ಶಿ ದೇವಜಿತ್ ಸೈಕಿಯಾ ಮತ್ತು ಉಪಾಧ್ಯಕ್ಷ ರಾಜೀವ್ ಶುಕ್ಲಾ ಕೂಡ ಉಪಸ್ಥಿತರಿದ್ದರು.

ಕಿಂಗ್ ಚಾರ್ಲ್ಸ್ ಅವರನ್ನು ಭೇಟಿಯಾಗಿರುವುದರ ಬಗ್ಗೆ ಶುಭಮನ್ ಗಿಲ್ ಸಂತೋಷ ವ್ಯಕ್ತಪಡಿಸಿದ್ದಾರೆ. ಮುಂದಿನ ಎರಡು ಪಂದ್ಯಗಳಲ್ಲಿ ಅದೃಷ್ಟ ನಿಮ್ಮದಾಗಲಿದೆ ಎಂದು ಚಾರ್ಲ್ಸ್ ಅವರು ಹಾರೈಸಿದ್ದಾಗಿ ಗಿಲ್ ಹೇಳಿದರು. ಭಾರತ ಮಹಿಳಾ ತಂಡ ಇಂಗ್ಲೆಂಡ್ ವಿರುದ್ಧದ 5 ಪಂದ್ಯಗಳ ಟಿ20 ಸರಣಿಯಲ್ಲಿ 3–2 ಅಂತರದ ಗೆಲುವು ಸಾಧಿಸುವ ಮೂಲಕ ಇದೇ ಮೊದಲ ಬಾರಿಗೆ ಇಂಗ್ಲೆಂಡ್ ನೆಲದಲ್ಲಿ ಚೊಚ್ಚಲ ಸರಣಿ ಗೆದ್ದು ಐತಿಹಾಸಿಕ ಸಾಧನೆ ಮಾಡಿತ್ತು. ಬುಧವಾರದಿಂದ ಮೂರು ಪಂದ್ಯಗಳ ಏಕದಿನ ಸರಣಿ ಆರಂಭವಾಗಲಿದೆ.

ಭಾರತ ಪುರುಷರ ತಂಡ ಇಂಗ್ಲೆಂಡ್ ವಿರುದ್ಧ 5 ಪಂದ್ಯಗಳ ಟೆಸ್ಟ್ ಸರಣಿಯಲ್ಲಿ ಸದ್ಯ 1–2 ಹಿನ್ನಡೆಯಲ್ಲಿದೆ. ಸೋಮವಾರ ಮುಕ್ತಾಯಗೊಂಡಿದ್ದ ಮೂರನೇ ಟೆಸ್ಟ್ ಪಂದ್ಯದಲ್ಲಿ 22 ರನ್‌ಗಳ ಸೋಲು ಕಂಡಿತ್ತು.


# ಬೆಳಗಾವಿ: ಮುಸ್ಲಿಂ ಶಿಕ್ಷಕನ ಓಡಿಸಲು ಮಕ್ಕಳು ಕುಡಿಯುವ ನೀರಿಗೆ ವಿಷ ಹಾಕಿದ ದುರುಳರು..!

**ಬೆಳಗಾವಿ:** ಬೆಳಗಾವಿ ಜಿಲ್ಲೆಯ ಸವದತ್ತಿ ತಾಲೂಕಿನ ಹೂಲಿಕಟ್ಟಿ ಗ್ರಾಮದಲ್ಲಿ 15 ದಿನಗಳ ಹಿಂದೆ ವಿಷ ನೀರು ಸೇವಿಸಿ 11 ಮಕ್ಕಳು ಅಸ್ವಸ್ಥಗೊಂಡಿದ್ದ ಪ್ರಕರಣದಲ್ಲಿ ಮೂವರು ಆರೋಪಿಗಳನ್ನು ಪೊಲೀಸರು ಬಂಧನಕ್ಕೊಳಪಡಿಸಿದ್ದಾರೆ. ಹೂಲಿಕಟ್ಟಿ ಗ್ರಾಮದ ಕೃಷ್ಣ ಯಮನಪ್ಪ ಮಾದರ (26), ಸಾಗರ ಸಕ್ರೆಪ್ಪ ಪಾಟೀಲ (29), ನಾಗನಗೌಡ ಬಸಪ್ಪ ಪಾಟೀಲ ಬಂಧಿತ ಆರೋಪಿಗಳು.ಪ್ರಕರಣ ಸಂಬಂಧ ಶನಿವಾರ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಪೊಲೀಸ್ ವರಿಷ್ಠಾಧಿಕಾರಿ ಡಾ.ಭೀಮಾಶಂಕರ ಗುಳೇದ ಅವರು, ಹೂಲಿಕಟ್ಟಿ ಗ್ರಾಮದಲ್ಲಿ ವಿಷನೀರು ಸೇವಿಸಿ ಅಸ್ವಸ್ಥಗೊಂಡಿದ್ದ ಸರ್ಕಾರಿ ಶಾಲೆ ಮಕ್ಕಳನ್ನು ಆಸ್ಪತ್ರೆಗೆ ಸೇರಿಸಿ ಚಿಕಿತ್ಸೆ ನೀಡಲಾಗಿತ್ತು. ಘಟನೆಯಲ್ಲಿ ಯಾವುದೇ ಪ್ರಾಣಹಾನಿ ಆಗಿರಲಿಲ್ಲ. ಆದರೂ ಪ್ರಕರಣವನ್ನು ಗಂಭೀರವಾಗಿ ಪರಿಗಣಿಸಿ ತನಿಖೆ ಮಾಡಿದ ಸವದತ್ತಿ ಪೊಲೀಸರು ಆರೋಪಿಗಳ ಕೃತ್ಯ ಬಯಲಿಗೆ ಎಳೆದಿದ್ದಾರೆ. ಶಾಲೆ ಮುಖ್ಯ ಶಿಕ್ಷಕ ಮುಸ್ಲಿಂ ಸಮುದಾಯಕ್ಕೆ ಸೇರಿದ್ದಾರೆ.

# ನಿವೃತ್ತಿ ನಂತರ ಯಾವುದೇ ಸರ್ಕಾರಿ ಹುದ್ದೆ ಸ್ವೀಕರಿಸಲ್ಲ

### ಸಿಜೆಐ ಬಿಆರ್ ಗವಾಯಿ ಶಪಥ

**ನವದೆಹಲಿ:** ಭಾರತದ ಮುಖ್ಯ ನ್ಯಾಯಮೂರ್ತಿ ಬಿ.ಆರ್. ಗವಾಯಿ ಅವರು ತಮ್ಮ ನಿವೃತ್ತಿಯ ನಂತರ ಯಾವುದೇ ಸರ್ಕಾರಿ ಹುದ್ದೆಯನ್ನು ಸ್ವೀಕರಿಸುವುದಿಲ್ಲ ಎಂದು ಘೋಷಿಸಿದರು. ಬದಲಿಗೆ ಅವರು ಸಮಾಲೋಚನೆ ಮತ್ತು ಮಧ್ಯಸ್ಥಿಕೆ ಕ್ಷೇತ್ರದಲ್ಲಿ ಕೆಲಸ ಮಾಡುವುದಾಗಿ ಹೇಳಿದ್ದಾರೆ.



ಮಹಾರಾಷ್ಟ್ರದ ಅಮರಾವತಿ ಜಿಲ್ಲೆಯಲ್ಲಿ ದಿವಂಗತ ಟಿ.ಆರ್. ಗಿಲ್ಡಾ ಸ್ಮಾರಕ ಇ–ಗ್ರಂಥಾಲಯದ ಉದ್ಘಾಟನಾ ಸಮಾರಂಭದಲ್ಲಿ ಸಿಜೆಐ ಗವಾಯಿ ಈ ಹೇಳಿಕೆ ನೀಡಿದ್ದು 2025ರ ನವೆಂಬರ್ 23 ರಂದು ನಿವೃತ್ತರಾಗಲಿದ್ದಾರೆ. ಅಮರಾವತಿಯ ತಮ್ಮ ಹುಟ್ಟೂರು ದಾರಾಪುರದಲ್ಲಿ ನಡೆದ ಕಾರ್ಯಕ್ರಮದಲ್ಲಿ ಮಾತನಾಡಿದ ಅವರು, ನವೆಂಬರ್ 24ರ ನಂತರ ನಾನು ಯಾವುದೇ ಸರ್ಕಾರಿ ಹುದ್ದೆಯನ್ನು ಸ್ವೀಕರಿಸುವುದಿಲ್ಲ. ಆದರೆ ನಾನು ಸಮಾಲೋಚನೆ ಮತ್ತು ಮಧ್ಯಸ್ಥಿಕೆ ಕೆಲಸದಲ್ಲಿ ತೊಡಗಿಸಿಕೊಳ್ಳುತ್ತೇನೆ ಎಂದು ಹೇಳಿದರು. ನಿವೃತ್ತಿಯ ನಂತರ ತಮ್ಮ ಹೆಚ್ಚಿನ ಸಮಯವನ್ನು ದಾರಾಪುರ, ಅಮರಾವತಿ ಮತ್ತು ನಾಗ್ಪುರದಲ್ಲಿ ಕಳೆಯಲು ಯೋಜಿಸುತ್ತಿರುವುದಾಗಿಯೂ ಅವರು ಹೇಳಿದರು.

ನ್ಯಾಯಾಂಗ ಸ್ವಾತಂತ್ರ್ಯದ ಬಗ್ಗೆ ಮಾತನಾಡಿದ ಅವರು, ನಿವೃತ್ತಿಯ ನಂತರ ಸರ್ಕಾರಿ ಹುದ್ದೆಯನ್ನು ಸ್ವೀಕರಿಸುವುದು ಅಥವಾ ಚುನಾವಣೆಗಳಲ್ಲಿ ಸ್ಪರ್ಧಿಸುವುದು ನೈತಿಕ ಕಳವಳಗಳನ್ನು ಹುಟ್ಟುಹಾಕುತ್ತದೆ. ಇದು ನ್ಯಾಯಾಂಗದ ಮೇಲಿನ ಸಾರ್ವಜನಿಕರ ವಿಶ್ವಾಸವನ್ನು ಕುಗ್ಗಿಸುತ್ತದೆ ಎಂದು ಸಿಜೆಐ ಗವಾಯಿ ಈ ಹಿಂದೆ ಹೇಳಿದ್ದರು. ನ್ಯಾಯಾಂಗದ ವಿಶ್ವಾಸಾರ್ಹತೆ ಮತ್ತು ಸ್ವಾತಂತ್ರ್ಯವನ್ನು ಕಾಪಾಡಿಕೊಳ್ಳಲು ನಿವೃತ್ತಿಯ ನಂತರ ಯಾವುದೇ ಸರ್ಕಾರಿ ಹುದ್ದೆಗಳನ್ನು ಸ್ವೀಕರಿಸುವುದಿಲ್ಲ ಎಂದು ಅವರು ತಮ್ಮ ಅನೇಕ ಸಹೋದ್ಯೋಗಿಗಳ ಜೊತೆ ಸಾರ್ವಜನಿಕವಾಗಿ ಪ್ರತಿಜ್ಞೆ ಮಾಡಿದ್ದಾರೆ. ದರ್ಯಾಪುರದಲ್ಲಿ ಹೊಸ ನ್ಯಾಯಾಲಯದ ಕಟ್ಟಡದ ಉದ್ಘಾಟನೆಯ ಸಂದರ್ಭದಲ್ಲಿ, ಸಿಜೆಐ ಗವಾಯಿ ನ್ಯಾಯಾಂಗ ರಚನೆಯ ವಿಕೇಂದ್ರೀಕರಣವನ್ನು ಪ್ರತಿಪಾದಿಸಿದರು. ಇದು ಜನರಿಗೆ ನ್ಯಾಯವನ್ನು ಸುಲಭವಾಗಿ ಪ್ರವೇಶಿಸುವಂತೆ ಮಾಡುತ್ತದೆ ಎಂದು ಹೇಳಿದರು. ನ್ಯಾಯಾಂಗ ಮೂಲಸೌಕರ್ಯ ಸಮಿತಿಯ ಮುಖ್ಯಸ್ಥರಾಗಿ, ಅಧಿಕಾರಶಾಹಿ ಅಡೆತಡೆಗಳು ಈ ಕಾರ್ಯಕ್ಕೆ ಅಡ್ಡಿಯಾಗುತ್ತಿದ್ದರೂ, ತಾಲೂಕು ಮತ್ತು ಜಿಲ್ಲಾ ಮಟ್ಟದಲ್ಲಿ ಹೊಸ ನ್ಯಾಯಾಲಯಗಳನ್ನು ಸ್ಥಾಪಿಸಲು ಒಂದು ಮಾದರಿಯನ್ನು ಸಿದ್ಧಪಡಿಸಿದ್ದೇನೆ ಎಂದು ಅವರು ಉಲ್ಲೇಖಿಸಿದರು.

# ಸಿವಿವಿ ದತ್ತಿ ದಿನಾಚರಣೆ ಅಂಗವಾಗಿ ನಡೆದ ಪತ್ರಕರ್ತರ ಕ್ರೀಡಾಕೂಟ



**ಚಿಕ್ಕಬಳ್ಳಾಪುರ :** ಜು.30ರಂದು ನಡೆಯಲಿರುವ ಪಂಚಗಿರಿ ವಿದ್ಯಾ ಸಂಸ್ಥೆಯ 29ನೇ ದತ್ತಿ ದಿನಾಚರಣೆ ಹಾಗೂ ಸಿ.ವಿ.ವೆಂಕಟರಾಯಪ್ಪಯವರ 110ನೇ ಜಯಂತಿಯ ಅಂಗವಾಗಿ ಮಂಗಳ ವಾರ ಪತ್ರಕರ್ತರಿಗಾಗಿ ಕ್ರೀಡಾಕೂಟ ಏರ್ಪಡಿಸಲಾಗಿತ್ತು. ಕೇವಲ ವರದಿಗಾರಿಕೆಗೆ ಸೀಮಿತವಾಗಿದ್ದ ಪತ್ರಕರ್ತರು ದಿನವಿಡೀ ಕ್ರೀಡಾಕೂಟಗಳಲ್ಲಿ ತಮ್ಮನ್ನು ತಾವು ತೊಡಗಿಸಿಕೊಂಡು ನಕ್ಕು ನಲಿದರು.

ನಗರ ಹೊರವಲಯದ ಸಿವಿವಿ ಕ್ಯಾಂಪಸ್‌ನ ಕ್ರೀಡಾಂಗಣದಲ್ಲಿ ಆಯೋಜಿಸಿದ್ದ ಕ್ರೀಡಾಕೂಟಕ್ಕೆ ಚಾಲನೆ ನೀಡಿ ಮಾತನಾಡಿದ ಕೆ.ವಿ ಶಿಕ್ಷಣ ಸಂಸ್ಥೆಗಳ ಅಧ್ಯಕ್ಷ ಕೆ.ವಿ.ನವೀನ್‌ಕಿರಣ್, ದತ್ತಿ ದಿನಾಚರಣೆ ಹಾಗೂ ಸಿವಿವಿಯವರ ಜಯಂತಿ ಅಂಗವಾಗಿ ಜುಲೈ ಪೂರ್ತಿ ವಿವಿಧ ರೀತಿಯ ಸಾಂಸ್ಕೃತಿಕ ಚಟುವಟಿಕೆಗಳು, ಗಿಡ ನೆಡುವುದು, ಕ್ರೀಡೆಕೂಟಗಳನ್ನು ಆಯೋಜಿಸುವ ಮೂಲಕ ಆಚರಿಸಲಾಗುತ್ತಿದ್ದು, ಪ್ರತಿವರ್ಷದಂತೆ ಪತ್ರಕರ್ತರಿಗೆ ಕ್ರೀಡಾಕೂಟ ಹಮ್ಮಿಕೊಳ್ಳಲಾಗಿತ್ತು.

ಪತ್ರಕರ್ತರಿಗಾಗಿ ಏರ್ಪಡಿಸಿದ್ದ ಕ್ರೀಡಾಕೂಟದಲ್ಲಿ 100 ಮೀ. ಓಟ, ಲಾಂಗ್ ಜಂಪ್, ಬ್ಯಾಸ್ಕೆಟ್ ಬಾಲ್ ಎಸೆತ, ಗುಂಡು ಎಸೆತ, ಬಕೆಟ್‌ಇನ್‌ದ ಬಾಲ್, ಮ್ಯೂಸಿಕಲ್ ಚೇರ್, ಕ್ರಿಕೆಟ್ ಸೇರಿದಂತೆ ಇನ್ನಿತರೆ ಕ್ರೀಡೆಗಳಲ್ಲಿ 50 ಕ್ಕೂ ಅಧಿಕ ಪತ್ರಕರ್ತರು ಭಾಗವಹಿಸಿ ಆಟವಾಡಿ ಸಂತೋಷಪಟ್ಟರು. ಇಂದಿನ ಕ್ರೀಡೆಗಳಲ್ಲಿ ಭಾಗವಹಿಸಿದ್ದ ವಿಜೇತರಿಗೆ ದತ್ತಿ ದಿನಾಚರಣೆಯಂದು ಬಹುಮಾನ ವಿತರಣೆ ಮಾಡುವ ಪದ್ಧತಿಯಿದ್ದು ಸಂಸ್ಥೆಯ ಅಧ್ಯಕ್ಷ ಕೆ.ವಿ.ನವೀನ್ ಕಿರಣ್ ಕ್ರೀಡಾಕೂಟ–ಕ್ಕೆ ಚಾಲನೆ ನೀಡಿ ಮಾತನಾಡಿದರು.

ಕ್ಯಾಂಪಸ್‌ನಲ್ಲಿ ಜು.23ರಂದು ನಡೆಯುವ ರಕ್ತದಾನ ಶಿಬಿರದಲ್ಲಿ ಕನಿಷ್ಠ 5 ಸಾವಿರ ಯೂನಿಟ್ ರಕ್ತ ಸಂಗ್ರಹಿಸುವ ಗುರಿಯನ್ನು ಹೊಂದಿದ್ದು, ಬೆಳಗ್ಗೆ 8 ಗಂಟೆಯಿಂದ ರಾತ್ರಿ 8 ಗಂಟೆಯವರೆಗೆ ನಡೆಯಲಿರುವ ಈ ಶಿಬಿರದಲ್ಲಿ ರಕ್ತದಾನಿಗಳ ಅಗತ್ಯವಿರುವ ಎಲ್ಲ ಸೌಲಭ್ಯಗಳನ್ನು ಹಮ್ಮಿಕೊಳ್ಳ ಲಾಗಿದೆ. ಅಲ್ಲದೆ ಬೆಳಗ್ಗೆಯಿಂದ ರಾತ್ರಿಯವರೆಗೆ ಅನ್ನದಾನ ನಡೆಯಲಿದೆ ಎಂದು ನುಡಿದರು.


ಕಳೆದ ಬಾರಿ ಆಯೋಜಿಸಲಾಗಿ ರಕ್ತದಾನ ಶಿಬಿರದಲ್ಲಿ 2145 ಯೂನಿಟ್ ರಕ್ತ ಸಂಗ್ರಹಿಸಿ ಇಡೀ ಜಿಲ್ಲೆಗೆ ಸಂಸ್ಥೆಯು ಹೆಚ್ಚು ರಕ್ತ ಸಂಗ್ರಹಿಸಿದ ದಾಖಲೆಯನ್ನು ಹೊಂದಿತ್ತು. ಬಳಿಕ ಸಚಿವ ಡಾ.ಎಂ.ಸಿ.ಸುಧಾಕರ್ ಅವರು ಆಯೋಜಿಸಿದ್ದ ಶಿಬಿರದಲ್ಲಿ 3246 ಯೂನಿಟ್ ಸಂಗ್ರಹಿಸಿದ್ದರು. ನಂತರ ಬಾಗೇಪಲ್ಲಿ ಶಾಸಕ ಸುಬ್ಬಾರೆಡ್ಡಿ ಅವರು ಆಯೋಜಿಸಿದ್ದ ಶಿಬಿರದಲ್ಲಿ 1700ಕ್ಕೂ ಹೆಚ್ಚು ಯುನಿಟ್ ರಕ್ತ ಸಂಗ್ರಹಿಸಲಾಗಿತ್ತು. ಇದೀಗ ಕೆವಿ ಶಿಕ್ಷಣ ಸಂಸ್ಥೆಯ ಶಿಬಿರದಲ್ಲಿ 5000 ಸಾವಿರ ಯುನಿಟ್ ರಕ್ತ ಸಂಗ್ರಹಿಸುವ ಗುರಿ ಹೊಂದಲಾಗಿದೆ ಎಂದರು.

ಜಿಲ್ಲೆಯ ಜನತೆ ಹಾಗೂ ಯುವಕರು ರಕ್ತದಾನ ಕುರಿತು ತೋರುತ್ತಿರುವ ಮುತುವರ್ಜಿಯಿಂದಾಗಿ ಮುಂಬರುವ ದಿನಗಳಲ್ಲಿ ಚಿಕ್ಕಬಳ್ಳಾಪುರ ಜಿಲ್ಲೆಯು ರಕ್ತದಾನಿಗಳ ರಾಜಧಾನಿಯಾಗಲಿದೆ ಎಂದ ಅವರು, ಶಿಬಿರಕ್ಕ ಇದುವರೆಗೂ 14ಕ್ಕೂ ಅಧಿಕ ಮಂದಿ ನೋಂದಾಯಿಸಿಕೊಂಡಿದ್ದು, ಹೆಚ್ಚಿನ ಸಂಖ್ಯೆಯಲ್ಲಿ ನಾಗರಿಕರು ಆಗಮಿಸಿ ರಕ್ತದಾನ ಮಾಡಬೇಕೆಂದು ಮನವಿ ಮಾಡಿದರು.

# ಶ್ರೀ ಒಪ್ಪತ್ತಿನ ಚೆನ್ನವೀರ ಮಹಾಸ್ವಾಮಿಗಳು ಲಿಂಗಾನುಸಂಧಾನದಿಂದ ಷಟ್‌ಸ್ಥಲವೇ ತಾನಾಗಿ ಶೂನ್ಯತತ್ತ್ವ ಸಂಪಾದಿಸಿದ್ದರು : ಡಾ. ಬಸವಕುಮಾರ ಸ್ವಾಮಿಗಳು

**ಚಿತ್ರದುರ್ಗ :** ಚಿತ್ರದುರ್ಗ ಬೃಹನ್ಮಠದ ಮುರುಘಾ ಪರಂಪರೆಯ 8ನೇ ಪೀಠಾಧಿಪತಿಗಳಾಗಿದ್ದ ಶ್ರೀ ಒಪ್ಪತ್ತಿನ ಚೆನ್ನವೀರ ಮಹಾಸ್ವಾಮಿಗಳು ಇಂಧನದಲ್ಲಿ ಅಗ್ನಿ ಇರುವಂತೆ, ಕುಸುಮದಲ್ಲಿ ಪರಿಮಳವಿರುವಂತೆ, ರತ್ನದಲ್ಲಿ ಕಾಂತಿಯಿರುವಂತೆ, ಲಿಂಗಾನುಸಂಧಾನದಿಂದ ಷಟ್‌ಸ್ಥಲವೇ ತಾನಾಗಿ ಶೂನ್ಯತತ್ತ್ವ ಸಂಪಾದಿಸಿದ್ದರು ಎಂದು ಶ್ರೀ ಜಗದ್ಗುರು ಮುರುಘರಾಜೇಂದ್ರ ಬೃಹನ್ಮಠ ಹಾಗೂ ಎಸ್.ಜೆ.ಎಂ. ವಿದ್ಯಾಪೀಠ ಆಡಳಿತ ಮಂಡಳಿಯ ಸದಸ್ಯರಾದ ಡಾ. ಬಸವಕುಮಾರ ಸ್ವಾಮಿಗಳು ಪರಂಪರೆಯನ್ನು ವಿಶ್ಲೇಷಿಸಿದರು.

ಶ್ರೀಗಳು ಇಲ್ಲಿನ ಶ್ರೀ ಜಗದ್ಗುರು ಮುರುಘರಾಜೇಂದ್ರ ಬೃಹನ್ಮಠದ ವತಿಯಿಂದ ಶ್ರಾವಣಮಾಸದ ಪ್ರಯುಕ್ತ ಮುರಿಗೆಯ ಶಾಂತವೀರ ಮುರುಘರಾಜೇಂದ್ರ ಮಹಾಸ್ವಾಮಿಗಳವರ ಲೀಲಾವಿಶ್ರಾಂತಿ ಸನ್ನಿಧಾನದ ಗದ್ದುಗೆಯಲ್ಲಿ ಏರ್ಪಡಿಸಿರುವ ವಚನಾಭಿಷೇಕ ಹಾಗೂ ಮುರುಘಾ ಪರಂಪರೆಯ ಗುರುಗಳ ಜೀವನ ದರ್ಶನ ಕಾರ್ಯಕ್ರಮದ 10ನೇ ದಿನದ ಕಾರ್ಯಕ್ರಮದ ಸಾನ್ನಿಧ್ಯ ವಹಿಸಿ, ಶ್ರೀಮಠದ ಗುರುಪರಂಪರೆಯ 8ನೇ ಪೀಠಾಧಿಪತಿಗಳು ನಡೆದು ತೋರಿದ ಹಾದಿಯ ಪಥವನ್ನು ಸ್ಮರಿಸುತ್ತ, ಷಟ್‌ಸ್ಥಲ ಅಂದರೆ ಆರು ಬರುತ್ತವೆ. ಭಕ್ತ, ಮಹೇಶ, ಪ್ರಸಾದಿ, ಶರಣ ಹಾಗೂ ಐಕ್ಯ. ಯಾವ ವ್ಯಕ್ತಿಯ ಮನಸ್ಸಿನಲ್ಲಿ ನಿರ್ಮಲವಾದ ಪ್ರೇಮ ಅಳವಟ್ಟಿರುತ್ತೋ ಅದು ಭಕ್ತಸ್ಥಿತಿ. ಮಹೇಶ ಅಂದರೆ ಭಗವಂತನಲ್ಲಿ ಅಗಾಧವಾದ ನಿಷ್ಠೆ, ಭಕ್ತಿ, ನಂಬಿಕೆ ಹೊಂದಿರುವುದು. ತಾನು ತೆಗೆದುಕೊಳ್ಳುವ ಎಲ್ಲವೂ ಅವನ ಅಂತಃಕರಣದಿಂದ ಬಂದಿದೆ ಎನ್ನುತ್ತ ತೆಗೆದುಕೊಳ್ಳುವುದೇ ಪ್ರಸಾದ ಭಾವ. ಶರಣಸ್ಥಲ ಎಂದರೆ ದೇಹಭಾವ ಬಿಟ್ಟು ದೇವತ್ವ ಹೊಂದುವ ಸ್ಥಿತಿ. ಈ ಜಗತ್ತಿನಲ್ಲಿ ಬಯಲಲ್ಲಿ ಬಯಲಾಗಿ ಈ ದೇಹ ಲಿಂಗದೊಳಗೆ ವಿಲೀನವಾಗುವುದೇ ಐಕ್ಯಸ್ಥಲದ ಸ್ಥಿತಿ. ಇವು ಷಟ್‌ಸ್ಥಲಗಳ ಸ್ವಭಾವಗಳಾಗಿವೆ. ಇವನ್ನು ಅಳವಡಿಸಿಕೊಂಡವರನ್ನು ಷಟ್‌ಸ್ಥಲ ಮೂರ್ತಿಗಳೆನ್ನಬಹುದು. ಅಂತಹ ಸ್ಥಿತಿಯನ್ನು ನಮ್ಮ ಬೃಹನ್ಮಠ ಪರಂಪರೆಯ ಮಹಾಮಹಿಮರು ಹೊಂದಿದ್ದರೆಂದು ನುಡಿದರು.




ಸಮ್ಮುಖ ವಹಿಸಿದ್ದ ಶ್ರೀಮಠದ ಸಾಧಕ ಶ್ರೀಗಳಾದ ಶ್ರೀ ಬಸವಮುರುಘೇಂದ್ರ ಸ್ವಾಮಿಗಳು ಮಾತನಾಡಿ, ಒಪ್ಪತ್ತಿನ ಚೆನ್ನವೀರ ಸ್ವಾಮಿಗಳು ಬಹುಬೇಗ ತೀವ್ರತರವಾದ ಕಠಿಣ ನಿರ್ಧಾರ ತೆಗೆದುಕೊಳ್ಳಲು ಕಾರಣ ಪರಿಸರ, ಪರಿಸ್ಥಿತಿ. ಗುರುಗಳ ಕರುಣೆ, ಅವರ ಆಚರಣೆ ಅಲ್ಲಮಪ್ರಭುಗಳ ವಚನ– ಬಯಲು ಬಯಲನೆ ಬಿತ್ತಿ ಕೊನೆಯಲ್ಲಿ ನಾ ನಿನ್ನ ನಂಬಿ ಬಯಲಾದೆ ಎನ್ನುವಂತೆ. ಒಪ್ಪತ್ತಿನ ಶ್ರೀಗಳು ಎಂದು ಹೆಸರು ಬರಲು ಕಾರಣ ದಿನದ 24 ಗಂಟೆಯಲ್ಲಿ ಒಮ್ಮೆಮಾತ್ರ ಪೂಜೆ ಪಾದೋದಕ ಪ್ರಸಾದ ತೆಗೆದುಕೊಳ್ಳುತ್ತಿದ್ದ ಕಾರಣ ಬಂದಿತ್ತೆಂಬ ಪ್ರತೀತಿ ಇದೆ. ಅವರ ನಿಲುವಿನಲ್ಲಿ ಏಕಾದಶ ಪ್ರಸಾದ ದಶವಿಧ ಪಾದೋದಕ, ಕರುಣೆ, ವಿನಯ, ಸಮತೆ, ದೃಢತೆ, ಸ್ಥಿರತೆ ಇವುಗಳು ಅವರು ಪಾಲಿಸಿದ ತತ್ವಗಳು. ಪಟ್ಟಾಧಿಕಾರ ಆದ ದಿನವೇ ಅವರು ತೆಗೆದುಕೊಂಡ ನಿಲುವು ಅಂದರೆ ಆರು ಸ್ಥಲಗಳಲ್ಲಿನ ಐಕ್ಯಸ್ಥಲವನ್ನು ಮೀರಿದ ಸ್ಥಿತಿ ನಿರ್ವಾಣ, ನಿರ್ಲಿಪ್ತ, ನಿರವಯಲು. ಈ ಸ್ಥಿತಿ ಬರಲು ಅಷ್ಟು ಸುಲಭ ಸಾಧ್ಯವಿಲ್ಲ. ಅಲ್ಲಮರು ಹೇಳುವಂತೆ ಸ್ವಾನುಭಾವದ ಸಮ್ಯಕ್‌ಜ್ಞಾನದ ಪರಮ ವೈರಾಗ್ಯಮೂರ್ತಿಯಾಗಿದ್ದರು ಒಪ್ಪತ್ತಿನ ಚೆನ್ನವೀರರು. ಪಟ್ಟಾಧಿಕಾರವಾದ 15 ದಿನಕ್ಕೆ ಲಿಂಗದೊಳಗಾಗಿ ತಿಳವಳ್ಳಿಯಲ್ಲಿ ಬಯಲಾದರು ಎಂದು ಇತಿಹಾಸದಿಂದ ತಿಳಿದುಬರುತ್ತದೆ ಎಂದು ಹೇಳಿದರು.

ವಿಷಯಾವಲೋಕನ ಮಾಡಿದ ಎಸ್.ಜೆ.ಎಂ. ಕೈಗಾರಿಕಾ ತರಬೇತಿ ಕೇಂದ್ರದ ಪ್ರಾಚಾರ್ಯರಾದ ಬೋರೇಶ್ ಅವರು ಮಾತನಾಡಿ, ವಿರಕ್ತರು ವೈಭವ, ಆಡಂಬರ ಇತ್ಯಾದಿಗಳನ್ನು ನೇರವಾಗಿ ಖಂಡಿಸಿ ನಡೆದವರು. ಒಪ್ಪತ್ತಿನ ಚೆನ್ನವೀರ ಶ್ರೀಗಳು ತಮಗೆ ಏರ್ಪಡಿಸಿದ್ದ ಪಟ್ಟಾಧಿಕಾರ ಸಂದರ್ಭದಲ್ಲಿ ಎಲ್ಲಾ ರೀತಿಯ ವೈಭವದ ಸಿದ್ಧತೆ ಮಾಡಿಕೊಂಡಿದ್ದ ಛತ್ರ–ಚಾಮರ, ಅಂದಳ ಬಿರುವಿನ ಉಗ್ಘಡಣೆ, ಬಹುವಾದ್ಯಗಳ ಬಹುಘೋಷ, ಚರವೇಂದ್ರ ಸಂಸೇವನ, ತಳಿರುತೋರಣ ಮುಂತಾದ ಅತಿ ವಿಜೃಂಭಣೆಯ ವ್ಯವಸ್ಥೆಯನ್ನು ತ್ಯಜಿಸಿ ಶೂನ್ಯಸಂಪಾದನೆ ನಮ್ಮ ಧ್ಯೇಯವಾಗಿರುವಾಗ ಅದೆಲ್ಲವನ್ನು ಕಡೆಗಣಿಸಿ ಪಲ್ಲಕ್ಕಿಯಿಂದ ಇಳಿದು ಉತ್ಸವಗಳು ಕೇವಲ ತೋರಿಕೆಯ ಅನಾವಶ್ಯಕವಾದ ಖರ್ಚು ಎಂದು ತಾವು ಧರಿಸಿದ್ದ ಉಡುಪನ್ನು ಕಳಚಿ ಕೇವಲ ಕೌಪೀನ ಧಾರಿಯಾಗಿ ಭಕ್ತರ ಪರಿಪರಿಯಾದ ಬೇಡಿಕೆಯನ್ನು ಪಕ್ಕಕ್ಕೆ ತಳ್ಳಿ ತಿಳುವಳ್ಳಿಯ ಕಡೆಗೆ ನಡೆದು ಅಲ್ಲೇ ಬಯಲಾದರೆಂಬುದು ಇತಿಹಾಸದಿಂದ ತಿಳಿಯಬಹುದಾಗಿದೆ ಎಂದರು.

ಈ ಸಂದರ್ಭದಲ್ಲಿ ಸೇವಾಕರ್ತರಾದ ಎಪಿಎಂಸಿ ಮಾರುಕಟ್ಟೆಯ ನಿವೃತ್ತ ಅಧಿಕಾರಿಯಾದ ಚಂದ್ರಪ್ಪ ಕುಟುಂಬ, ಭರಮಸಾಗರ ಎಸ್.ಎಂ.ಎಲ್. ಕುಟುಂಬದ ಪ್ರವೀಣ್, ಎಸ್.ಜೆ.ಎಂ. ಐ.ಟಿ.ಐ. ಕಾಲೇಜಿನ ಸಿಬ್ಬಂದಿ, ಬಸವರಾಜ ಕಟ್ಟಿ, ನಂದೀಶ್, ಭಕ್ತರು, ವಿದ್ಯಾರ್ಥಿಗಳು, ಎಸ್.ಜೆ.ಎಂ. ವಿದ್ಯಾಪೀಠದ ಶಾಲಾ–ಕಾಲೇಜುಗಳ ಕೆಲ ನೌಕರರು ಉಪಸ್ಥಿತರಿದ್ದರು.

ಜಮುರಾ ಕಲಾವಿದ ಉಮೇಶ್ ಪತ್ತಾರ್ ವಚನಪ್ರಾರ್ಥನೆ ಮಾಡಿದರು. ವನಜಾಕ್ಷಿ ಸ್ವಾಗತಿಸಿದರು. ಬೋಧಕ ಸತೀಶ್ ಕಾರ್ಯಕ್ರಮ ನಿರೂಪಿಸಿದರು.

# ಸೂಲೇನಹಳ್ಳಿಯಲ್ಲಿ ರಸ್ತೆ ತಡೆ ರೈತ ಸಂಘ ಪ್ರತಿಭಟನೆ



**ಮೊಳಕಾಲ್ಮೂರು :** ತಾಲೂಕಿನ ಸೂಲೇನಹಳ್ಳಿ ಗ್ರಾಮದಲ್ಲಿ ಚರಂಡಿ ನೀರು ಹಾದುಹೋಗುವಂತೆ ಚರಂಡಿ ನಿರ್ಮಿಸಿ ನಿವೇಶನ ರಹಿತರು ಹಾಗೂ ಶಾಲೆಗೆ ಸರ್ಕಾರಿ ರಿ.ಸ.ನಂ. 15/ಪಿ1 ರಲ್ಲಿ ಮೀಸಲಿಡಬೇಕೆಂದು ಆಗ್ರಹಿಸಿ ಕರ್ನಾಟಕ ಪ್ರಾಂತ ರೈತ ಸಂಘವು ತಾಲೂಕಿನ ಸೂಲೇನಹಳ್ಳಿ ಗ್ರಾಮದಲ್ಲಿ ರಸ್ತೆ ತಡೆ ಪ್ರತಿಭಟನೆ ನಡೆಸಲಾಯಿತು.

ಕರ್ನಾಟಕ ಪ್ರಾಂತ ರೈತ ಸಂಘದ ತಾಲೂಕು ಉಪಾಧ್ಯಕ್ಷ ದಾನಸೂರನಾಯಕ ಮಾತನಾಡಿ ತಾಲೂಕಿನ ಸೂಲೇನಹಳ್ಳಿ ಗ್ರಾಮದ ರಸ್ತೆ ಬಳಿಯಲ್ಲಿ ಚರಂಡಿ ನೀರು ಹಾದು ಹೋಗಲು ಚರಂಡಿ ನಿರ್ಮಿಸದೆ ಗ್ರಾಮ ಪಂಚಾಯಿತಿ, ತಾಲೂಕು ಪಂಚಾಯಿತಿ ಹಾಗೂ ಪ್ರಭಾವಿ ಜನಪ್ರತಿನಿಧಿಗಳು ನಿರ್ಲಕ್ಷ ವಹಿಸಲಾಗಿದೆ. ಈ ಗ್ರಾಮದಲ್ಲಿ ಕೆಲ ಕಾರಣಗಳಿಂದ ಚರಂಡಿ ನಿರ್ಮಿಸದೆ ಬಿಟ್ಟಿರುವುದರಿಂದ ಸಂಗ್ರಹವಾಗಿರುವ ಕಲಶ ನೀರಿನಿಂದ ದುರ್ವಾಸನೆ ಬೀರುವ ಜೊತೆಗೆ ಸೊಳ್ಳೆಗಳ ಹಾವಳಿ ಹೆಚ್ಚಾಗಿ ಡೆಂಗ್ಯೂ, ಮಲೇರಿಯಾ, ಟೈಫಾಯಿಡ್ ಜ್ವರ, ಸಾಂಕ್ರಾಮಿಕ ರೋಗಗಳಿಗೆ ಬಲಿಯಾಗಿ ಆಸ್ಪತ್ರೆಗಳಿಗೆ ಅಲೆಯುವಂತಾಗಿದೆ. ಹಾಗಾಗಿ ಸಂಬಂಧಿತ ತಾಲೂಕಿನ ಹಾನಗಲ್ ಗ್ರಾಮ ಪಂಚಾಯಿತಿಯು ಕೂಡಲೇ ಚರಂಡಿ ನೀರು ಹಾದು ಹೋಗುವಂತೆ ಚರಂಡಿ ನಿರ್ಮಾಣ ಮಾಡಬೇಕಾಗಿದೆ. ತಾಲೂಕಿನ ಸೂಲೇನಹಳ್ಳಿ ಗ್ರಾಮದಲ್ಲಿ ರಿ.ಸ.ನಂ. 15/ಪಿ1 ರಲ್ಲಿನ ಜಾಗವನ್ನು ಖಬರಸ್ಥಾನಕ್ಕೆ ಮಂಜೂರು ಮಾಡಿರುವ ಜಮೀನನ್ನು ರದ್ದು ಪಡಿಸಿ ವಸತಿ ರಹಿತರಿಗೆ ನಿವೇಶನ ಮತ್ತು ಸರ್ಕಾರಿ ಶಾಲೆ ನಿರ್ಮಾಣಕ್ಕೆ ಮೀಸಲಿಡಬೇಕಾಗಿದೆ. ಈ ಗ್ರಾಮ ವ್ಯಾಪ್ತಿಯಲ್ಲಿ ಹಲವಾರು ವರ್ಷಗಳಿಂದಲೂ ಸಾಗುವಳಿ ಮಾಡುತ್ತಾ ಫಾರಂ ನಂ. 50,53 ಹಾಗೂ 57 ರಲ್ಲಿ ಅರ್ಜಿ ಸಲ್ಲಿಸಿದ್ದರೂ ರೈತರನ್ನು ಒಕ್ಕಲೆಬ್ಬಿಸಿ ಬೇರೆ ಬೇರೆ ಇಲಾಖೆಗಳಿಗೆ ಜಮೀನು ಮಂಜೂರು ಮಾಡಿರುವುದನ್ನು ರದ್ದು ಪಡಿಸಿ ರೈತರ ಅರ್ಜಿಗಳನ್ನು ಸಕ್ರಮಗೊಳಿಸಿ ಹಕ್ಕುಪತ್ರ ನೀಡಬೇಕು. ಪ್ರಮುಖವಾಗಿ ಸ್ವಚ್ಛತೆಗೆ ಆದ್ಯತೆ ನೀಡಿ ಶೀಘ್ರವೇ ಚರಂಡಿ ನೀರು ಹಾದು ಹೋಗಲು ತ್ವರೀತವಾಗಿ ಚರಂಡಿ ನಿರ್ಮಾಣ ಮಾಡಬೇಕೆಂದು ಆಗ್ರಹಿಸಿದರು.

## ವೈಲ್ಡ್‌ಕ್ಯಾಟ್–ಸಿ. ಆಶ್ರಯದಲ್ಲಿ ಅಂತಾರಾಷ್ಟ್ರೀಯ ಹುಲಿ ದಿನಾಚರಣೆ

# ಹುಲಿವೇಷ ಕುಣಿತ: ಆದಿಚುಂಚನಗಿರಿ ಶಿಕ್ಷಣ ಸಂಸ್ಥೆಯ ತಂಡ ಪ್ರಥಮ



**ಚಿಕ್ಕಮಗಳೂರು:** ಅಂತಾರಾಷ್ಟ್ರೀಯ ಹುಲಿ ದಿನಾಚರಣೆಯ ಪ್ರಯುಕ್ತ ವೈಲ್ಡ್‌ಕ್ಯಾಟ್–ಸಿ. ಸಂಸ್ಥೆಯ ಆಶ್ರಯದಲ್ಲಿ ನಡೆದ ಹುಲಿವೇಷ ಕುಣಿತ ಸ್ಪರ್ಧೆಯಲ್ಲಿ ನಗರದ ಆದಿಚುಂಚನಗಿರಿ ಬಿಜಿನೆಸ್ ಮ್ಯಾನೇಜ್‌ಮೆಂಟ್ ಶಿಕ್ಷಣ ಸಂಸ್ಥೆಯ ಐವರ ತಂಡ ಪ್ರಥಮ ಸ್ಥಾನಕ್ಕೆ ಭಾಜನವಾಯಿತು.

ಈ ತಂಡವನ್ನು ವಿದ್ಯಾರ್ಥಿಗಳಾದ ಅನುಷಾ ಹೆಚ್.ಎಂ., ಸಿಂಪನಾ ಎ.ಸಿ., ಪ್ರೀತಿ, ಮೋನಿಷಾ ವಿ. ಹಾಗೂ ಅನನ್ಯ ಪ್ರತಿನಿಧಿಸಿದ್ದರು.

ಹುಲಿ ಮುಖದ ಚಿತ್ರ ಬಿಡಿಸುವ ಸ್ಪರ್ಧೆಯಲ್ಲಿ ಹಿರಿಯ ಪ್ರಾಥಮಿಕ ಶಾಲಾ ವಿಭಾಗದಲ್ಲಿ ನಗರದ ಸಂಜೀವಿನಿ ವಿದ್ಯಾಸಂಸ್ಥೆಯ ಜೆಸ್ವಾನ್(ಮುಖದ ಮೇಲೆ ಚಿತ್ರಧಾರಣೆಯ ಕಲಾವಿದ) ಹಾಗೂ ಪೃಥ್ವಿಕ್ (ಚಿತ್ರ ಬಿಡಿಸಿದ ಕಲಾವಿದ) ತಂಡ ಪ್ರಥಮ ಸ್ಥಾನ ಗಳಿಸಿದರೆ, ಹೈಸ್ಕೂಲು ವಿಭಾಗದಲ್ಲಿ ಅದೇ ವಿದ್ಯಾಸಂಸ್ಥೆಯ ಸೇವಂತಿಕಾ ವೈ.ಎಸ್., (ಚಿತ್ರ ಬಿಡಿಸಿದ ಕಲಾವಿದೆ), ದಿವ್ಯಡಿ.ಎನ್. (ಚಿತ್ರಧಾರಣೆ–ಯ ಕಲಾವಿದೆ) ತಂಡ ಪ್ರಥಮ ಸ್ಥಾನ ತನ್ನದಾಗಿಸಿಕೊಂಡಿತು.

ಇದೇ ಸ್ಪರ್ಧೆಯಲ್ಲಿ ಪದವಿ ಪೂರ್ವ ಕಾಲೇಜು ವಿಭಾಗದಲ್ಲಿ ಸೈಂಟ್ ಮೇರಿಸ್ ಇಂಟರ್ ನ್ಯಾಷನಲ್ ಸ್ಕೂಲ್‌ನ ಸಾಶಾ ಮೆಂಡೋನ್ಸಾ (ಚಿತ್ರ ಬಿಡಿಸಿದ ಕಲಾವಿದೆ) ಮತ್ತು ಪ್ರತೀಕ್ ಗಾದಿಯಾ(ಚಿತ್ರಧಾರಣೆಯ ಕಲಾವಿದೆ) ತಂಡ ಪ್ರಥಮ ಹಾಗೂ ಪದವಿ ಕಾಲೇಜಿನಲ್ಲಿ ಆದಿಚುಂಚನಗಿರಿ ಬಿಜಿನೆಸ್ ಮ್ಯಾನೇಜ್‌ಮೆಂಟ್ ಸಂಸ್ಥೆಯ ಧ್ರುವ ಕೆ.ಸಿ. (ಚಿತ್ರ ಬಿಡಿಸಿದ ಕಲಾವಿದ) ಮತ್ತು ಬಸವನಗೌಡ (ಚಿತ್ರಧಾರಣೆಯ ಕಲಾವಿದ) ತಂಡ ಮೊದಲ ಸ್ಥಾನ ಪಡೆಯಿತು.

ನಗರದ ಸುಭಾಶ್ಚಂದ್ರ ಬೋಸ್ ಜಿಲ್ಲಾ ಆಟದ ಮೈದಾನದ ಆವರಣದಲ್ಲಿರುವ ಸ್ಕೌಟ್ಸ್ ಮತ್ತು ಗೈಡ್ಸ್ ಭವನದಲ್ಲಿ ಈ ಸ್ಪರ್ಧೆಗಳು ವೈವಿಧ್ಯಪೂರ್ಣವಾಗಿ ನಡೆದಿದ್ದು, ಸ್ಪರ್ಧೆಗಳ ಬಳಿಕ ನಡೆದ ಸಮಾರಂಭದಲ್ಲಿ ವೈಲ್ಡ್‌ಕೇನ್ ಸಂಸ್ಥೆಯ ಮನೀಶ್ ಬಹುಮಾನಗಳನ್ನು ವಿತರಿಸಿದರು. ಸ್ಪರ್ಧೆಯಲ್ಲಿ ನಗರದ ಒಟ್ಟು 8 ಶಾಲಾ ಕಾಲೇಜುಗಳ 39 ವಿದ್ಯಾರ್ಥಿಗಳು ಅತ್ಯಂತ ಹುರುಪಿನಿಂದ ಭಾಗವಹಿಸಿದ್ದರು.

ಭದ್ರಾ ವೈಲ್ಡ್‌ಲೈಫ್ ಕನ್ಸರ್ವೇಶನ್ ಟ್ರಸ್ಟ್‌ನ ಮುಖ್ಯಸ್ಥ ಡಿ.ವಿ.ಗಿರೀಶ್, ಗೌತಮ್, ನೂತನ್, ಮಹಮ್ಮದ್ ಝುಬಿವುಲ್ಲಾ, ಸುಶ್ಮಿತ, ಮನೀಶ್, ರಜತ್ ಹಾಗೂ ಅಮರನಾಥ್ ಈ ಕಾರ್ಯಕ್ರಮವನ್ನು ವ್ಯವಸ್ಥಿತವಾಗಿ ನಿರ್ವಹಿಸಿದರು.

## ಯುವನಿಧಿಗೆ ಅರ್ಜಿ ಆಹ್ವಾನ

**ಚಿಕ್ಕಮಗಳೂರು, ಆ.2:** ಕರ್ನಾಟಕ ಸರ್ಕಾರದ ಯುವನಿಧಿ ಯೋಜನೆಯ ನೋಂದಣಿ ಪ್ರಕ್ರಿಯೆಯನ್ನು 2023, 2024 ಮತ್ತು 2025ರಲ್ಲಿ ತೇರ್ಗಡೆಯಾದ ಪದವೀಧರರಿಗೆ ಪ್ರತಿ ತಿಂಗಳು ರೂ.3000 ಮತ್ತು ಡಿಪ್ಲೊಮಾ ತೇರ್ಗಡೆಯಾದವರಿಗೆ ರೂ.1500 ನಿರುದ್ಯೋಗ ಭತ್ಯೆಯನ್ನು 2 ವರ್ಷಗಳವರೆಗೆ ನೀಡಲಾಗುವುದು. ಆಸಕ್ತ ಅರ್ಹ ಅಭ್ಯರ್ಥಿಗಳು ಆನ್‌ಲೈನ್‌ನಲ್ಲಿ ಅರ್ಜಿ ಸಲ್ಲಿಸಬಹುದು.

ಅರ್ಹತೆ: ಕರ್ನಾಟಕದಲ್ಲಿ ಕನಿಷ್ಠ 6 ವರ್ಷಗಳಿಂದ ವಾಸವಿರುವ 2023, 2024 ಮತ್ತು 2025ನೇ ವರ್ಷದಲ್ಲಿ ಪದವಿ, ಡಿಪ್ಲೊಮಾ ತೇರ್ಗಡೆಯಾದ ನಿರುದ್ಯೋಗಿಗಳು ಅಂದರೆ 180 ದಿನಗಳ ನಂತರವೂ ಉದ್ಯೋಗ ಪಡೆಯದ ಅಭ್ಯರ್ಥಿಗಳು, ಉನ್ನತ ವಿದ್ಯಾಭ್ಯಾಸ ಮುಂದುವರಿಸದೇ ಇರುವ ಅಭ್ಯರ್ಥಿಗಳು https://sevasindhugs.karnataka.gov.in ಅಥವಾ ಕರ್ನಾಟಕ ಒನ್, ಗ್ರಾಮ ಒನ್ ಮತ್ತು ಬಾಪೂಜಿ ಸೇವಾ ಕೇಂದ್ರಗಳಲ್ಲಿ ಉಚಿತವಾಗಿ ಅರ್ಜಿ ಸಲ್ಲಿಸಬಹುದು. ಹೆಚ್ಚಿನ ಮಾಹಿತಿಗೆ ಜಿಲ್ಲಾ ಉದ್ಯೋಗ ವಿನಿಮಯ ಕೇಂದ್ರ ಕಚೇರಿಯ ದೂರವಾಣಿ ಸಂಖ್ಯೆ (08262–295538) ಯನ್ನು ಸಂಪರ್ಕಿಸಬಹುದು.

# ಒಳಮೀಸಲಾತಿ ಜಾರಿ ವಿಳಂಬ : ಸಂಘಟನೆಗಳಿಂದ ಪ್ರತಿಭಟನೆ

**ಚಿಕ್ಕಮಗಳೂರು:** ಒಳಮೀಸಲಾತಿ ಜಾರಿಗೊಳಿಸದೇ ವಿಳಂಭ ಧೋರಣೆ ಅನುಸರಿಸುತ್ತಿರುವ ರಾಜ್ಯಸರ್ಕಾರ ಆಡಳಿತದ ವಿರುದ್ಧ ಮಾದಿಗ ಮತ್ತು ವಿವಿಧ ದಲಿತಪರ ಸಂಘಟನೆಗಳ ಒಕ್ಕೂಟದ ಮುಖಂಡರುಗಳು ನಗರದ ಆಜಾದ್ ಪಾರ್ಕ್ ವೃತ್ತದಲ್ಲಿ ಪ್ರತಿಭಟನೆ ನಡೆಸಿದರು.

ಈ ವೇಳೆ ಬ್ಲೂ ಭೀಮ್ ಆರ್ಮಿ ರಾಜ್ಯಾದ್ಯಕ್ಷ ಶೂದ್ರ ಶ್ರೀನಿವಾಸ್ ಮಾತನಾಡಿ, ಸರ್ವೋಚ್ಚ ನ್ಯಾಯಾಲಯವು ಪ.ಜಾತಿಯ ಒಳಮೀಸಲಾತಿ ಜಾರಿಗೊಳಿಸಿ ವರ್ಷ ಪೂರೈಸಿದರೂ ರಾಜ್ಯದ ಕಾಂಗ್ರೆಸ್ ಸರ್ಕಾರ ಮೀನಾಮೇಷ ಎಣಿಸುವ ಮೂಲಕ ಪರಿಶಿಷ್ಟರಿಗೆ ದ್ರೋಹವೆಸಗುತ್ತಿದೆ ಎಂದು ಆರೋಪಿಸಿದರು.

ಒಳಮೀಸಲಾತಿ ಸಂಬಂಧ ನ್ಯಾಯಾಲಯ ತೀರ್ಪನ್ನು ಜಾರಿಗೊಳಿಸಲು ಅನಗತ್ಯವಾಗಿ ರಾಜ್ಯಸರ್ಕಾರ ವಿಳಂಭ ಮಾಡುತ್ತಿದೆ. ಇದರಿಂದ ಸಮುದಾಯದಲ್ಲಿ ತೀವ್ರ ಅಸಮಾಧಾನ ಮತ್ತು ಆತಂಕಕ್ಕೆ ಕಾಣರವಾಗಿದೆ. ಜೊತೆಗೆ ವಿದ್ಯಾರ್ಥಿಗಳು, ಉದ್ಯೋಗಾಕಾಂಕ್ಷಿಗಳು, ಕಾರ್ಮಿಕರು ಮತ್ತು ಮಹಿಳೆಯರು ನ್ಯಾಯಯುತ ಹಕ್ಕುಗಳಿಂದ ವಂಚಿತರಾಗಿದ್ದಾರೆ ಎಂದರು.



ಸುಪ್ರೀಂಕೋರ್ಟ್ ತೀರ್ಪಿನಂತೆ ಹರಿಯಾಣ, ಆಂಧ್ರಪ್ರದೇಶ, ತೆಲಂಗಾಣ ಸರ್ಕಾರಗಳು ನಿಗಾವಹಿಸಿ ಆಯಾ ರಾಜ್ಯಗಳಲ್ಲಿ ಒಳಮೀಸಲಾತಿಯನ್ನು ಜಾರಿಗೊಳಿಸಿ ಸಾಮಾಜಿಕ ನ್ಯಾಯದ ವಿಷಯದಲ್ಲಿ ಮೇಲ್ಪಂಕ್ತಿ ತೋರಿದೆ. ಆದರೆ, ಕರ್ನಾಟಕದಲ್ಲಿ ವಿಳಂಭ ನೀತಿ ಅನುಸರಿಸಿ ಪರಿಶಿಷ್ಟ ಜಾತಿಗಳಲ್ಲಿ ಅದರಲ್ಲೂ ಮುಖ್ಯವಾಗಿ ಮಾದಿಗ ಮತ್ತು ಉಪಜಾತಿಗಳಲ್ಲಿ ಜನಾಕ್ರೋಶಕ್ಕೆ ವ್ಯಕ್ತವಾಗುತ್ತಿದೆ ಎಂದು ತಿಳಿಸಿದರು.

ದಸಂಸ ರಾಜ್ಯ ಸಮಿತಿ ಸದಸ್ಯ ಮರ್ಲೆ ಅಣ್ಣಯ್ಯ ಮಾತನಾಡಿ, ಪರಿಶಿಷ್ಟರ ಶ್ರೇಯೋಭಿವೃದ್ಧಿ ಸರ್ವೋಚ್ಚ ನ್ಯಾಯಾಲಯ ಒಳಮೀಸಲಾತಿ ಜಾರಿಗೊಳಿಸಿದೆ. ಹೀಗಾಗಿ ರಾಜ್ಯದಲ್ಲಿ ಸಂಪೂರ್ಣವಾಗಿ ಪರಿಶಿಷ್ಟ ಜಾತಿಗಳಿಗೆ ಒಳಮೀಸಲಾತಿಯನ್ನು ಅನುಷ್ಠಾನಗೊಳಿಸಬೇಕು. ಗಡುವಿನೊಳಗೆ ಬೇಡಿ–ಕೆ ಈಡೇರಿಸಲು ವಿಫಲವಾದರೆ ರಾಜ್ಯಾದ್ಯಂತ ಪ್ರತಿಭಟನೆ ನಡೆಸಬೇಕಾಗುತ್ತದೆ ಎಂದು ಎಚ್ಚರಿಸಿದರು.

ಒಳಮೀಸಲಾತಿ ಜಾರಿ ವಿಳಂಬ ತೋರಿದರೆ ಈ ತಿಂಗಳು ಆರಂಭವಾಗುವ ವಿಧಾನ ಮಂಡಲ ಅಧಿವೇಶನದಲ್ಲಿ ಸರ್ಕಾರ ನಿರ್ಲಕ್ಷ್ಯ ಬಗ್ಗೆ ಜನಾಕ್ರೋಶದ ಉಗ್ರಸ್ವರೂಪದ ತಾಳಲಿದೆ ಎಂದರು.

ಬಿಜೆಪಿ ಎಸ್ಸಿ ಮೋರ್ಚಾ ಜಿಲ್ಲಾಧ್ಯಕ್ಷ ಕುರುವಂಗಿ ವೆಂಕಟೇಶ್ ಮಾತನಾಡಿ, ಪರಿಶಿಷ್ಟ ಮೀಸಲಿಟ್ಟ ಅನುದಾನವನ್ನು ಗ್ಯಾರಂಟಿಗಳಿಗೆ ಬಳಸಿಕೊಂಡು ರಾಜ್ಯದ ಕಾಂಗ್ರೆಸ್ ಸರ್ಕಾರ ನಾಟಕವಾಡುತ್ತಿದೆ. ಇದೀಗ ನ್ಯಾಯಾಲಯ ತೀರ್ಪಿನ ಆದೇಶವನ್ನು ಪಾಲಿಸದೆ ಕಾಲ ಕಳೆದು ಪರಿಶಿಷ್ಟ ಸೌಲಭ್ಯವನ್ನು ಕಸಿದುಕೊಳ್ಳುತ್ತಿದೆ ಎಂದು ದೂರಿದರು.

ಈ ಸಂದರ್ಭದಲ್ಲಿ ದೌರ್ಜನ್ಯ ನಿಯಂತ್ರಣ ಸಮಿತಿ ಸದಸ್ಯರಾದ ಲಕ್ಷ್ಮಣ್, ರಮೇಶ್, ಮುಖಂಡರುಗಳಾದ ಜಗದೀಶ್, ಸಗನಪ್ಪ, ರಮೇಶ್, ವೀರಭದ್ರಯ್ಯ, ಹರೀಶ್‌ಮಿತ್ರ, ಚಂದ್ರಶೇಖರ್, ನವೀನ್, ಸುಜೇಂದ್ರ, ಹಾಲಪ್ಪ, ದಿವಾಕರ್, ಹೆಚ್.ಕೆ. ಕೇಶವಮೂರ್ತಿ ಮತ್ತಿತರರು ಹಾಜರಿದ್ದರು.

## ಹೋಂಸ್ಟೇ ನಿರ್ಮಾಣಕ್ಕೆ ಸಹಾಯಧನ

**ಚಿಕ್ಕಮಗಳೂರು, ಆ.2:** ಕೇಂದ್ರ ಸರ್ಕಾರದ ಬುಡಕಟ್ಟು ವ್ಯವಹಾರದ ಸಚಿವಾಲಯದ ಧರ್ತಿ ಅಬಾ ಜನಜಾತೀಯ ಗ್ರಾಮ ಉತ್ಕರ್ಷ ಅಭಿಯಾನ ಮತ್ತು ಪ್ರಧಾನ ಮಂತ್ರಿ ಜನಜಾತೀಯ ಉನ್ನತ ಗ್ರಾಮ ಅಭಿಯಾನದ ಅಧೀನದಲ್ಲಿ ಪ್ರವಾಸೋದ್ಯಮ ಸಚಿವಾಲಯದ ಸ್ವದೇಶ ದರ್ಶನ ಯೋಜನೆಯ ಉಪಯೋಜನೆಯಾಗಿ ಆದಿವಾಸಿ ಪ್ರದೇಶಗಳಲ್ಲಿ ಹೋಂಸ್ಟೇ ಅಭಿವೃದ್ಧಿಗೆ ಸಹಾಯಧನ ನೀಡಲಾಗುತ್ತಿದೆ.

ಜಿಲ್ಲೆಯ ಶೃಂಗೇರಿ ತಾಲ್ಲೂಕಿನ ನೆಮ್ಮಾರು ಗ್ರಾಮ ಪಂಚಾಯಿತಿಯ ಮಲನಾಡು ಗ್ರಾಮ, ಕೊಪ್ಪ ತಾಲ್ಲೂಕಿನ ಗುಡ್ಡೆ ತೋಟ ಗ್ರಾಮ ಪಂಚಾಯಿತಿಯ ಮೇಗೂರು ಗ್ರಾಮ, ಅಜ್ಜಂಪುರ ತಾಲ್ಲೂಕಿನ ಬೇಗೂರು ಗ್ರಾಮ ಪಂಚಾಯಿತಿಯ, ಭೂತನಕಾಡು ಗ್ರಾಮಗಳನ್ನು ಗುರುತಿಸಲಾಗಿದ್ದು, ಈ ಗ್ರಾಮಗಳನ್ನು ಅಭಿವೃದ್ಧಿಪಡಿಸಿ ಪ್ರವಾಸಿಗರಿಗೆ ಅನುಕೂಲವಾಗುವಂತೆ ಹೋಂಸ್ಟೇ ನಿರ್ಮಿಸಲು ರೂ.5 ಲಕ್ಷ, ನವೀಕರಿಸಲು ರೂ. 3 ಲಕ್ಷ ಸಹಾಯಧನ ನೀಡುವ ಯೋಜನೆಯನ್ನು ಪ್ರವಾಸೋದ್ಯಮ ಇಲಾಖೆಯಿಂದ ಅನುಷ್ಠಾನಗೊಳಿಸುತ್ತಿದ್ದು, ಬುಡಕಟ್ಟು ಸಮುದಾಯವಿರುವ ಗ್ರಾಮಗಳಲ್ಲಿ ಆತಿಥ್ಯ ಕ್ಷೇತ್ರದಲ್ಲಿ ಪ್ರವಾಸೋದ್ಯಮವನ್ನು ಉತ್ತೇಜಿಸುವುದು ಬುಡಕಟ್ಟು ಸಮುದಾಯದ ಸಂಸ್ಕೃತಿ, ಪರಂಪರೆ ಮತ್ತು ನೈಸರ್ಗಿಕ ಸಂಪತ್ತನ್ನು ಪ್ರವಾಸಿಗರಿಗೆ ಪರಿಚಯಿಸುವುದಾಗಿದೆ. ಗ್ರಾಮ ಪಂಚಾಯಿತಿಗಳ ವ್ಯಾಪ್ತಿಯ ಗ್ರಾಮಗಳ ಬುಡಕಟ್ಟು ಜನಾಂಗದವರು ಈ ಯೋಜನೆಯನ್ನು ಉಪಯೋಗಿಸಿಕೊಳ್ಳಲು ಅರ್ಹ ಆಸಕ್ತ ವ್ಯಕ್ತಿಗಳಿಂದ ಅರ್ಜಿ ಆಹ್ವಾನಿಸಲಾಗಿದೆ. ಅರ್ಜಿ ನಮೂನೆಯನ್ನು ಜಿಲ್ಲಾ ಪ್ರವಾಸೋದ್ಯಮ ಕಚೇರಿಯಲ್ಲಿ ಪಡೆದು ಅವಶ್ಯಕ ದಾಖಲೆಗಳಾದ ಜಾತಿ ಪ್ರಮಾಣ ಪತ್ರ (ಪರಿಶಿಷ್ಟ ಪಂಗಡ), ಆಧಾರ್ ಕಾರ್ಡ್ ಬ್ಯಾಂಕ್ ಪಾಸ್ ಬುಕ್, ಮನೆಯ ದಾಖಲೆ, ಮನೆಯ ಫೋಟೋ, ಡಿಕ್ಲರೇಶನ್ ಫಾರ್ಮ್, ಗ್ರಾಮ ಪಂಚಾಯಿತಿಯ ಎನ್.ಒ.ಸಿ., ಪೋಲೀಸ್ ಇಲಾಖೆಯ ಎನ್.ಒ.ಸಿ ದಾಖಲೆಗಳ ಜೆರಾಕ್ಸ್ ಪ್ರತಿಗಳೊಂದಿಗೆ ಪ್ರವಾಸೋದ್ಯಮ ಇಲಾಖೆಯ ಸಹಾಯಕ ನಿರ್ದೇಶಕರ ಕಚೇರಿಗೆ ಆಗಸ್ಟ್ 11 ರೊಳಗೆ ಅರ್ಜಿ ಸಲ್ಲಿಸಬಹುದು.

# ನರ್ಸಿಂಗ್ ವಿದ್ಯಾರ್ಥಿಗಳಿಗೆ ಬಸ್ ನಿಲುಗಡೆಗೆ ಚಾಲನೆ




**ಚಿಕ್ಕಮಗಳೂರು:** ಗ್ರಾಮೀಣ ಪ್ರದೇಶದ ನರ್ಸಿಂಗ್ ವಿದ್ಯಾರ್ಥಿಗಳಿಗೆ ಅನುಕೂಲವಾಗಲು ನಗರದ ಪಾರ್ವತಿಪುರದ ಆಶ್ರಯ ನರ್ಸಿಂಗ್ ಕಾಲೇಜು ಸಮೀಪದಲ್ಲಿ ಕೆ,ಎಸ್,ಆರ್,ಟಿ,ಸಿ, ಬಸ್ ನಿಲುಗಡೆಗೆ ಜಿಲ್ಲಾ ಗ್ಯಾರಂಟಿ ಪ್ರಾಧಿಕಾರ ದ ಅಧ್ಯಕ್ಷ ಎಂ.ಸಿ,ಶಿವಾನಂದಸ್ವಾಮಿ ಬುಧವಾರ ಹಸಿರು ನಿಶಾನೆ ತೋರಿ ಚಾಲನೆ ನೀಡಿ–ದರು.

ಬಳಿಕ ಮಾತನಾಡಿದ ಅವರು ಗ್ರಾಮಾಂತರ ಪ್ರದೇಶ ಸೇರಿದಂತೆ ವಿವಿಧೆಡೆಯಿಂದ ಆಗಮಿಸುವ ಸುಮಾರು 400 ಹೆಚ್ಚು ನರ್ಸಿಂಗ್ ವಿದ್ಯಾರ್ಥಿಗಳಿಗೆ ಈ ಹಿಂದೆ ಬಸ್ ನಿಲ್ದಾಣದಿಂದ ರಾಂಪುರ ಗ್ರಾಮದಲ್ಲಿ ನಿಲುಗಡೆಯಿತ್ತು, ಇದನ್ನರಿತು ಕಾಲೇಜಿನ ಅಧ್ಯಕ್ಷರ ಮನವಿ ಮೇರೆಗೆ ಕೆ,ಎಸ್,ಆರ್,ಟಿ,ಸಿ, ಇಲಾಖೆ ಗಮನಕ್ಕೆ ತಂದು ಮಕ್ಕಳ ಶೈಕ್ಷಣಿಕ ಬೆಳವಣಿಗೆ ದೃಷ್ಟಿ ಯಿಂದ ನಿಲುಗಡೆಗೆ ಅವಕಾಶ ಕಲ್ಪಿಸಲಾಗಿದೆ ಎಂದರು.

ನಗರ ಸೇರಿದಂತೆ ಗ್ರಾಮೀಣದಿಂದ ಬರುವ ವಿದ್ಯಾರ್ಥಿಗಳಿಗೆ ಕೆ,ಎಸ್,ಆರ್,ಟಿ,ಸಿ ಬಸ್ ನಿಲ್ದಾಣ ದಿಂದ ಕಾಲೇಜಿನ ಯಾವುದೇ ನಿಲುಗಡೆ ಇರಲಿಲ್ಲ. ರಾಂಪುರದಿಂದ ಇಳಿದು ನಡೆದುಕೊಂಡೇ ಕಾಲೇಜಿಗೆ ಬರಬೇಕಿತ್ತು, ಹೀಗಾಗಿ ಈ ನಿಲುಗಡೆ ವ್ಯವಸ್ಥೆ ಕಲ್ಪಿಸಿದ್ದು ವಿದ್ಯಾರ್ಥಿಗಳು ವಿನಿಯೋಗಿಸಿಕೊಳ್ಳಬೇಕು ಎಂದು ಸಲಹೆ ಮಾಡಿದರು,

ಕೆ.ಎಸ್.ಆರ್.ಟಿ.ಸಿ. ಇಲಾಖೆ ಮುಖ್ಯಾಧಿಕಾರಿ ಜಗದೀಶ್ ಮಾತನಾಡಿ ಮಕ್ಕಳ ಉಜ್ವಲ ಭವಿಷ್ಯ ಹಾಗೂ ವಿದ್ಯಾಭ್ಯಾ ಸಕ್ಕೆ ಅಡೆತಡೆಯಾಗದಂತೆ ಸೂಕ್ತ ಸಮಯಕ್ಕೆ ಕಾಲೇಜಿಗೆ ತೆರಳಲು ಕಾಲೇಜಿನ ಮನವಿ ಮೇರೆಗೆ ಬಸ್ ನಿಲುಗಡೆ ಸೌಲಭ್ಯ ಕಲ್ಪಿ ಸಲಾಗಿದೆ ಎಂದು ತಿಳಿಸಿದರು.

ಈ ಸಂದರ್ಭದಲ್ಲಿ ತಾಲ್ಲೂಕು ಗ್ಯಾರಂಟಿ ಪ್ರಾಧೀಕಾರದ ಅಧ್ಯಕ್ಷ ಎಂ,ಮಲ್ಲೇಶ್, ಆಶ್ರಯ ನರ್ಸಿಂಗ್ ಕಾಲೇಜಿನ ಅಧ್ಯಕ್ಷ ಡಾ॥ ಡಿ. ಎಲ್,ವಿಜಯ್ಕುಮಾರ್, ಸಂಸ್ಥೆಯ ಆಡಳಿತಾಧಿಕಾರಿ ಜಿ.ಪುರುಷೋತ್ತಮ್, ಕಾಲೇಜಿನ ಪ್ರಾಚಾರ್ಯರು, ಉಪ ನ್ಯಾಸಕರು, ಸಿಬ್ಬಂದಿ, ವಿದ್ಯಾರ್ಥಿಗಳು ಹಾಗೂ ಕೆ,ಎಸ್,ಆರ್,ಟಿ,ಸಿ ನೌಕ ರರು ಹಾಜರಿದ್ದರು.

# ಬಿಎಸ್‌ಎನ್‌ಎಲ್ ಸಮಸ್ಯೆ ಕುರಿತು ನಡೆದ ಸಭೆ



**ಚಿಕ್ಕಮಗಳೂರು:** ಮಲೆನಾಡು ಭಾಗದಲ್ಲಿ ಹೊಸ ಬಿ.ಎಸ್.ಎನ್.ಎಲ್ ಟವರ್ ನಿರ್ಮಾಣ ಹಾಗೂ ದುರಸ್ಥಿ ಸಂಬಂಧ ಬಿ.ಎಸ್.ಎನ್.ಎಲ್ ಕಚೇರಿಯಲ್ಲಿ ಅಧಿಕಾರಿಗಳೊಂದಿಗೆ ಬಿಎಸ್‌ಎನ್‌ಎಲ್ ಟಿಎಸಿ ಸದಸ್ಯ ವಿನೋದ್ ಬೊಗಸೆ ಸಭೆ ನಡೆಸಿ ಮುಂದಿನ ಕ್ರಮದ ಬಗ್ಗೆ ಚರ್ಚಿಸಿದರು.

ಬಾಳೆಹೊನ್ನೂರು ಹೋಬಳಿಯ ಕಡವಂತಿ, ಮಾಗುಂಡಿ, ಕಸ್ಕೆಮನೆ, ಹುಣಸೇಹಳ್ಳಿ, ಕೆರೆಹಾರ, ಸಿದ್ದಾಪುರಗಳಲ್ಲಿ ಬಿಎಸ್‌ಎನ್‌ಎಲ್ ಸಂಬಂಧಿಸಿದ ಸಮಸ್ಯೆಗಳಿಗೆ ತುರ್ತು ಕ್ರಮ ಕೈಗೊಳ್ಳುವ ಸಭೆಯಲ್ಲಿ ತೀರ್ಮಾನಿಸಲಾಯಿತು. ಈ ಸಂದರ್ಭದಲ್ಲಿ ಬಿಎಸ್‌ಎನ್‌ಎಲ್ ಡಿಜಿಎಂ ಬಾಲಾಜಿ, ಎಜಿಎಂಗಳಾದ ಗೋಪಾಲಕೃಷ್ಣ, ಜೋಸೆಫ್, ಆಶೀಯ ಸಿದ್ದಿಕ್, ಜೆಟಿಓ ಆನಂದ್‌ಸಿಂಗ್ ಹಾಜರಿದ್ದರು.

Published and Owned by : **PRATHIBHA M.S.,** Published at : No. 900/A2, Opp-Banashankri Temple Arch, Main Road, Shakti Nagara, Davanagere, Karnataka-577004. Printed by : **MALLIKARJUNAPPA H.G.** Printed at : SHIVA MEDIA HOUSE, No.900/A2, Opp-Banashankari Temple Arch, Main Road, Davanagere, Karnataka-577004. Editor: **MALLIKARJUNAPPA H.G.**